ಸಂಪುಟ: 4 | ಸಂಚಿಕೆ 99 | ಪುಟ: 4 | ₹: 4 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Read,Share and Follow - www.belagavivaradi.com
Vol-04 | Issue: 99 | Friday, 02, June, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಮೇಕೆದಾಟು ಯೋಜನೆ: ತಮಿಳುನಾಡಿನ ಸಹೋದರರ ಮೇಲೆ ಕೋಪವಾಗಲೀ, ದ್ವೇಷವಾಗಲೀ ಇಲ್ಲ; ಡಿಕೆ ಶಿವಕುಮಾರ್



ಬೆಂಗಳೂರು: ಮೇಕೆದಾಟುವಿನಲ್ಲಿ ಕಾವೇರಿ ನದಿಗೆ ಅಣೆಕಟ್ಟು ನಿರ್ಮಿಸುವುದಾಗಿ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆಯನ್ನು ಡಿಎಂಕೆ ನೇತೃತ್ವದ ತಮಿಳುನಾಡು ಸರ್ಕಾರ ಖಂಡಿಸಿದ್ದು, ಯೋಜನೆಯನ್ನು ವಿರೋಧಿಸುವುದಾಗಿ ತಿಳಿಸಿದೆ. ಇದೀಗ ಡಿಕೆ ಶಿವಕುಮಾರ್ ಟ್ವೀಟ್ ಮಾಡಿದ್ದು, ತಮಿಳುನಾಡಿನ ನಮ್ಮ ಸಹೋದರರ ಮೇಲೆ ಯಾವುದೇ ಕೋಪವಾಗಲೀ, ದ್ವೇಷವಾಗಲೀ ಇಲ್ಲ ಎಂದಿದ್ದಾರೆ.

ಸರಣಿ ಟ್ವೀಟ್ ಮಾಡಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಮೇಕೆದಾಟು ಯೋಜನೆಗೆ ಹಿಂದಿನ ಸರ್ಕಾರ ಒಂದು ಸಾವಿರ ಕೋಟಿ ರೂ. ಘೋಷಿಸಿದೆ. ಆದರೆ, ಖರ್ಚು ಮಾಡಿಲ್ಲ. ಮೇಕೆದಾಟು ಯೋಜನೆಯನ್ನು ಸಾಕಾರಗೊಳಿಸಲು ಆ ಹಣ ಬಳಕೆಯಾಗಲಿದೆ. ತಮಿಳುನಾಡಿನ ನಮ್ಮ ಸಹೋದರರ ಮೇಲೆ ಕೋಪವಾಗಲೀ, ದ್ವೇಷವಾಗಲೀ ಇಲ್ಲ. ಅವರೂ ನಮ್ಮ ಅಣ್ಣತಮ್ಮಂದಿರಂತೆ ಎಂದಿದ್ದಾರೆ.

ಕರ್ನಾಟದಲ್ಲಿ ನೆಲೆಸಿರುವ ತಮಿಳಿಗರು ಹಾಗೂ ತಮಿಳುನಾಡಿನಲ್ಲಿ ನೆಲೆಸಿರುವ ಕನ್ನಡಿಗರು ಕಾವೇರಿ ನೀರು ಕುಡಿಯುತ್ತಿದ್ದಾರೆ. ಕೋರ್ಟು, ಕಚೇರಿ ಅಲೆದದ್ದು ಸಾಕು. ಮೇಕೆದಾಟು ಯೋಜನೆಯಿಂದ ಎರಡೂ ರಾಜ್ಯಗಳಿಗೂ ಅನುಕೂಲವಾಗಲಿದೆ. ಕಾವೇರಿ ಪಾತ್ರದಲ್ಲಿರುವ ರೈತರಿಗೆ ನೀರಾವರಿ ಹಾಗೂ ಶ್ರೀಸಾಮಾನ್ಯರಿಗೆ ಕುಡಿಯುವ ನೀರು ಎರಡೂ ಲಭಿಸಲಿದೆ ಎಂದು ತಿಳಿಸಿದ್ದಾರೆ.

ನಾನು ತಮಿಳುನಾಡು ಸರ್ಕಾರಕ್ಕೆ ಮನವಿ ಮಾಡಿಕೊಳ್ಳುತ್ತೇನೆ. ಅಕ್ಕಪಕ್ಕದ ರಾಜ್ಯದವರು ಅಣ್ಣ ತಮ್ಮಂದಿರಂತೆ ಬದುಕೋಣ. ನಿಮ್ಮಲ್ಲಿ ಹೃದಯ ಶ್ರೀಮಂತಿಕೆ ಇದೆ. ನಮ್ಮಲ್ಲೂ ಹೃದಯ ಶ್ರೀಮಂತಿಕೆ ಇದೆ. ಒಬ್ಬರಿಗೊಬ್ಬರು ಸಹಕರಿಸುತ್ತಾ ಜೊತೆಯಾಗಿ ಸಾಗೋಣ ಎಂದು ಡಿಕೆ ಶಿವಕುಮಾರ್ ಮನವಿ ಮಾಡಿದ್ದಾರೆ.

## ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೆ ತರಲು ಸರ್ಕಾರ ಬದ್ಧ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ವಕೀಲರ ರಕ್ಷಣಾ ಕಾಯ್ದೆಯನ್ನು ಜಾರಿಗೆ ತರಲು ನಾವು ಬದ್ಧವಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದ್ದಾರೆ.

ಬೆಂಗಳೂರು ವಕೀಲರ ಸಂಘ ಬುಧವಾರ ಆಯೋಜಿಸಿದ್ದ ನ್ಯಾಯಮೂರ್ತಿ ಬಿ.ವೀರಪ್ಪ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು. ನಾನು ವಿರೋಧ ಪಕ್ಷದ ನಾಯಕನಾಗಿದ್ದಾಗ ವಕೀಲ ಸಮೂಹ ಈ ಕಾಯ್ದೆ ಜಾರಿಗೆ ಆಗ್ರಹಿಸಿ ಪ್ರತಿಭಟಿಸಿದ್ದರು. ಈ ಪ್ರತಿಭಟನೆಗೆ ನಾನೂ ಬೆಂಬಲ ಸೂಚಿಸಿ ವಿಧಾನಸಭೆಯಲ್ಲಿ ವಕೀಲ ಸಮೂಹದ ಪರವಾಗಿ ಧ್ವನಿ ಎತ್ತಿದ್ದೆ. ಈಗ ನಾವೇ ಅಧಿಕಾರಕ್ಕೆ ಬಂದಿದ್ದೇವೆ. ಈಗ ಈ ಕಾಯ್ದೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಬದ್ದವಾಗಿದ್ದೇವೆ ಎಂದು ಆಶ್ವಾಸನೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ವಕೀಲರ ಸಂಘದ ಸದಸ್ಯರು "ವಕೀಲರ ವಿಮೆ ಯೋಜನೆಯನ್ನೂ ಜಾರಿಗೆ ತರುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಈ ಮನವಿಗೆ ಸ್ಪಂದಿಸಿದ ಸಿಎಂ ಈ ಬಗ್ಗೆಯೂ ಸಮಗ್ರವಾಗಿ ಚರ್ಚಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಕಾಯ್ದೆ ಜಾರಿಗೆ ಆಗ್ರಹಿಸಿ ವಕೀಲ ಸಮೂಹ ಪ್ರತಿಭಟನೆ ನಡೆಸಿತ್ತು. ಅಂದು ವಿರೋಧ ಪಕ್ಷದ ನಾಯಕನಾಗಿದ್ದ ನಾನು ಪ್ರತಿಭಟನೆಗೆ ಬೆಂಬಲ ಸೂಚಿಸಿದ್ದೆ. ವಿಧಾನಸಭೆಯಲ್ಲಿ ಧ್ವನಿ ಎತ್ತಿದ್ದೆ. ಈಗ ನಾವೇ ಅಧಿಕಾರಕ್ಕೆ ಬಂದಿದ್ದೇವೆ. ಹಾಗಾಗಿ, ಕಾಯ್ದೆ ಜಾರಿಗೆ ತರಲು ಕ್ರಮಕೈಗೊಳ್ಳಲಾಗುವುದು. ವಕೀಲರ ಸಂಘದ ಕೋರಿಕೆಯಂತೆ ವಕೀಲರ ವಿಮಾ ಯೋಜನೆಯನ್ನೂ ಜಾರಿಗೆ ತರಲಾಗುವುದು ಎಂದರು.

ಸ್ಥಾನ ಯಾವುದೇ ಇರಲಿ, ಸ್ಪಂದಿಸುವ ಗುಣ ಇಲ್ಲದಿದ್ದರೆ ಸಮಾಜದ ಕಡೆಯ ಮನುಷ್ಯನಿಗೆ ನ್ಯಾಯ ದೊರಕಿಸುವುದು ಅಸಾಧ್ಯ. ಉನ್ನತ ಅವಕಾಶಗಳು ಸಿಕ್ಕಾಗ ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಬೇಕು. ಪ್ರಾಮಾಣಿಕವಾಗಿ ಜನಸೇವೆ ಮಾಡಿದರೆ ಆ ಸ್ಥಾನದ ಘನತೆ ಹೆಚ್ಚುತ್ತದೆ. ಜನರ ಸಂಕಷ್ಟಗಳ ಅರಿವಿರುವ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಉತ್ತಮ ನ್ಯಾಯದಾನದ ಮೂಲಕ ತಮ್ಮ ಬದುಕು ಹಾಗೂ ವೃತ್ತಿಯನ್ನು ಸಾರ್ಥಕಗೊಳಿಸಿದ್ದಾರೆ. ವೀರಪ್ಪ ಅವರು ದಕ್ಷತೆ, ಪ್ರಾಮಾಣಿಕತೆ ಜತೆಗೆ, ವಕೀಲ ಸಮೂಹದ ಪ್ರೀತಿಯನ್ನೂ ಗಳಿಸಿದ್ದರು ಎಂದು ಶ್ಲಾಘಿಸಿದರು.

## ಎಸಿಬಿ ರದ್ದುಪಡಿಸಿದ ಜನ ಸಾಮಾನ್ಯರ ನ್ಯಾಯಾಧೀಶ ವೀರಪ್ಪಗೆ ಬೀಳ್ಕೊಡುಗೆ



ಬೆಂಗಳೂರು: ಜನ ಸಾಮಾನ್ಯರ ನ್ಯಾಯಮೂರ್ತಿ ಎಂದೇ ಖ್ಯಾತ ಪಡೆದಿದ್ದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ನಿವೃತ್ತಿಯಾಗಿದ್ದು, ಅವರಿಗೆ ಕರ್ನಾಟಕ ಹೈಕೋರ್ಟ್ನ ವಕೀಲರ ಸಂಘ ಪ್ರೀತಿಯಿಂದ ಬೀಳ್ಕೊಟ್ಟಿದೆ.

ಬೆಂಗಳೂರು ವಕೀಲ ಸಂಘ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ನಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ನ್ಯಾಯಮೂರ್ತಿ ಬಿ. ವೀರಪ್ಪ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು.

ವಿಚ್ಛೇದನಕ್ಕೆ ಪತಿ-ಪತ್ನಿ ಇಬ್ಬರ ಸಮ್ಮತಿಯೂ ಅಗತ್ಯ: ಹೈಕೋರ್ಟ್

ವೀರಪ್ಪ ಅವರು, ರಾಜ್ಯದಲ್ಲಿ ಈ ಹಿಂದೆ ಕಾಂಗ್ರೆಸ್ ಸರ್ಕಾರ ಸ್ಥಾಪಿಸಿದ್ದ ಭ್ರಷ್ಟಾಚಾರ ನಿಗ್ರಹ ದಳ(ಎಸಿಬಿ)ವನ್ನು ರದ್ದುಪಡಿಸಿ, ಭ್ರಷ್ಟಾಚಾರ ತಡೆ ಕಾಯ್ದೆಯ ಅಧಿಕಾರವನ್ನು ಮತ್ತೆ ಲೋಕಾಯುಕ್ತಕ್ಕೆ ನೀಡಿದ್ದ ಹೈಕೋರ್ಟ್ ಪೀಠದ ನೇತೃತ್ವ ವಹಿಸಿದ್ದರು. ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ಅವರು, ನ್ಯಾಯಾಂಗಕ್ಕೆ ನ್ಯಾಯಮೂರ್ತಿ ವೀರಪ್ಪ ಅವರ ಕೊಡುಗೆಯನ್ನು ಯಾವಾಗಲೂ ಪ್ರೀತಿಯಿಂದ ಸ್ಮರಿಸಲಾಗುವುದು ಎಂದು ಹೇಳಿದರು.

ಕೋಲಾರದ ಶ್ರೀನಿವಾಸಪುರ ತಾಲ್ಲೂಕಿನ ನಾಗದೇನಹಳ್ಳಿ ಗ್ರಾಮದ ನ್ಯಾಯಮೂರ್ತಿ ವೀರಪ್ಪ ಅವರು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ (ಕೆಎಸ್ಎಲ್ಎಸ್ಎ) ಅಧ್ಯಕ್ಷರಾಗಿ ಅತಿ ಹೆಚ್ಚು ವ್ಯಾಜ್ಯಗಳನ್ನು ಇತ್ಯರ್ಥಪಡಿಸುವ ಮೂಲಕ ದೇಶದಲ್ಲೇ ಹೊಸ ದಾಖಲೆ ನಿರ್ಮಿಸಿದ್ದಾರೆ. ರಾಜ್ಯದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ಆದಾಯ ತಂದ ಸಂಚಾರಿ ನಿಯಮ ಉಲ್ಲಂಘನೆ ದಂಡದ ಮೇಲೆ ಶೇ.50ರಷ್ಟು ರಿಯಾಯಿತಿ ಘೋಷಿಸಿದ ರಾಜ್ಯ ಸರ್ಕಾರ ಕ್ರಮದಲ್ಲಿ ನ್ಯಾಯಮೂರ್ತಿ ವೀರಪ್ಪ ಅವರ ಪಾತ್ರ ಪ್ರಮುಖವಾಗಿತ್ತು.

## ಬಿಬಿಎಂಪಿ ಚುನಾವಣೆಗೆ ತಯಾರಿ; ಬಿಡದಿ ತೋಟದಲ್ಲಿ ಮುಖಂಡರ ಸಭೆ ನಡೆಸಿದ ಹೆಚ್.ಡಿ.ಕುಮಾರಸ್ವಾಮಿ



ಬೆಂಗಳೂರು: ಮುಂಬರುವ ಬಿಬಿಎಂಪಿ ಚುನಾವಣೆಗೆ ಜೆಡಿಎಸ್ ಪಕ್ಷವನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಬೆಂಗಳೂರು ಮಹಾನಗರದ ಎಲ್ಲಾ 28 ಕ್ಷೇತ್ರಗಳ ಪ್ರಮುಖ ಮುಖಂಡರ ಜತೆ ಇಂದು ಮಹತ್ವದ ಸಮಾಲೋಚನೆ ನಡೆಸಿದರು.

ಬಿಡದಿಯ ತೋಟದಲ್ಲಿ ಕರೆದಿದ್ದ ಸಭೆಯಲ್ಲಿ ಪಕ್ಷ ಸಂಘಟನೆ ಹಾಗೂ ಪಾಲಿಕೆ ಚುನಾವಣೆಯ ಬಗ್ಗೆ ಮಾಜಿ ಮುಖ್ಯಮಂತ್ರಿ ಅವರು ಮುಖಂಡರಿಗೆ ಕೆಲ ಗಂಭೀರ ಸೂಚನೆಗಳನ್ನು ನೀಡಿದರು. ವಿಧಾನಸಭೆ ಚುನಾವಣೆಯ ಸೋಲಿನ ಕಾರಣಗಳನ್ನು ಮುಂದಿಟ್ಟುಕೊಂಡು ಕೆಲ ಮುಖಂಡರನ್ನು ತರಾಟೆಗೆ ತೆಗೆದುಕೊಂಡ ಮಾಜಿ ಮುಖ್ಯಮಂತ್ರಿ, ಗುಂಪುಗಾರಿಕೆ ಬೇಡ, ಕೆಲಸ ಮಾಡುವವರಷ್ಟೇ ಬೇಕು, ಯಾವುದೇ ಕಾರಣಕ್ಕೂ ಗುಂಪುಗಾರಿಕೆ ಸಹಿಸುವ ಪ್ರಶ್ನೆ ಇಲ್ಲ ಎಂದು ಗುಡುಗಿದರು.

ಯಾರು ಯಾರನ್ನೂ ಮೆಚ್ಚಿಸುವ ರೀತಿಯಲ್ಲಿ ಕೆಲಸ ಮಾಡುವ ಅಗತ್ಯವಿಲ್ಲ, ಪಕ್ಷವನ್ನು ಇನ್ನೂ ಅಧೋಗತಿಗೆ ತಳ್ಳುವುದು ಬೇಡ. ಪಕ್ಷದ ನೆಲೆ ಇರುವ ವಾರ್ಡುಗಳಲ್ಲಿ ಉತ್ತಮವಾಗಿ ಕೆಲಸ ಮಾಡಿ. ಜನರ ಸಂಪರ್ಕದಲ್ಲಿರಿ ಹಾಗೂ ಅವರಲ್ಲಿ ವಿಶ್ವಾಸ ಮೂಡಿಸಿ ಎಂದು ತಾಕೀತು ಮಾಡಿದರು.

ಪ್ರತಿ ವಾರ್ಡಿನ, ಪ್ರತಿ ಮತಗಟ್ಟೆಯಲ್ಲಿ ಪಕ್ಷದ ಕಾರ್ಯಕರ್ತರನ್ನು ಬೆಳೆಸಿ, ಜನರು ಹೆಚ್ಚೆಚ್ಚು ಪಕ್ಷಕ್ಕೆ ಸೇರಿಸಿಕೊಳ್ಳುವ ವಾತಾವರಣವನ್ನು ಸೃಷ್ಟಿ ಮಾಡಿ. ಜನರಲ್ಲಿ ಪಕ್ಷದ ಪರ ಒಲವು ವ್ಯಕ್ತವಾಗುವ ರೀತಿಯಲ್ಲಿ ಕೆಲಸ ಮಾಡಿ ಎಂದು ಮಾಜಿ ಮುಖ್ಯಮಂತ್ರಿಗಳು ಮುಖಂಡರಿಗೆ ಕಿವಿಮಾತು ಹೇಳಿದರು.

ಯಾವುದೇ ಕ್ಷಣದಲ್ಲಿ ಬಿಬಿಎಂಪಿ ಚುನಾವಣೆ ಘೋಷಣೆ ಆಗುವ ಸಾಧ್ಯತೆ ಇದೆ. ಚುನಾವಣೆ ಯಾವಾಗ ಬೇಕಾದರೂ ಬರಲಿ. ನಮ್ಮ ಸಿದ್ಧತೆಗಳನ್ನು ನಾವು ಮಾಡಿಕೊಳ್ಳೋಣ. ವಿಧಾನಸಭೆ ಚುನಾವಣೆಯಲ್ಲಿ ಸೋತಿದ್ದೇವೆ ಎನ್ನುವ ಅಧೈರ್ಯ ಬೇಡ. ಅನೇಕ ಸೋಲುಗಳನ್ನು ದಾಟಿಕೊಂಡು ಜೆಡಿಎಸ್ ಪಕ್ಷ ಫೀನಿಕ್ಸ್ ಪಕ್ಷಿಯಂತೆ ಮೇಲೆದ್ದು ಬಂದಿದೆ ಎಂದು ಮುಖಂಡರಿಗೆ ಸ್ಥೈರ್ಯ ತುಂಬಿದರು.

ಪಕ್ಷ ಸಂಘಟನೆ ದೃಷ್ಟಿಯಿಂದ ಕಠಿಣ ಸೂಚನೆಗಳನ್ನು ಕೊಟ್ಟ ಕುಮಾರಸ್ವಾಮಿ,ವಿಧಾನಸಭೆ ಚುನಾವಣೆ ವೈಫಲ್ಯಗಳಿಂದ ಪಾಠ ಕಲಿಯುವಂತೆ ಹೇಳಿದರಲ್ಲದೆ, ಮಾಡಿದ ತಪ್ಪನ್ನೇ ಮತ್ತೆ ಮತ್ತೆ ಮಾಡಬೇಡಿ ಎಂದು ಎಚ್ಚರಿಕೆ ನೀಡಿದರು. ವಿಧಾನ ಪರಿಷತ್ ಸದಸ್ಯ ಕೆ.ಎನ್.ತಿಪ್ಪೇಸ್ವಾಮಿ, ನಗರ ಘಟಕದ ಅಧ್ಯಕ್ಷ ಹೆಚ್.ಎಂ.ರಮೇಶ್ ಗೌಡ ಸೇರಿದಂತೆ 28 ವಿಧಾನಸಭೆ ಕ್ಷೇತ್ರಗಳ ಪ್ರಮುಖ ಮುಖಂಡರು ಸಭೆಯಲ್ಲಿ ಭಾಗಿಯಾಗಿದ್ದರು.



## ಮಾಜಿ ಸಿಎಂ ಬಿಎಸ್‌ವೈ ಭೇಟಿಯಾದ ಕನಕಪುರ ಬಂಡೆ

ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ ಅವರನ್ನು ಬೆಂಗಳೂರಿನ ಡಾಲರ್ಸ್ ಕಾಲೋನಿ ನಿವಾಸದಲ್ಲಿ ಗುರುವಾರ ಭೇಟಿ ಮಾಡಿದರು.

ಯಡಿಯೂರಪ್ಪ ಅವರನ್ನು ಸನ್ಮಾನಿಸಿದ ಡಿ.ಕೆ.ಶಿವಕುಮಾರ, ಇದೊಂದು ಸೌಜನ್ಯದ ಭೇಟಿ ಎಂದಿದ್ದಾರೆ. ಯಡಿಯೂರಪ್ಪ ಅವರಿಗೆ ಶಾಲು, ಹಾರ ಹಾಕಿ ಸನ್ಮಾನಿಸಿದ ನಂತರ ಮಾಧ್ಯಮ ಪ್ರತಿನಿಧಿಗಳು ಹಾಗೂ ಅಲ್ಲಿದ್ದವರನ್ನೆಲ್ಲ ಹೊರಗೆ ಕಳಿಸಿ ಇಬ್ಬರೇ ಕೆಲಕಾಲ ಮಾತು ಕತೆ ನಡೆಸಿದರು.



## ಲಘು ವಿಮಾನ ಪತನ: ಪೈಲಟ್‌ಗಳು ಪಾರು

ಚಾಮರಾಜನಗರ: ಜಿಲ್ಲೆಯ ಭೋಗಪುರದ ಹೊರವಲಯದಲ್ಲಿ ಲಘು ವಿಮಾನ ಪತನಗೊಂಡಿದ್ದು, ಪೈಲಟ್‌ಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ವಿಮಾನ ನಿಯಂತ್ರಣ ಕಳೆದುಕೊಳ್ಳುತ್ತಿದ್ದಂತೆ ಪೈಲಟ್‌ಗಳು ಪ್ಯಾರಾಚೂಟ್‌ಗಳ ಮೂಲಕ ಪ್ರಾಣ ಉಳಿಸಿಕೊಂಡಿದ್ದಾರೆ. ವಿಮಾನ ಸಂಪೂರ್ಣ ಸುಟ್ಟು ಬೆಂಕಿಗೆ ಆಹುತಿಯಾಗಿದೆ.

ಸದ್ಯ ಸ್ಥಳಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಭೇಟಿ ನೀಡಿದ್ದು, ವಿಮಾನ ಪತನಕ್ಕೆ ನಿಖರ ಕಾರಣ ಏನೆಂಬುದನ್ನು ತಿಳಿಯಲು ತಪಾಸಣೆ ನಡೆಸುತ್ತಿದ್ದಾರೆ.

## ಪ್ರತಿಪಕ್ಷಗಳು ಗೊಂದಲ ಸೃಷ್ಟಿಸಬೇಡಿ: 'ಗ್ಯಾರಂಟಿ' ಜಾರಿಗೆ ಸಮಯ ಕೊಡಿ: ವಿಶ್ವನಾಥ್



ಬೆಂಗಳೂರು: ವಿಧಾನಸಭೆ ಚುನಾವಣೆ ವೇಳೆ ಕಾಂಗ್ರೆಸ್ ಪಕ್ಷ ಘೋಷಿಸಿರುವ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ಸಮಯಾವಕಾಶ ನೀಡಬೇಕೆಂದು ಬಿಜೆಪಿ ಎಂಎಲ್ ಸಿ ಎಚ್. ವಿಶ್ವನಾಥ್ ಹೇಳಿದ್ದಾರೆ.

ಒಂದೆಡೆ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ಬಿಜೆಪಿ ಒತ್ತಡ ಹೇರುತ್ತಿದೆ. ಮತ್ತೊಂದೆಡೆ, ಪ್ರತಿಪಕ್ಷಗಳು ಯಾವುದೇ ಗೊಂದಲವನ್ನು ಸೃಷ್ಟಿಸಬಾರದು, ಕಾಂಗ್ರೆಸ್ ಸರ್ಕಾರ ತನ್ನ ಕೆಲಸವನ್ನು ಮಾಡಲು ಬಿಡಬೇಕು ಎಂದು ಹೇಳುವ ಮೂಲಕ ಬಿಜೆಪಿ ಎಂಎಲ್ ಸಿ ಎಚ್ ವಿಶ್ವನಾಥ್ ಹೇಳಿಕೆ ಸಂಚಲನ ಮೂಡಿಸಿದೆ. ಈ ಯೋಜನೆಗಳನ್ನು ಹೊರತರುವ ಮೊದಲು ಕೆಲವು ನಿಯಮ ಹಾಗೂ ವ್ಯವಸ್ಥೆ ಮಾಡಿಕೊಳ್ಳಬೇಕಾಗುತ್ತದೆ. ನಾವು ಶಾಂತವಾಗಿರೋಣ ಮತ್ತು ಅವರು ನೀಡಿದ ಭರವಸೆಗಳನ್ನು ಕಾರ್ಯಗತಗೊಳಿಸಲು ಅವಕಾಶ ಮಾಡಿಕೊಡೋಣ ಎಂದು ಕರೆ ನೀಡಿದ್ದಾರೆ.

ವರುಣಾದಲ್ಲಿ ಸಿದ್ದರಾಮಯ್ಯ ಸೋಲಿಸಲು ಬಿಜೆಪಿಯಿಂದ ದೊಡ್ಡ ಪಿತೂರಿ: ಎಂಎಲ್'ಸಿ ವಿಶ್ವನಾಥ್

ಎಪ್ಪತ್ತರ ದಶಕದಲ್ಲಿ ಕೂಡ ಇಂದಿನಂತೆಯ ಹಲವು ಕಾರ್ಯಕ್ರಮಗಳನ್ನು ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿತು. ಟಿ ನರಸೀಪುರದಲ್ಲಿ ಕಾಂಗ್ರೆಸ್ ನ ರಾಚಯ್ಯ ಅವರು ಅಂಗನವಾಡಿ ಕೇಂದ್ರಗಳನ್ನು ಆರಂಭಿಸಿದರು. ಅದು ಭವಿಷ್ಯದಲ್ಲಿ ಅತ್ಯಂತ ದೊಡ್ಡ ಕಲ್ಯಾಣ ಯೋಜನೆಯಾಗಿ ಮಾರ್ಪಟ್ಟಿತು. ನಂತರ ರಾಚಯ್ಯ ಸಚಿವರಾಗಿ ಮತ್ತು ನಂತರ ರಾಜ್ಯಪಾಲರಾಗಿ ಕೆಲಸ ಮಾಡಿದರು ಎಂದು ವಿಶ್ವನಾಥ್ ಸ್ಮರಿಸಿದರು.

ಕೇಂದ್ರ ಸರ್ಕಾರವು ಅಂಗನವಾಡಿ ಯೋಜನೆಯಿಂದ ಪ್ರಭಾವಿತವಾಗಿತ್ತು, ಆಗಿನ ಪ್ರಧಾನಿ ಇಂದಿರಾಗಾಂಧಿ ಇದನ್ನು 1975 ರಲ್ಲಿ ಜಾರಿಗೆ ತಂದರು ಎಂದು ತಿಳಿಸಿದರು. ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಜಾರಿಗೆ ತಂದ ಯಶಸ್ವಿನಿ ಆರೋಗ್ಯ ಯೋಜನೆಯ ಕಾಂಗ್ರೆಸ್ ಸರ್ಕಾರದ ಕನಸಿನ ಕೂಸು, ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾಗಿ ಸೇವೆ ಸಲ್ಲಿಸಿರುವ ವಿಶ್ವನಾಥ್ ಅಭಿಪ್ರಾಯ ಪಟ್ಟಿದ್ದಾರೆ.

ಎಂಎಲ್ ಸಿ ಹುದ್ದೆ ಕಳೆದುಕೊಳ್ಳುವ ಭೀತಿ: ಮರಳಿ ಗೂಡು ಸೇರುವ ನಿರ್ಧಾರ 'ಕೈ' ಬಿಟ್ಟ 'ಹಳ್ಳಿ ಹಕ್ಕಿ'

ಮಕ್ಕಳ ಶಾಲಾ ಮತ್ತು ಕಾಲೇಜು ಶುಲ್ಕಗಳು ಹಾಗೂ ಆರೋಗ್ಯ ಸೇವೆ ಜನರಿಗೆ ಹೆಚ್ಚಿನ ವೆಚ್ಚದ ಹೊರೆಯಾಗಿದೆ. ಹೀಗಾಗಿ ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೇವೆಯನ್ನು ಕೈಗೆಟಕುವ ದರದಲ್ಲಿ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೆಲಸ ಮಾಡಬೇಕಿದೆ ಎಂದು ಸಲಹೆ ನೀಡಿದ್ದಾರೆ.

## ಗ್ಯಾರಂಟಿ ವಿಚಾರದಲ್ಲಿ ಮಾತು ತಪ್ಪಿದರೆ ವಚನಭ್ರಷ್ಟ ಪೋಸ್ಟರ್ ರಿಲೀಸ್: ಎನ್.ರವಿಕುಮಾರ್



ಬೆಂಗಳೂರು: ಕಾಂಗ್ರೆಸ್ ಪಕ್ಷದವರು ಗ್ಯಾರಂಟಿ ವಿಚಾರದಲ್ಲಿ ನುಡಿದಂತೆ ನಡೆಯದೆ ಇದ್ದರೆ ವಚನ ಭ್ರಷ್ಟ ಪಟ್ಟ ಕಟ್ಟುತ್ತೇವೆ. ವಚನಭ್ರಷ್ಟ ಪೋಸ್ಟರ್ ರಿಲೀಸ್ ಮಾಡುತ್ತೇವೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಎಚ್ಚರಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಸರಕಾರದ ಕ್ಯಾಬಿನೆಟ್ ನಾಳೆ ನಡೆಯಲಿದೆ. ಈಗಾಗಲೇ ಸರಕಾರ ರಚನೆ ಆಗುವ ಮೊದಲು, ಅಧಿಕಾರಕ್ಕೆ ಬರುವ ಮೊದಲು ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರು ಕರ್ನಾಟಕದ ಜನತೆಗೆ ಏನು ಮಾತು ಕೊಟ್ಟಿದ್ದಾರೋ, ವಚನ ನೀಡಿದ್ದಾರೋ ಆ ಪ್ರಕಾರ ನಡೆಯಬೇಕೆಂದು ಬಿಜೆಪಿ ಆಗ್ರಹಿಸುತ್ತದೆ ಎಂದರು.

ಎಲ್ಲ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಎಂದಿದ್ದರು. ಈಗ ಏನೇನೋ ಕಂಡಿಷನ್ ಹಾಕುತ್ತಿದ್ದಾರೆ. ಅಂದರೆ ಅದು ವಚನಭ್ರಷ್ಟತೆ. ಎಲ್ಲ ನಿರುದ್ಯೋಗಿ ಪದವೀಧರರಿಗೆ 3 ಸಾವಿರ, ಎಲ್ಲ ನಿರುದ್ಯೋಗಿ ಡಿಪ್ಲೊಮ ಪಡೆದವರಿಗೆ 1,500 ರೂಪಾಯಿ ಕೊಡುವುದಾಗಿ ತಿಳಿಸಿದ್ದರು. ಈಗ ಕಂಡಿಷನ್ ಹಾಕುತ್ತಿದ್ದು, ವಚನಭ್ರಷ್ಟತೆ ಕಾಣುತ್ತಿದೆ. 200 ಯೂನಿಟ್ ಕರೆಂಟ್ ಫ್ರೀ. ಮಹದೇವಪ್ಪ ನಿನ್ಗೂ ಫ್ರೀ. ನನಗೂ ಫ್ರೀ ಎಂದಿದ್ದರು. ಅದರಂತೆ ನಡೆಯದಿದ್ದರೆ ವಚನ ಭ್ರಷ್ಟತೆ ಎಂದು ಆರೋಪಿಸಿದರು.

10 ಕೆಜಿ ಅಕ್ಕಿ ವಿಚಾರದಲ್ಲೂ ಈಗ ಕೇಂದ್ರವನ್ನು ಕೇಳುವುದಾಗಿ ಹೇಳುತ್ತಿದ್ದಾರೆ. ಮುಂಚೆ ಇದನ್ನು ಹೇಳಿದ್ದರೇ ಎಂದು ಕೇಳಿದರು. ನಿಮ್ಮ ಪ್ರಣಾಳಿಕೆ, ಭಾಷಣ, ಘೋಷಣೆಯಂತೆ ನಡೆಯಬೇಕು ಎಂದು ಆಗ್ರಹಿಸಿದರು. ಅತ್ತೆಗೂ, ಸೊಸೆಗೂ ಉಚಿತ ಬಸ್ ಪ್ರಯಾಣ. ಹಾಸನಕ್ಕಾದ್ರೋ ಹೋಗಿ; ಧರ್ಮಸ್ಥಳಕ್ಕಾದ್ರೂ ಹೋಗಿ ಎಂದಿದ್ದರು. ಈಗ 60 ಕಿಮೀಗೆ ಮಿತಿ ಹೇರುವ ಮಾತನಾಡುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಗ್ಯಾರಂಟಿಗಳ ಅನುಷ್ಠಾನಕ್ಕೆ ಸುಮಾರು 85 ಸಾವಿರ ಕೋಟಿ ರೂಪಾಯಿ ವೆಚ್ಚ ಆಗಲಿದೆ. ಇದನ್ನು ಎಲ್ಲಿಂದ ತರುತ್ತೀರಾ? ಈ ಹಣ ಹೇಗೆ ಹೊಂದಿಸುತ್ತೀರಾ? ಕೆಎಸ್ಆರ್ಟಿಸಿ ಈಗಾಗಲೇ ನಷ್ಟದಲ್ಲಿದೆ. ವೇತನ, ಡೀಸೆಲ್, ಬಸ್ ಪಂಕ್ಚರ್ಗೂ ದುಡ್ಡಿಲ್ಲದ ಸ್ಥಿತಿ ಇದೆ. ಇಂಥ ಪರಿಸ್ಥಿತಿಯಲ್ಲಿ ಉಚಿತ ಬಸ್ ಪ್ರಯಾಣ ಎಂದಿದ್ದೀರಿ ಎಂದು ಪ್ರಶ್ನೆ ಮುಂದಿಟ್ಟರು.

ಧಿಕಾರಕ್ಕೆ ಬಂದ 24 ಗಂಟೆ ಎಂದು ಹೇಳಿದ್ದೀರಿ. ಈಗೇನಾಗಿದೆ? 24 ಗಂಟೆ ಅಲ್ಲ. 14 ದಿನಗಳೇ ಕಳೆದಿವೆ. ಹಾಗಾಗಿ ಬಿಜೆಪಿ ನಾಳೆ ಕ್ಯಾಬಿನೆಟ್ ನಿರ್ಧಾರವನ್ನು ಕಾಯಲಿದೆ. ನೀವು ನುಡಿದಂತೆ ನಡೆಯದೆ ಇದ್ದರೆ ನಾವು ನಿಮಗೆ ವಚನಭ್ರಷ್ಟ ಪಟ್ಟ ಕಟ್ಟುತ್ತೇವೆ. ವಚನಭ್ರಷ್ಟ ಪೋಸ್ಟರ್ ರಿಲೀಸ್ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

## ಕುಸ್ತಿಪಟುಗಳ ಪರವಾಗಿ ಇಂದು ಮಹಿಳಾ ಕಾಂಗ್ರೆಸ್‌ನಿಂದ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ: ಪುಷ್ಪಾ



ಬೆಂಗಳೂರು: ದೇಶದಲ್ಲಿ ಬಿಜೆಪಿ ಸರ್ಕಾರದ ಆಳ್ವಿಕೆಯಲ್ಲಿ ಮಹಿಳೆಯರ ರಕ್ಷಣೆ ಇಲ್ಲವಾಗಿದೆ. ಭೇಟಿ ಬಚಾವೋ ಭೇಟಿ ಎನ್ನುತ್ತಾ ಅಧಿಕಾರಕ್ಕೆ ಬಂದ ಬಿಜೆಪಿ ಈಗ ಮಹಿಳೆಯರ ರಕ್ಷಣೆ ಬಗ್ಗೆ ನಿರ್ಲಕ್ಷ್ಯ ವಹಿಸಿದೆ ಎಂದು ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರನಾಥ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಹೆಮ್ಮೆಯ ಮಹಿಳಾ ಕುಸ್ತಿಪಟುಗಳು ತಮ್ಮ ಮೇಲಿನ ಲೈಂಗಿಕ ದೌರ್ಜನ್ಯದ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದು, ಅವರ ಮೇಲೆ ದಬ್ಬಾಳಿಕೆ ಮಾಡಲಾಗುತ್ತಿದೆ. ಪ್ರಧಾನಿ ಮೋದಿ ಇದುವರೆಗೂ ಒಂದು ಬಾರಿಯೂ ಪ್ರತಿಭಟನಾ ನಿರತ ಮಹಿಳಾ ಕುಸ್ತಿಪಟುಗಳನ್ನು ಭೇಟಿ ಮಾಡುತ್ತಿಲ್ಲ.ಕೇಂದ್ರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಸ್ಮೃತಿ ಇರಾನಿ, ಸಂಸದೆ ಮಿನಾಕ್ಷಿ ಲೇಖಿ, ಕೇಂದ್ರದ ಸಚಿವೆ ನಿರ್ಮಲಾ ಸೀತರಾಮನ್ ಅವರಿಗೆ ಈ ಹೋರಾಟ ಕಣ್ಣಿಗೆ ಕಾಣುತ್ತಿಲ್ಲವೇ? ಎಂದು ಪ್ರಶ್ನಿಸಿದ ಅವರು, ದೇಶದ ರಾಷ್ಟ್ರಪತಿ ಮಹಿಳೆಯಾಗಿದ್ದು, ಅವರನ್ನು ಸರ್ಕಾರ ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ ಎಂದರು.

ಭಾರತೀಯ ಕುಸ್ತಿ ಸಂಸ್ಥೆ ಅಧ್ಯಕ್ಷ ಬ್ರಿಜ್ ಭೂಷಣ್ ಅವರು ಸಂಸದರಾಗಿದ್ದು, ಅವರ ಮೇಲೆ ಲೈಂಗಿಕ ಕಿರುಕುಳದ ಆರೋಪವಿದ್ದು, ಅವರ ರಕ್ಷಣೆಗೆ ಇಡೀ ಬಿಜೆಪಿ ಸರ್ಕಾರ ಮುಂದಾಗಿದೆ. ಈ ಪ್ರಕರಣದ ನಂತರ ಅಂತಾರಾಷ್ಟ್ರೀಯ ಕುಸ್ತಿ ಸಂಸ್ಥೆ ಭಾರತವನ್ನು ನಿಷೇಧಿಸುವ ಎಚ್ಚರಿಕೆಯನ್ನು ನೀಡಿದೆ. ಆದರೂ ಬಿಜೆಪಿ ಸರ್ಕಾರ ಹಾಗೂ ಪ್ರಧಾನಮಂತ್ರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಮಹಿಳಾ ಕಾಂಗ್ರೆಸ್ ವತಿಯಿಂದ ನಮ್ಮ ಮಹಿಳಾ ಕುಸ್ತಿಪಟುಗಳ ಪರವಾಗಿ ಧ್ವನಿ ಎತ್ತುತ್ತಿದ್ದು, ರಾಜ್ಯ ಮಹಿಳಾ ಕಾಂಗ್ರೆಸ್ ವತಿಯಿಂದ ನಾಳೆ ಜಿಲ್ಲಾ ಕೇಂದ್ರಗಳಲ್ಲಿ ಈ ವಿಚಾರವಾಗಿ ಧ್ವನಿ ಎತ್ತಲಾಗುವುದು. ಮಹಿಳಾ ಕುಸ್ತಿಪಟುಗಳ ಜತೆ ನಾವು ಇದ್ದೇವೆ ಎಂದು ಸಂದೇಶ ರವಾನಿಸಲಾಗುವುದು ಎಂದು ತಿಳಿಸಿದರು.

ಮಹಿಳಾ ಕುಸ್ತಿಪಟುಗಳ ಪರವಾಗಿ ಅನಿಲ್ ಕುಂಬ್ಳೆ ಸೇರಿದಂತೆ ಅನೇಕ ಕ್ರೀಡಾ ತಾರೆಯರು ಧ್ವನಿ ಎತ್ತುತ್ತಿದ್ದಾರೆ. ಶಾಂತಿಯುತ ಪ್ರತಿಭಟನೆ ಮಾಡುತ್ತಿದ್ದರೂ ಪೊಲೀಸರ ಮೂಲಕ ಅವರ ಮೇಲೆ ದಬ್ಬಾಳಿಕೆ ಮಾಡಿ ಬಂಧಿಸಲಾಗಿದೆ.ಈ ಮಹಿಳಾ ವಿರೋಧಿ ಬಿಜೆಪಿ ಸರ್ಕಾರ ಲೈಂಗಿಕ ಕಿರುಕುಳ ಆರೋಪ ಹೊತ್ತಿರುವ ಬ್ರಿಜ್ ಭೂಷಣ್ ಅವರನ್ನು ಜೈಲಿಗೆ ಕಳುಹಿಸುವ ಬದಲು, ಹೋರಾಟನಿರತ ಮಹಿಳಾ ಕುಸ್ತಿಪಟುಗಳನ್ನು ಬಂಧಿಸಿದೆ. ಸರ್ಕಾರದ ಈ ಕ್ರಮವನ್ನು ಖಂಡಿಸುತ್ತೇವೆ.ಕೇಂದ್ರ ಸರ್ಕಾರ ಜೀವಂತವಾಗಿದ್ದರೆ ಲೈಂಗಿಕ ಕಿರುಕುಳದ ಆರೋಪ ಹೊತ್ತಿರುವ ಬ್ರಿಜ್ ಭೂಷಣ್ ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಸಂಸದ ಸ್ಥಾನದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

## ಮಗಳ ಮೇಲೆ ಅತ್ಯಾಚಾರ ಎಸಗಿದ ಆರೋಪಿಗೆ 20 ವರ್ಷ ಜೈಲು ಶಿಕ್ಷೆ

ದಾವಣಗೆರೆ: ಮಗಳ ಮೇಲೆ ಅತ್ಯಾಚಾರ ಎಸಗಿದ ವ್ಯಕ್ತಿಯೊಬ್ಬನಿಗೆ ದಾವಣಗೆರೆ ಜಿಲ್ಲೆಯ ನ್ಯಾಯಾಲಯ 20 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಜಿಲ್ಲೆಯ ಪೋಕ್ಸೋ ಫಾಸ್ಟ್ ಟ್ರ್ಯಾಕ್ ವಿಶೇಷ ನ್ಯಾಯಾಲಯ ಬುಧವಾರ ಈ ಆದೇಶ ನೀಡಿದೆ. ಆ ವ್ಯಕ್ತಿ ತನ್ನ ಮಗಳನ್ನು ದೀರ್ಘಕಾಲದಿಂದ ಲೈಂಗಿಕವಾಗಿ ಬಳಸಿಕೊಳ್ಳುತ್ತಿದ್ದ.

ಈ ಭೀಕರ ಘಟನೆಯನ್ನು ತಿಳಿದ ಗ್ರಾಮಸ್ಥರು ಪೊಲೀಸರಿಗೆ ಮಾಹಿತಿ ನೀಡಿದ್ದರು.

ಹರಿಹರ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಜೈಲು ಶಿಕ್ಷೆಯ ಜೊತೆಗೆ, ನ್ಯಾಯಾಧೀಶ ಎನ್.ಶ್ರೀಪಾದ ಅವರು ಆರೋಪಿಗೆ 12,000 ರೂ. ದಂಡವನ್ನು ವಿಧಿಸಿದರು ಮತ್ತು ಸಂತ್ರಸ್ತರಿಗೆ 5 ಲಕ್ಷ ರೂ. ಪರಿಹಾರ ನೀಡುವಂತೆ ಆದೇಶಿಸಿದೆ.

## 20 ಟನ್ ಪಡಿತರ ಅಕ್ಕಿ ತುಂಬಿದ್ದ ಲಾರಿ ಕಳ್ಳತನ



ಯಾದಗಿರಿ: ಬರೋಬ್ಬರಿ 20 ಟನ್ ಪಡಿತರ ಅಕ್ಕಿಯನ್ನು ತುಂಬಿದ್ದ ಲಾರಿಯನ್ನೇ ಖದೀಮರು ಎಗರಿಸಿರುವ ಘಟನೆ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನಲ್ಲಿ ನಡೆದಿದೆ.

ತಾಲೂಕಿನ ವಿವಿಧ ಗ್ರಾಮಗಳ ಪಡಿತರ ಕೇಂದ್ರಗಳಿಗೆ ವಿತರಿಸಲೆಂದು ಲಾರಿಯಲ್ಲಿ ಅನ್ನಭಾಗ್ಯದ ಅಕ್ಕಿಯನ್ನು ತುಂಬಿಕೊಂಡು ಹೋಗಲಾಗುತ್ತಿತ್ತು. ನಗರದ ಎಪಿಎಂಸಿ ಬಳಿ ನಿಲ್ಲಿಸಿದ್ದ ಲಾರಿಯನ್ನು ಅಕ್ಕಿ ಸಮೇತ ಕಳವು ಮಾಡಲಾಗಿದೆ.

ಎಪಿಎಂಸಿಯಲ್ಲಿ ಅನ್ನಭಾಗ್ಯ ಅಕ್ಕಿ ಸರಬರಾಜು ಮಾಡುವ 4 ಲಾರಿಗಳನ್ನು ನಿಲ್ಲಿಸಲಾಗಿತ್ತು. ಅದರಲ್ಲಿ 1 ಲಾರಿಯಲ್ಲಿ 420 ಮೂಟೆಯ 20 ಟನ್ ಅಕ್ಕಿ ಇತ್ತು. ಚಾಲಕ ಕೀಯನ್ನು ಲಾರಿಯಲ್ಲೇ ಬಿಟ್ಟು ನಿರ್ಲಕ್ಷ್ಯವಹಿಸಿದ್ದ. ಆತ ರಾತ್ರಿ ಲಾರಿಯಲ್ಲಿ ಮಲಗುವುದನ್ನು ಬಿಟ್ಟು ತನ್ನ ಸ್ವಗ್ರಾಮ ಸುರಪುರಕ್ಕೆ ಹೋಗಿದ್ದ. ಚಾಲಕ ಊರಿನಿಂದ ಬೆಳಗ್ಗೆ ವಾಪಸ್ ಬಂದು ನೋಡಿದರೆ ನಿಲ್ಲಿಸಿದ್ದ ಜಾಗದಲ್ಲಿ ಲಾರಿಯೇ ಇರಲಿಲ್ಲ. ಎಪಿಎಂಸಿ ಸೇರಿ ಇಡೀ ಪಟ್ಟಣದಲ್ಲಿ ಲಾರಿಯನ್ನು ಹುಡುಕಿದರೂ ಎಲ್ಲಿಯೂ ಅದರ ಸುಳಿವೇ ಸಿಕ್ಕಿಲ್ಲ.

ಅಕ್ಕಿ ತುಂಬಿದ್ದ ಲಾರಿ ಎಲ್ಲಿಯೂ ಸಿಗದ ಹಿನ್ನೆಲೆಯಲ್ಲಿ ಘಟನೆ ಕುರಿತಂತೆ ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ. ಸಿಪಿಐ ಚೆನ್ನಯ್ಯ ಹಿರೇಮಠ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚನೆ ಮಾಡಿ ಲಾರಿಯನ್ನು ಹುಡಕಲು ಕಾರ್ಯಾಚರಣೆ ಆರಂಭಿಸಿದ್ದಾರೆ. ಆರೋಪಿಗಳ ಪತ್ತೆಗೆ ಪೊಲೀಸ್ ತನಿಖೆಯೂ ಚುರುಕುಗೊಂಡಿದೆ.

## 2024ರ ಏಪ್ರಿಲ್ ಹೊತ್ತಿಗೆ ಉತ್ಪಾದನೆ ಆರಂಭ, ವೇಗ ಹೆಚ್ಚಿಸಿದ ಹೊಸ ಸರ್ಕಾರ

# ಜುಲೈ 1ರ ವೇಳೆಗೆ ಫಾಕ್ಸ್ ಕಾನ್ ಕಂಪನಿಗೆ ಪೂರ್ತಿ ಭೂಮಿ ಹಸ್ತಾಂತರ: ಸಚಿವ ಎಂ.ಬಿ.ಪಾಟೀಲ್

ಬೆಂಗಳೂರು: ಮುಂಚೂಣಿ ಐಫೋನ್ ತಯಾರಿಕಾ ಕಂಪನಿ ಫಾಕ್ಸ್ ಕಾನ್ 2024ರ ಏಪ್ರಿಲ್ 1ರ ವೇಳೆಗೆ ದೇವನಹಳ್ಳಿ ಘಟಕದಲ್ಲಿ ಉತ್ಪಾದನೆ ಆರಂಭಿಸುವ ಗುರಿ ಹೊಂದಿದ್ದು, ಇದಕ್ಕೆ ಪೂರಕವಾಗಿ ಜುಲೈ 1ರ ಹೊತ್ತಿಗೆ ಪೂರ್ತಿಯಾಗಿ ಭೂಮಿ ಹಸ್ತಾಂತರಿಸುವುದಾಗಿ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಗುರುವಾರ ಹೇಳಿದರು.

ಜಾರ್ಜ್ ಚು ಅವರ ನೇತೃತ್ವದಲ್ಲಿ ಫಾಕ್ಸ್ ಕಾನ್ ಕಂಪನಿಯ ಉನ್ನತ ಅಧಿಕಾರಿಗಳ ತಂಡವು ಸೌಜನ್ಯದ ಭೇಟಿ ನೀಡಿದ್ದ ಸಂದರ್ಭದಲ್ಲಿ ಅವರು ಹೀಗೆ ಹೇಳಿದರು. ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರೂ ಹಾಜರಿದ್ದರು

ಇದರೊಂದಿಗೆ ಕಾಂಗ್ರೆಸ್ ನೇತೃತ್ವದ ಹೊಸ ಸರ್ಕಾರವು 50,000 ಜನರಿಗೆ ಉದ್ಯೋಗ ಒದಗಿಸುವ 13,600 ಕೋಟಿ ರೂಪಾಯಿಯ ಮೊತ್ತದ ಈ ಯೋಜನೆ ಜಾರಿಗೆ ವೇಗ ನೀಡಿದಂತಾಗಿದೆ.

ದೇವನಹಳ್ಳಿ ಸಾಮಾನ್ಯ ಕೈಗಾ–ರಿಕಾ ಪ್ರದೇಶದಲ್ಲಿ (ಐಟಿಐಆರ್) ಕಾರ್ಯಯೋಜನೆಗಾಗಿ 300 ಎಕರೆ ಗುರುತಿಸಲಾಗಿದೆ. 2024ರ ಏಪ್ರಿಲ್ 1ರ ವೇಳೆಗೆ ಇಲ್ಲಿ ಕಂಪನಿಯು ತಯಾರಿಕೆ ಶುರು ಮಾಡುವ ಗುರಿ ಹಾಕಿಕೊಂಡಿದೆ. ಇದನ್ನು ಗಮನದಲ್ಲಿರಿಸಿಕೊಂಡು ಜುಲೈ 1ಕ್ಕೆ ಮುಂಚೆ ಕಂಪನಿಗೆ ಭೂಮಿ ಹಸ್ತಾಂತರಿಸಲಾಗುವುದು ಎಂದರು.

ಕಂಪನಿಯು ದಿನಕ್ಕೆ 50 ಲಕ್ಷ ಲೀಟರ್ ನೀರು ಬೇಕಾಗುವುದಾಗಿ ತಿಳಿಸಿದೆ. ಇದನ್ನು ಪೂರೈಸುವ ಜೊತೆಗೆ



ಗುಣಮಟ್ಟದ ವಿದ್ಯುತ್, ರಸ್ತೆ ಸಂಪರ್ಕ ಇತ್ಯಾದಿ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತದೆ ಎಂದು ಪಾಟೀಲ್ ಸ್ಪಷ್ಟಪಡಿಸಿದರು.

ಕಂಪನಿಯ ಸಿಬ್ಬಂದಿಗೆ ಬೇಕಾಗುವ ಕೌಶಲ ವಿವರಗಳನ್ನು ಕೂಡ ಕೇಳಲಾಗಿದೆ. ಅದಕ್ಕೆ ತಕ್ಕಂತೆ ಸರ್ಕಾರದ ವತಿಯಿಂದ ಅರ್ಹರಿಗೆ ಕೌಶಲಗಳ ತರಬೇತಿ ಕೊಟ್ಟು ಮಾನವ ಸಂಪನ್ಮೂಲ ಲಭ್ಯವಾಗಿಸಲು ಒತ್ತು ಕೊಡುವುದಾಗಿಯೂ ಅವರು ತಿಳಿಸಿದರು.

ತೈವಾನ್ ಮೂಲದ ಮುಂಚೂಣಿ ಕಂಪನಿಯು ಮೂರು ಹಂತಗಳಲ್ಲಿ ಘಟಕ ನಿರ್ಮಾಣ ಪೂರೈಸಿ ಅಂತಿಮವಾಗಿ ಇಲ್ಲಿ ವರ್ಷಕ್ಕೆ 2 ಕೋಟಿ ಮೊಬೈಲ್‌ಗಳನ್ನು ತಯಾರಿಸುವ ಯೋಜನೆ ಹಾಕಿಕೊಂಡಿದೆ. ಈಗಾಗಲೇ ಭೂಮಿಗಾಗಿ ನಿಗದಿಗೊಳಿಸಿರುವ ಮೊತ್ತದಲ್ಲಿ ಶೇಕಡ 30ರಷ್ಟನ್ನು (90 ಕೋಟಿ ರೂಪಾಯಿ) ಕಂಪನಿಯು ಕೆ.ಐ.ಎ.ಡಿ.ಬಿ.ಗೆ ಪಾವತಿಸಿದೆ.

ಕಂಪನಿಯ ಪೌಲ್ ಲಿಯು, ಟಾನ್ನಿ ಲಿಯು, ಸೈಮನ್ ಸಾಂಗ್, ಭಾರತ್ ದಂಡಿ ಮತ್ತಿತರರು ಇದ್ದರು.

ಇದಕ್ಕೆ ಮುನ್ನ ಜುಬಿಲಿಯಂಟ್ ಫುಡ್ ವರ್ಕ್ಸ್ ನ ಕಾರ್ಯನಿರ್ವಾಹಕ ಉಪಾಧ್ಯಕ್ಷ ಅಮರದೀಪಸಿಂಗ್ ಅಹ್ಲುವಾಲಿಯಾ, ಎಫ್‌ಐಸಿಸಿಐ ಕರ್ನಾಟಕ ಮಂಡಳದ ಅಧ್ಯಕ್ಷ ಕೆ. ಉಲ್ಲಾಸ್ ಕಾಮತ್, ಕರ್ನಾಟಕ ಮಂಡಳದ ಅಧ್ಯಕ್ಷ ಶಜು ಮಂಗಳಂ, ಸಿಐಐ ಕರ್ನಾಟಕ ಮಂಡಲ ಅಧ್ಯಕ್ಷ ವಿಜಯಕೃಷ್ಣನ್ ವೆಂಕಟೇಶನ್ ಮತ್ತಿತರರು ಸಚಿವರನ್ನು ಭೇಟಿಯಾಗಿದ್ದರು.

ಐಟಿ ಬಿಟಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಮಣ ರೆಡ್ಡಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ ಅವರು ಇದ್ದರು.

## ಜೂ.4ರಂದು 'ಮರುಳಶಂಕರ ದೇವರು' ಕಾದಂಬರಿ ಲೋಕಾರ್ಪಣೆ

ಬೆಳಗಾವಿ: ಡಾ. ದಯಾನಂದ ನೂಲಿ ರಚಿತ 'ಮರುಳಶಂಕರ ದೇವರು' ಅನುಭಾವಯಾತ್ರೆ ಮಹಾ ಕಾದಂಬರಿ ಲೋಕಾರ್ಪಣೆ ಮತ್ತು ಚಿಂತನೆ ಕಾರ್ಯಕ್ರಮವನ್ನು ಜೂ.4ರಂದು ಬೆಳಗ್ಗೆ 10 ಗಂಟೆಗೆ ಶಿವಬಸವನಗರದ ಎಸ್. ಜಿ. ಬಾಳೇಕುಂದ್ರಿ ತಾಂತ್ರಿಕ ಮಹಾವಿದ್ಯಾಲಯದ ಸಭಾಗೃಹದಲ್ಲಿ ಆಯೋಜಿಸಲಾಗಿದೆ.

ಸಂಕೇಶ್ವರದ ಪ್ರಾ. ಬಿ.ಎಸ್.ಗವಿಮಠ ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನ, ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಬೆಳಗಾವಿ ಜಿಲ್ಲಾ ಘಟಕದ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ನಿಡಸೋಸಿ ಸಿದ್ಧಸಂಸ್ಥಾನ ಮಠದ ಡಾ.ಪಂಚಮಲಿಂಗೇಶ್ವರ ಮಹಾಸ್ವಾಮಿಗಳು ಹಾಗೂ ನಾಗನೂರು ರುದ್ರಾಕ್ಷಿ ಮಠದ ಶ್ರೀ ಡಾ. ಅಲ್ಲಮಪ್ರಭು ಸಾನ್ನಿಧ್ಯ ವಹಿಸಲಿದ್ದಾರೆ. ಗದಗ– ಡಂಬಳದ ತೋಂಟದಾರ್ಯ ಮಠದ ತೋಂಟದ ಶ್ರೀ ಸಿದ್ಧರಾಮ ಸ್ವಾಮಿಗಳು ಪುಸ್ತಕ ಲೋಕಾರ್ಪಣೆಗೈಯ್ಯುವರು.

ಹಿರಿಯ ಸಾಹಿತಿ ಡಾ.ಬಸವರಾಜ ಜಗಜಂಪಿ ಅಧ್ಯಕ್ಷತೆ ವಹಿಸುವರು. ಹಾರೂಗೇರಿಯ ಹಿರಿಯ ಸಾಹಿತಿ ಡಾ. ವಿ.ಎಸ್. ಮಾಳಿ ಅವರು 'ಕೃತಿಯ ವಸ್ತು ವಿವೇಚನೆ' ಕುರಿತು ಉಪನ್ಯಾಸ ನೀಡುವರು. ಸಂಕೇಶ್ವರದ ವಿಮರ್ಶಕ ಡಾ. ಗುರುಪಾದ ಮರಿಗುದ್ದಿ ಅವರು ಕೃತಿಯ ಅಭಿವ್ಯಕ್ತಿ, ವಿಧಾನ ಮತ್ತು ವಿನ್ಯಾಸ ಕುರಿತು ಉಪನ್ಯಾಸ ನೀಡುವರು.

ಕಾರ್ಯಕ್ರಮದಲ್ಲಿ ಚಿಕ್ಕೋಡಿಯ ಡಾ. ದಯಾನಂದ ನೂಲಿ ಹಾಗೂ ವಿಜಯನಗರದ ಶ್ರೀ ಕೃಷ್ಣದೇವರಾಯ ವಿವಿಯಿಂದ ಗೌರವ ಡಾಕ್ಟರೇಟ್ ಪುರಸ್ಕೃತ, ಕೆಎಲ್‌ಇ ಕ್ಯಾನ್ಸರ್ ಆಸ್ಪತ್ರೆಯ ಎಂಡಿ ಡಾ. ಎಂ.ವಿ. ಜಾಲಿ ಅವರನ್ನು ಸನ್ಮಾನಿಸಲಾಗುವುದು.

ವಿಶೇಷ ಮಂತ್ರಿತರಾಗಿ ಬೆಳಗಾವಿ ಕೆಎಲ್‌ಇ ಯುಎಸ್‌ಎಂ ವೈದ್ಯಕೀಯ ಕಾಲೇಜಿನ ನಿರ್ದೇಶಕ ಡಾ. ಎಚ್.ಬಿ. ರಾಜಶೇಖರ, ಕವಿ ಡಾ. ಸರಜೂ ಕಾಟ್ಕರ್, ಹಿರಿಯ ಸಾಹಿತಿ ಡಾ. ಗುರುದೇವಿ ಹುಲ್ಲೆಪ್ಪನವರಮಠ ವಿಶೇಷ ಮಂತ್ರಿತರಾಗಿ ಭಾಗವಹಿಸಲಿದ್ದಾರೆ

## ಅಪಘಾತ: ನಾಲ್ವರಿಗೆ ಗಂಭೀರ ಗಾಯ

ಬೆಳಗಾವಿ: ಕೆಎಸ್ ಆರ್ಟಿಸಿ ಬಸ್ ಹಾಗೂ ಬೈಕ್ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಒಂದೇ ಕುಟುಂಬದ ನಾಲ್ವರಿಗೆ ಗಂಭೀರ ಗಾಯಗೊಂಡಿರುವ ಘಟನೆ ಜಿಲ್ಲೆಯ ಖಾನಾಪುರ ತಾಲೂಕಿನ ಗೊಲ್ಲಿಹಳ್ಳಿ ಗ್ರಾಮದ ಬಳಿ ನಡೆದಿದೆ.

ಯಲ್ಲಪ್ಪ ವಣ್ಣೂರು, ಪಲ್ಲವಿ ವಣ್ಣೂರು, ಐಶ್ವರ್ಯಾ ವಣ್ಣೂರು, ಭೀಮಪ್ಪ ವಣ್ಣೂರ ಗಾಯಗೊಂಡಿದ್ದಾರೆ. ಇವರಲ್ಲಿ ಓರ್ವ ಮಹಿಳೆಯ ಕಾಲು ತುಂಡಾಗಿದೆ. ಒಂದು ಗಾಯಗೊಂಡು ಒಂದು ಗಂಟೆ ಕಳೆದರೂ ಸಮಯಕ್ಕೆ ಸರಿಯಾಗಿ ಆಂಬುಲೆನ್ಸ ಸ್ಥಳಕ್ಕೆ ಬಂದಿಲ್ಲ. ಕೊನೆಗೆ ತೀವ್ರವಾಗಿ ಗಾಯಗೊಂಡವರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಹಿನ್ನೆಲೆ: ಶಿರಸಿಯಿಂದ ಬೆಳಗಾವಿಯತ್ತ ಕೆಎಸ್ ಆರ್ಟಿಸಿ ಬಸ್ ಬರುತ್ತಿತ್ತು. ಕರತನಬಾಗೇವಾಡಿ ಗ್ರಾಮದಿಂದ ಗಸ್ಟೋಳಿ ಗ್ರಾಮಕ್ಕೆ ಬೈಕಿನಲ್ಲಿ ಇವರೆಲ್ಲರೂ ಬರುತ್ತಿದ್ದರು. ರಸ್ತೆ ತಿರುವಿನಲ್ಲಿ ಬೈಕ್ ನಿಯಂತ್ರಣ ತಪ್ಪಿ ಬಸ್ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಈ ಅವಘಡದಿಂದ ರಸ್ತೆ ಮೇಲೆ ಇಬ್ಬರ ಕಾಲುಗಳು ತುಂಡಾಗಿ ಬಿದ್ದಿವೆ. ಸ್ಥಳಕ್ಕೆ ನಂದಘಡ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ನಂದಘಡ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಎಮ್.ಡಿ.ಆರ್.ಎಸ್. ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ

ಬೆಳಗಾವಿ : ಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯ ಬೆಳಗಾವಿಯಲ್ಲಿ ಕೇಂದ್ರ ಸಚಿವ, ದಿವಂಗತ ಶ್ರೀ ಸುರೇಶಅಂಗಡಿ ಅವರ68ನೇ ಜನ್ಮ ದಿನಾಚರಣೆಯನ್ನು 1ನೇ ಜೂನ್2023 ರಂದು ಬೆಳಿಗ್ಗೆ ಇತ್ತೀಚಿಗೆ ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 95% ಕ್ಕಿಂತ ಹೆಚ್ಚು ಅಂಕ ಗಳಿಸಿದ ಎಮ್.ಡಿ.ಆರ್.ಎಸ್. ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ನಡೆಯಿತು.

ಶ್ರೀಮತಿ ಮಂಗಲ ಎಸ್. ಅಂಗಡಿ, ಸಂಸದರು ಹಾಗೂ ಅಧ್ಯಕ್ಷರು, ಸುರೇಶಅಂಗಡಿಎ–ಜ್ಯುಕೇಶನ್ ಫೌಂಡೇಶನ್‌ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಎಮ್.ಡಿ.ಆರ್.ಎಸ್. ವಿದ್ಯಾರ್ಥಿ ಸಾಧಕರನ್ನು ಸನ್ಮಾನಿಸಿ, ಎಮ್.ಡಿ.ಆರ್. ಎಸ್. ವಿದ್ಯಾರ್ಥಿಗಳಿಗೆ ಉಚಿತ ಸೀಟು




ಮಂಜೂರು ಮಾಡಲು ನಿರ್ಧರಿಸಿ ಅಂದಾಜು10 ಲಕ್ಷ ರೂಪಾಯಿಗಳ ವಿದ್ಯಾರ್ಥಿ ವೇತನವನ್ನು ಪ್ರಸಕ್ತ2023–24ನೇ ಶೈಕ್ಷಣಿಕ ಸಾಲಿನಲ್ಲಿಕೊಡಲಾಗುವುದೆಂದು ತಿಳಿಸಿದರು.

ಡಾ. ಸ್ಫೂರ್ತಿ ಪಾಟೀಲ, ನಿರ್ದೇಶಕಿ, ಸುರೇಶಅಂಗಡಿಎ–ಜ್ಯುಕೇಶನ್ ಫೌಂಡೇಶನ್‌ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮಎರಡು ವರ್ಷಗಳ ಮಹತ್ವದ ಸಮಯವನ್ನು ವಿನಿಯೋಗಿಸಲು ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಸಂಪೂರ್ಣವಾಗಿ ಮುಡಿಪಾಗಿಸಲು ಶ್ರಮಿಸಬೇಕುಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಸಮಯಅಥ–'ವಾಅವಕಾಶವನ್ನು ವ್ಯರ್ಥ ಮಾಡದೆ ಸಮಾಜಕ್ಕೆಗೌರವ ಮತ್ತು ಹೆಮ್ಮೆತರುವ ನಿಟ್ಟಿನಲ್ಲಿ ಕೆಲಸ ಮಾಡುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾಲೇಜಿನ ಪ್ರಾಚಾರ್ಯ ಪ್ರೊ. ಸಂಗೀತಾದೇಸಾಯಿ ಮಾತನಾಡಿ, ದಿವಂಗತ ಶ್ರೀ ಸುರೇಶ–ಅಂಗಡಿಯವರಜೀವನಧ್ಯೇಯ ಮತ್ತು ಕನಸಿನ ಕುರಿತು ವಿದ್ಯಾರ್ಥಿಗಳು ಸಂಸ್ಥೆಯಲ್ಲಿ ಗುಣಮಟ್ಟದ ಶಿಕ್ಷಣ ಪಡೆಯಲು ಸಹಾಯ ಮಾಡಿಕೊಡಲಾಗುವುದು.

ಶ್ರೀ ರಾಜು ಜೋಶಿ, ಆಡಳಿತಾಧಿಕಾರಿ, ಸುರೇಶ ಅಂಗಡಿಎಜ್ಯುಕೇಶನ್ ಫೌಂಡೇಶನ್, ಪ್ರೊ. ಆರ್ಕ.ಎಚ್. ಎಸ್. ಪಾಟೀಲ, ಪ್ರಾಚಾರ್ಯ–ಅಂಗಡಿ ಸ್ಕೂಲ್‌ಆಫ್. ಆರ್ಕಿಟೆಕ್ಚರ್, ಎಂ.ಕಾಂ.ವಿಭಾಗದ ಮುಖ್ಯಸ್ಥ ಪ್ರೊ. ಸಂಜೀವ ಬಸವರಾಜಕುಮಾರಮಠ ಹಾಗೂ ಎಲ್ಲ ಬೋದಕ, ಬೋದಕೇತರ ಸಿಬ್ಬಂದಿಯವರು ಉಪಸ್ಥಿತರಿದ್ದರು.

ಕುಮಾರಿ ತ್ರಿವೇಣಿ ಹುದಲಿಮಠ ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರೊ. ರೋಹನ್ ವಂದಿಸಿದರು. ಈ ಸಂದರ್ಭದಲ್ಲಿ ಪಾಲಕರು, ವಿದ್ಯಾರ್ಥಿಗಳು ಸಕ್ರೀಯವಾಗಿಪಾಲ್ಗೊಂಡುಕಾರ್ಯಕ್ರಮಕ್ಕೆ ಮೆರಗು ನೀಡಿದರು.

## ಗುತ್ತಿಗೆದಾರ ಆತ್ಮಹತ್ಯೆ



ಭಟ್ಕಳ: ಗುತ್ತಿಗೆದಾರನಾಗಿ ಕೆಲಸ ಮಾಡಿಕೊಂಡಿದ್ದ ವ್ಯಕ್ತಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಾಯ್ಕಿಣಿ ಗ್ರಾಮದ ಬಾಕಡಕೇರಿಯಲ್ಲಿ ವರದಿಯಾಗಿದೆ. ಮೃತ ಗುತ್ತಿಗೆದಾರನನ್ನು ಶಿರಾಲಿ ಮಣ್ಣಹೊಂಡ ನಿವಾಸಿ ದಿನೇಶ (28) ಎಂದು ಗುರುತಿಸಲಾಗಿದೆ.

ರಸ್ತೆ ಮತ್ತು ಇನ್ನಿತರ ಕಾಮಗಾರಿಗಳ ಗುತ್ತಿಗೆದಾರನಾಗಿ ಕೆಲಸ ಮಾಡಿಕೊಂಡಿದ್ದ ದಿನೇಶ್, ಕೆಲಸಕ್ಕೆ ಬೆಳಿಗ್ಗೆ ಮನೆಯಿಂದ ಹೋದವನು ಮನೆಗೆ ಬಾರದೆ ಯಾವುದೋ ವಿಷಯವನ್ನು ಮನಸ್ಸಿಗೆ ಹಚ್ಚಿಕೊಂಡು ಬಾಕಡಕೇರಿ ಸ್ಮಶಾನದ ಸಮೀಪ ಗೇರು ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿದ್ದಾನೆ ಎಂದು ತಿಳಿದು ಬಂದಿದೆ.

ಈ ಬಗ್ಗೆ ಮುರ್ಡೇಶ್ವರ ಪೊಲೀಸ್ ಠಾಣೆ ಯಲ್ಲಿ ಮೃತನ ಅಣ್ಣ ಸುಬ್ರಾಯ ನಾಯ್ಕ ದೂರು ನೀಡಿದ್ದು ದೂರನ್ನು ದಾಖಲಿಸಿ ಕೊಂಡ ಪಿ.ಎಸ್.ಐ ಮಂಜುನಾಥ ಘಟನಾ ಸ್ಥಳಕ್ಕೆ ಭೇಟಿ ನೀಡಿ ತನಿಖೆ ಕೈಗೊಂಡಿದ್ದಾರೆ. ಮೃತ ದೇಹವನ್ನು ಮುರ್ಡೇಶ್ವರ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಕುಟುಂಬದವರಿಗೆ ನೀಡಲಾಗಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ.

# 45 ವರ್ಷದ ಶಿಕ್ಷಕಿ ಕೊಟ್ಟ ಮಿಸ್ ಕಾಲ್: ಸಾವಿನೊಂದಿಗೆ ಅಂತ್ಯ

ಹೈದರಾಬಾದ್: 45 ವರ್ಷದ ಶಿಕ್ಷಕಿ ಮತ್ತು 25 ವರ್ಷದ ಯುವಕನ ನಡುವೆ ಒಂದು ಮಿಸ್ಕಾಲ್ನಿಂದ ಶುರುವಾದ ಪರಿಚಯ ವಿವಾಹೇತರ ಸಂಬಂಧಕ್ಕೆ ತಿರುಗಿ, ಕೊನೆಗೆ ಇಬ್ಬರ ಸಾವಿನಿಂದ ಸಂಬಂಧ ಅಂತ್ಯವಾಗಿರುವ ಘಟನೆ ಹೈದರಾಬಾದ್ನಲ್ಲಿ ನಡೆದಿದೆ.

ಶಿಕ್ಷಕಿ ಮತ್ತು ಯುವಕ ಇಬ್ಬರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೃತ ಯುವಕನ ಹೆಸರು ರಾಜೇಶ್. ಈತ ಮುಳುಗು ಜಿಲ್ಲೆಯ ಪಂಚೋತಕುಲಪಲ್ಲಿಯ ನಿವಾಸಿ. ಶಿಕ್ಷಕಿಯ ಹೆಸರು ಸುಜಾತ. ಈಕೆ



ಸರ್ಕಾರಿ ಶಾಲೆಯ ಶಿಕ್ಷಕಿಂ–ಯಾಗಿದ್ದು, ಗಂಡ ಮತ್ತು ಇಬ್ಬರು ಮಕ್ಕಳೊಂದಿಗೆ ಹಯಾತ್ ನಗರದಲ್ಲಿ ವಾಸವಿದ್ದರು. ಇಬ್ಬರು ಮೇ 29ರಂದು ಹಯಾತ್ನಗರ ಸಮೀಪದ ಕುಂಟ್ಲೂರು ಬಳಿಕ ಶವವಾಗಿ ಪತ್ತೆಯಾಗಿದ್ದರು.

ಸುಮಾರು ಒಂದೂವರೆ ವರ್ಷಗಳ ಹಿಂದೆ ರಾಜೇಶ್ ಫೋನ್ಗೆ ಒಂದು ಮಿಸ್ ಕಾಲ್ ಬಂತು. ಆ ಕಾಲ್ ಮಾಡಿದ್ದು ಶಿಕ್ಷಕಿ ಸುಜಾತ. ಮಿಸ್ ಕಾಲ್ ನೋಡಿ ವಾಪಸ್ ಕರೆ ಮಾಡಿದಾಗ ರಾಜೇಶ್ ಮತ್ತು ಸುಜಾತ ನಡುವೆ ಪರಿಚಯವಾಗಿದೆ.

ಈ ವೇಳೆ ಸುಜಾತಾ ತನಗೆ ಮದುವೆ ಆಗಿಲ್ಲ ಎಂದು ಹೇಳಿಕೊಂಡಿದ್ದರು. ಯುವಕನು ಕೂಡ ಮದುವೆ ಆಗಿರಲಿಲ್ಲ. ಇಬ್ಬರು ಚಾಟಿಂಗ್ ಮಾಡಲು ಆರಂಭಿಸಿದರು.

ಪರಸ್ಪರ ಚಾಟಿಂಗ್ ಮಾಡುತ್ತಾ ಇಬ್ಬರ ನಡುವಿನ ಸ್ನೇಹ ಗಟ್ಟಿಯಾಗಿ ಅದು ಪ್ರೇಮಕ್ಕೆ ತಿರುಗಿದೆ. ಸಮಯ ಸಿಕ್ಕಾಗ ದೈಹಿಕ ಸಂಪರ್ಕ ಬೆಳೆಸಿದ್ದಾರೆ. ಇದಾದ ಬಳಿಕ ಮದುವೆಯಾವುದಾಗಿ ರಾಜೇಶ ಕೇಳಿಕೊಂಡಾಗ ನನ್ನಗೆ ಮದುವೆಯಾಗಿ ಎರಡು ಮಕ್ಕಳಿದಾರೆ, ನಮ್ಮಿಬ್ಬರ ಪ್ರೇಮ ಹೀಗೆ ಸಾಗಲಿ ಎಂದು ಹೇಳಿದ ಶಿಕ್ಷಕಿಯ ಮಾತಿಗೆ, ರಾಜೇಶ ನಿರಾಕರಿಸಿ ದೂರ ವಾಗಿದ್ದಾರೆ. ಇದರಿಂದ ನೊಂದು ಶಿಕ್ಷಕಿ ವಿಷಸೇವಿಸಿ ಸಾವಿನ ದಾರಿ ಹಿಡಿದಿದ್ದಾಳೆ. ಈ ವಿಚಾರ ತಿಳಿಯುತ್ತಿದಂತೆ ರಾಜೇಶ ಮೃತಪಟ್ಟಿದ್ದಾರೆ ಎನ್ನಲಾಗಿದೆ.

## ಆರತಿ ಬೆಳಗಿ ಮಕ್ಕಳಿಗೆ ಸ್ವಾಗತ



ನಾಲತವಾಡ: ಸಮೀಪದ ಕೆಸಾಪೂರದ ಸಿದ್ದಾಥ–'ರ್ ಪಬ್ಲಿಕ್ ಶಾಲೆ ಯಲ್ಲಿ 'ಶಾಲಾ ಪ್ರಾರಂಭೋತ್ಸವ' ಹಮ್ಮಿಕೊಳ್ಳಲಾಗಿತ್ತು.

ಶಾಲೆಯ ಹೊರಾಂಗಣದಲ್ಲಿ ಆಗಮಿಸುತ್ತೀರುವ ಮಕ್ಕಳಿಗೆ ಸರಸ್ವತಿ ದರ್ಶನಕ್ಕೆ ಏರ್ಪಡಿಸಲಾಗಿತ್ತು.

ಸಂಸ್ಥೆಯ ಅಧ್ಯಕ್ಷೆ ಸರಸ್ವತಿ ಖಾನಾಪೂರ ಅವರು ವಿದ್ಯಾದೇವಿಯ ಭಾವಚಿತ್ರಕ್ಕೆ ಹೂಮಾಲೆ ಸಮರ್ಪಿಸಿದರು.

ಶಾಲೆಗೆ ಆಗಮಿಸುತ್ತಿದ್ದ ಎಲ್ಲಾ ಮಕ್ಕಳಿಗೂ ಶಿಕ್ಷಕರು ದೀಪದ ಆರತಿ ಬೆಳಗಿ ಬರಮಾಡಿಕೊಂಡರು ಮತ್ತೊಂದೆಡೆ ಸಂಸ್ಥೆಯ ಕಾರ್ಯದರ್ಶಿ ರಾಮಣ್ಣ ಖಾನಾಪೂರ ಅವರು ಮಕ್ಕಳಿಗೆ ಗುಲಾಬಿ ಹೂವು ನೀಡಿ ಶಾಲಾ ಸಾಮಾಗ್ರಿಗಳನ್ನು ವಿತರಣೆ ಮಾಡಿ ಬರಮಾಡಿಕೊಂಡರು. ಈ ವೇಳೆ ಸಂಸ್ಥೆ ಸಿಬ್ಬಂದಿಗಳು ಇದ್ದರು.

## ಶಾಲಾ ಮಕ್ಕಳಿಗೆ ಪೆನ್ ಪುಸ್ತಕ ವಿತರಣೆ



ಕವಿತಾಳ: ಪಟ್ಟಣದ ಅಂಬೇಡ್ಕರ್ ಶಾಲೆ ಮಕ್ಕಳಿಗೆ ಪೆನ್ ಮತ್ತು ಪಠ್ಯ ಪುಸ್ತಕಗಳನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕು ಅಂದಾಗ ಮಾತ್ರ ಶೈಕ್ಷಣಿಕ ಅಭಿವೃದ್ಧಿ ಹೊಂದಲು ಸಾಧ್ಯವೆಂದು ಭೀಮ್ ಆರ್ಮಿ ಸಂಘದ ಹೋಬಳಿ ಘಟಕದ ಅಧ್ಯಕ್ಷರಾದ ಆಜಪ್ಪ ಬಿ ಹೇಳಿದರು.

ಗುರುವಾರ ಪಟ್ಟಣದ ಅಂಬೇಡ್ಕರ್ ಸರಕಾರಿ ಹಿರಿಯ ಪ್ರಾಥ–'ಮಿಕ ಶಾಲಾ ಮಕ್ಕಳಿಗೆ ಉಚಿತ ಪೆನ್ ಮತ್ತು ಪಠ್ಯ ಪುಸ್ತಕ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿ ಅವರು ಈ ಶಾಲೆಯಲ್ಲಿ ಶೇಕಡಾ ನೂರಕ್ಕೂ ಹೆಚ್ಚು ಮಕ್ಕಳು ಹಿಂದುಳಿದ ಬಡ ಕುಟುಂಬಕ್ಕೆ ಸೇ–ರಿದವರಾಗಿದ್ದು, ಈ ಮಕ್ಕಳ ಉಜ್ವಲ ಭವಿಷ್ಯ ರೂಪಿಸಿ,ಶೈಕ್ಷಣಿಕವಾಗಿ ಮುಂದೆ ಬರಲು ನಮ್ಮ ಸಂಘಟನೆ ವತಿಯಿಂದ ಶಾಲಾ ಮಕ್ಕಳಿಗೆ ಉಚಿತವಾಗಿ ಪೆನ್ ಮತ್ತು ಪುಸ್ತಕ ವಿತರಣೆ ಮಾಡುವುದು ಉತ್ತಮ ಬೆಳವಣಿಗೆಯಾಗಿದೆ. ಪ್ರತಿಯೊಂದು ಮಕ್ಕಳು ಇದರ ಉಪಯೋಗ ಪಡೆಯಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಸದಸ್ಯರಾದ ಎಲಿಜಾ ಓವನ್,ಶಾಲಾ ಮುಖ್ಯ ಗುರುಗಳಾದ ಇಂದುಮತಿ, ಶಾಲಾ ಸಿಬ್ಬಂದಿಗಳಾದ ಶಿಲ್ಪಾ, ಲಕ್ಷ್ಮಿ, ಪಟ್ಟಣದ ಕಾಂಗ್ರೆಸ್ ಮುಖಂಡರಾದ ಮೌನೇಶ ಕೊಡ್ಲಿ, ಎ ಡಿ ಎಮ್ ಅಕ್ಬರ್, ಮೌನೇಶ ಹಿರೇಕುರುಬರ, ನಾಗರಾಜ ಸಾಹುಕಾರ್, &ಭೀಮ್ ಆರ್ಮಿ ಸಂಘದ ಪದಾಧಿಕಾ–ರಿಗಳಾದ ಅಮರೇಶ ಬಿ, ಮೌನೇಶ ಈರಬಗೇರಿ, ಕರಿಯಪ್ಪ ಬಿ, ಮಹಾದೇವ ಬಿ, ಲಾಲಾಸಿಂಗ್ ಪೂಜಾರಿ,ಯಲ್ಲಪ್ಪ, ಲಾಳೆಪ್ಪ, ಕಾಶೀನಾಥ್, ವಿನೋದ್, ಮೌನೇಶ, ಮನೋಹರ್, ವಿನೋದ್ ಎಮ್, ಮಹಾಲಿಂಗ, ಅಭಿಲಾಷ್ ಸೇರಿದಂತೆ ಇತರಿದ್ದರು.

## ಸಮುದ್ರದಲ್ಲಿ ಮುಳುಗುತ್ತಿದ್ದ ಮೂವರನ್ನು ರಕ್ಷಿಸಿದ ಬಿಜೆಪಿ ಶಾಸಕ



ಗುಜರಾತ: ಸಮುದ್ರದಲ್ಲಿ ಮುಳುಗುತ್ತಿದ್ದ ಮೂವರು ಯುವಕರನ್ನು ಬಿಜೆಪಿ ಶಾಸಕರೊಬ್ಬರು ರಕ್ಷಣೆ ಮಾಡಿರುವ ಘಟನೆ ಗುಜರಾತಿನ ಪಟ್ವಾ ಗ್ರಾಮದಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಪಟ್ವಾ ಗ್ರಾಮದ ಸಮೀಪ ಸಮುದ್ರ ತೀರಕ್ಕೆ ಸ್ನಾನಕ್ಕೆಂದು ಬಂದು ನೀರಿಗೆ ಇಳಿದಿದ್ದ ಕಲ್ಪೇಶ್ ಶಿಯಾಲ್, ವಿಜಯ್ ಗುಜಾರಿಯಾ, ನಿಕುಲ್ ಗುಜಾರಿಯಾ ಮತ್ತು ಜೀವನ್ ಗುಜಾರಿಯಾ ಎನ್ನುವ ಯುವಕರನ್ನು ರಕ್ಷಿಸಲಾಗಿದೆ.

ಇವರು ಸಮುದ್ರದ ಅಲೆಗೆ ಸಿಲುಕಿ ನಾಲ್ವರು ಮುಳುಗಲು ಶುರು ಮಾಡಿದಂತೆ ಕಾಪಾಡಿ ಎಂದು ಕಿರುಚಾಡಲು ಶುರು ಮಾಡಿದ್ದಾರೆ.

ಇದೇ ವೇಳೆ ಸ್ಥಳೀಯರು ಸೇರಿದಂತೆ ಅಲ್ಲೇ ಇದ್ದ ಗುಜರಾತ್‌ನ ರಾಜುಲಾದ ಬಿಜೆಪಿ ಶಾಸಕರಾಗಿರುವ ಹೀರಾ ಸೋಲಂಕಿ ಅವರು ರಕ್ಷಣೆಗೆ ಬಂದಿದ್ದಾರೆ. ತಾನೊಬ್ಬ ಶಾಸಕ ಎನ್ನುವುದನ್ನು ನೋಡದೇ ನೇರವಾಗಿ ಜೀವ ರಕ್ಷಣೆಗೆ ಹೀರಾ ಸೋಲಂಕಿ ಸಮುದ್ರಕ್ಕೆ ಹಾರಿದ್ದಾರೆ ಎಂದು ವರದಿಯಿಂದ ತಿಳಿದುಬಂದಿದೆ.

ನಾಲ್ವರಲ್ಲಿ ಮೂವರನ್ನು ರಕ್ಷಣೆ ಮಾಡಿದ್ದು, ಒಬ್ಬ ಆಳ ಸಮುದ್ರದಲ್ಲಿ ಮುಳುಗಿ ಮೃತಪಟ್ಟಿದ್ದಾನೆ. ಆತನ ಮೃತದೇಹ ಪತ್ತೆಯಾಗಿದೆ.

## ವಿದ್ಯಾರ್ಥಿಗಳಿಗೆ ಹೂ ನೀಡಿ ಶಾಲೆಗೆ ಸ್ವಾಗತ

ಸಿರವಾರ: ತಾಲೂಕಿನ ಮಾಡಗಿರಿ ಗ್ರಾಮದ ಉನ್ನತಿ–ಕರಿಸಿದ ಸರ್ಕಾರ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ದಂದು ಶಾಲೆಯ ಎಸ್ಡಿಎಂಸಿ ಅಧ್ಯಕ್ಷ ಹನುಮಂತ ರವರು ವಿದ್ಯಾರ್ಥಿಗಳಿಗೆ ಹೂ ಗುಚ್ಚಿ ನೀಡುವ ಮುಖಾಂತರ ಶಾಲೆಗೆ ಮಕ್ಕಳನ್ನು ಬರಮಾಡಿಕೊಂಡರು.

ನಂತರ ಮಾತನಾಡಿದ ಅವರು 2023–24ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭೋತ್ಸವ ಆರಂಭವಾಗಿದೆ.

ವಿದ್ಯಾರ್ಥಿಗಳು ಸರಕಾರಿ



ಶಾಲೆಯಲ್ಲಿ ಉಚಿತ ಗುಣಮಟ್ಟದ ಶಿಕ್ಷಣ ದೊರೆಯುತ್ತದೆ.

ಸರಕಾರ ಮಕ್ಕಳಿಗಾಗಿ ಹಲವಾರು ಯೋಜನೆಗಳನ್ನು ಉಚಿತ ನೀಡಲಾಗುತ್ತಿದೆ. ಇದನ್ನು ಮಕ್ಕಳ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖೋಪಧ್ಯಾರಾದ ಇಂದ್ರಮ್ಮ, ಎಸ್ಡಿಎಂಸಿ ಸದಸ್ಯರು,ಶಿಕ್ಷಕರು ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ವಿದ್ಯಾರ್ಥಿಗಳು ಆರೋಗ್ಯಕರ ಅಭ್ಯಾಸಗಳನ್ನು ರೂಡಿಸಿಕೊಳ್ಳಿ: ನ್ಯಾ ದೇವೇಂದ್ರ ಪಂಡಿತ

ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ಸರಕಾರಿ ಪಾಲಿಟೆಕ್ನಿಕಲ್ ಕಾಲೇಜ ದದೇಗಲ್–ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಮೇ 31ರಂದು "ವಿಶ್ವ ತಂಬಾಕು ರಹಿತ ದಿನಾಚರಣೆ" ಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಗೌರವಾನ್ವಿತ ಹಿರಿಯ ಸಿವ್ಹಿಲ್ ನ್ಯಾಯದೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರದ ಸದಸ್ಯ ಕಾರ್ಯದರ್ಶಿಗಳಾದ ದೇವೇಂದ್ರ ಪಂಡಿತ ಅವರು ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ, ಸಂವಿಧಾನ ಮತ್ತು ಭಗವದ್‌ಗೀತೆಯ ಕುರಿತು ವಿದ್ಯಾರ್ಥಿಗಳಿಗೆ ಅದರ ಮಾಹಿತಿ ನೀಡಿದರು. ಬಳಿಕ ಮಾತನಾಡಿ, ಇಂದಿನ ಯುವಕರು ನಾಳಿನ ಪ್ರಜೆಗಳಾಗಿದ್ದಾರೆ. ಇಂದಿನ ಯುವ ಜನತೆ ತಂಬಾಕು ಸೇವನೆಯಂತಹ ದುಷ್ಚಟಕ್ಕೆ ಒಳಗಾಗುತ್ತಿದ್ದಾರೆ. ಇದರಿಂದ ಅವರ ಆರೋಗ್ಯ ಮತ್ತು ಸಮಾಜದ ಮೇಲೆ ಬಹಳಷ್ಟು ದುಷ್ಪರಿಣಾಮಗಳು ಬೀರುತ್ತವೆ. ತಂಬಾಕು ಸೇವನೆಯಿಂದ ಮನುಷ್ಯನ ದೇಹದ ಮೇಲೆ ಅಂಗಾಂಗ ವೈಕಲ್ಯ ಉಂಟಾಗುತ್ತದೆ ಮತ್ತು ದೇಶದ ಆರ್ಥಿಕ ಅಭಿವೃದ್ಧಿಯಲ್ಲಿಯೂ ಸಹ ಕುಂಠಿತಗೊಳ್ಳುತ್ತದೆ. ಈ ನಿಟ್ಟಿನಲ್ಲಿ ಯುವ ಜನತೆಯ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಜವಬ್ದಾರಿಯಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದರೆ ಕೊಟ್ಪಾ–2003ರ ಕಾಯ್ದೆಯ ಪ್ರಕಾರ ದಂಡ ಮತ್ತು ಶಿಕ್ಷೆ ವಿಧಿಸಲಾಗುತ್ತದೆ. ಆದ್ದರಿಂದ ಎಲ್ಲಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಒಳ್ಳೆಯ



ಆರೋಗ್ಯಕರ ಅಭ್ಯಾಸಗಳನ್ನು ರೂಡಿಸಿ, ತಮ್ಮ ಆರೋಗ್ಯವನ್ನು ಕಾಪಾಡಿಕೊಂಡು ಉತ್ತಮ ಸಮಾಜ ನಿರ್ಮಾಣ ಮಾಡೋಣ ಎಂದು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ನಂದಾಕುಮಾರ ಅವರು ಮಾತನಾಡಿ, ಪ್ರತೀ ವರ್ಷದಂತೆ ಈ ವರ್ಷವೂ ಮೇ 31 ರಂದು "ವಿಶ್ವ ತಂಬಾಕು ರಹಿತ ದಿನಾಚರಣೆ" ಕಾರ್ಯಕ್ರಮ ಆಚರಿಸಲಾಗುತ್ತದೆ. ಈ ವರ್ಷದ ಘೋಷವಾಕ್ಯವಾದ "ನಮಗೆ ಆಹಾರ ಬೇಕು ತಂಬಾಕು ಅಲ್ಲ" ಎಂಬ ವಾಕ್ಯದೊಂದಿಗೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮದ ಉದ್ದೇಶ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪ–ರಿಣಾಮಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ.

ರಾಜ್ಯದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು 1988 ಮೇ 31 ರಿಂದ ಆಚರಿಸಲಾಗುತ್ತಿದೆ. ತಂಬಾಕು ಸೇವನೆ ತ್ಯಜಿಸುವುದ–ರಿಂದ ಮನುಷ್ಯನ ದೇಹದಲ್ಲಿ ಸಾಕಷ್ಟು ಪ್ರಯೋಜನಗಳಾಗಲಿವೆ. ತಂಬಾಕಿನಲ್ಲಿ 7000 ವಿಷಾ ಅನಿಲಗಳು ಇರುತ್ತವೆ. ತಂಬಾಕು ತ್ಯಜಿಸಿದ 20 ನಿಮಿಷದಲ್ಲಿ ರಕ್ತದ ಒತ್ತಡ, ನಾಡಿ ಬಡಿತ ಮತ್ತು ದೇಹದ ಉಷ್ಣತೆ ಸಾಮಾನ್ಯ ಸ್ಥಿತಿಗೆ ಬರುತ್ತದೆ. ಗಂಟೆಯ ನಂತರ ದೇಹದಲ್ಲಿನ ಆಮ್ಲಜನಕ ಸಮಸ್ಥಿತಿಗೆ ಬಂದು ಉಸಿರಾಟ ಪ್ರಕ್ರಿಯೆ ಸರಳವಾಗುತ್ತದೆ. 24 ಗಂಟೆಯ ನಂತರ ಹೃದಯಾಘಾತವಾಗುವ ಸಂಭವ ಕಡಿಮೆಯಾಗುತ್ತದೆ. 48 ಗಂಟೆಯ ನಂತರ ದೇಹದ ನರಮಂಡಲ ಸರಿಯಾಗಿ ಕೆಲಸಮಾಡಲು ಶುರುವಾಗುತ್ತದೆ. ಬಾಯಿರುಚಿ ಮತ್ತು ವಾಸನೆ ಗ್ರಹಿಕೆ ಸರಿಯಾಗುತ್ತದೆ. 2 ವಾರದಿಂದ 3 ತಿಂಗಳವರೆಗೆ ರಕ್ತ ಪರೀಚಲನೆ ಸರಿಯಾಗಿ ದೇಹದ ಸಾಮಥ–'ರ್ಯ ಹೆಚ್ಚುತ್ತದೆ. ಪುಪ್ಪುಸ ಕಾರ್ಯ ಶೇ 30ರಷ್ಟು ಜಾಸ್ತಿಯಾಗುತ್ತದೆ. ಭಾರತ ದೇಶದಲ್ಲಿಯೇ ತ್ರಿಪುರಾ ರಾಜ್ಯ ಹೆಚ್ಚು ತಂಬಾಕು ತಿನ್ನುವ ರಾಜ್ಯವಾಗಿದೆ (65%).'ಗ್ಲೋಬಲ್ ಅಡಲ್ಟ್ ಟಬಾಕೋ ಸರ್ವೇ' ಅನುಸಾರ ಕರ್ನಾಟಕ ರಾಜ್ಯದಲ್ಲಿ ಶೇ 28.2 ರಷ್ಟು ವಯಸ್ಕರು (15 ವರ್ಷ ಮತ್ತು ಮೇಲ್ಪಟ್ಟವರು) ತಂಬಾಕು ವ್ಯಸನಿಗಳಿದ್ದಾರೆ. ಅದರಲ್ಲಿ ಶೇ 12ರಷ್ಟು ಧೂಮಪಾನಿಗಳು ಮತ್ತು ಶೇ 19ರಷ್ಟು ಹೊಗೆರಹಿತ ತಂಬಾಕು ಬಳಸುತ್ತಾರೆ ಎಂದರು.

ತಂಬಾಕಿನ ಬಗೆಗಿನ ಸತ್ಯಾಂಶಗಳು ಮತ್ತು ವಿಶ್ವದಾದ್ಯಂತ ತಂಬಾಕು ಸೇವನೆಯಿಂದ ಹಾಗೂ ಧೂಮಪಾನದಿಂದ ಬರಬಹುದಾದಂತಹ ಖಾಯಿಲೆಗಳಾದ ಬಾಯಿ ಕ್ಯಾನ್ಸರ್, ಹೃದಯ ಸಂಬಂಧಿತ ಕಾಯಿಲೆಗಳು, ಶ್ವಾಸಕೋಶದ ಕಾಯಿಲೆಗಳ ನಿಯಂತ್ರಣ ಮತ್ತು ತಡೆಗಟ್ಟುವ ಕ್ರಮಗಳ ಕುರಿತು ವಿವರವಾಗಿ ತಿಳಿಸಿದರು.

ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾ–ರಿಗಳಾದ ಡಾ.ರವೀಂದ್ರನಾಥ ಎಂ.ಹೆಚ್ ಅವರು ಮಾತನಾಡಿ, ಇತ್ತಿಚಿನ ದಿನಗಳಲ್ಲಿ ಯುವಕರು ಹೆಚ್ಚಾಗಿ ದುಷ್ಚಟಕ್ಕೆ ಒಳಗಾಗುತ್ತಿದ್ದು, ಅದಿಹರೆಯದವರ ಆರೋಗ್ಯ ಸಮಸ್ಯೆಗಳು ಮತ್ತು ಪರಿಹಾರ ಕುರಿತು ತಿಳಿಸುತ್ತಾ, ತಂಬಾಕು ಸೇವನೆಯಿಂದ ದೂರವಿದ್ದು, ಯುವಕರು ಜಾಗೃತರಾಗಿ ತಮ್ಮ ವಿದ್ಯೆ ಮತ್ತು ಜೀವನದ ಕಡೆಗೆ ಹೆಚ್ಚು ಗಮನ ಹರಿಸಬೇಕೆಂದು ತಿಳಿಸಿದರು.

ತಾಲೂಕ ಆರೋಗ್ಯಾಧಿಕಾ–ರಿಗಳಾದ ಡಾ.ರಾಮಾಂಜನೇಯ ಅವರು ಮಾತನಾಡಿ, ತಂಬಾಕು ವ್ಯಸನ ಮುಕ್ತಕೇಂದ್ರ, ಕೊಪ್ಪಳ ಜಿಲ್ಲಾ ಆಸ್ಪತ್ರೆಯಲ್ಲಿ ದೊರೆಯುವ ಸೌಲಭ್ಯಗಳ ಕುರಿತು ಹಾಗೂ ಪೌಷ್ಠಿಕ ಆಹಾರ ಸೇವನೆ ಕುರಿತು ಮಾಹಿತಿ ನೀಡಿದರು ಮತ್ತು ವಿದ್ಯಾರ್ಥಿಗಳಿಗೆ ನಿಮ್ಮ ಸ್ನೇಹಿತರು ಅಥವಾ ನಿಮ್ಮ ಮನೆಯಲ್ಲಿ ತಂಬಾಕು ಸೇವನೆ ಮಾಡುವವರು ಇದ್ದಲ್ಲಿ ತಂಬಾಕು ವ್ಯಸನ ಮುಕ್ತಕೇಂದ್ರವನ್ನು ಸಂಪರ್ಕಿಸಲು ತಿಳಿಸಿದರು.

## ಜಿಲ್ಲಾ ಮಟ್ಟದ ಭೂ ಸಾಹಸ ತರಬೇತಿ ಶಿಬಿರ ಜೂನ್ 12 ರಿಂದ

ಬೆಳಗಾವಿ: 2023–24ನೇ ಸಾಲಿನ ಜಿಲ್ಲಾ ಮಟ್ಟದ 5 ದಿನಗಳ ಸಾಹಸ ತರಬೇತಿ ಕಾರ್ಯಕ್ರಮವನ್ನು 15 ರಿಂದ 29 ವರ್ಷ ವಯೋಮಿತಿಯುಳ್ಳ ಯುವಕ/ಯುವತಿಯರಿಗೆ ಜೂನ್, 12 ರಿಂದ ಜೂ.16 ರವರೆಗೆ ಸವದತ್ತಿ ತಾಲೂಕಿನ ಸೊಗಲು ಕ್ಷೇತ್ರದ ಯುವಜನ ವಸತಿ ನಿಲಯದಲ್ಲಿ ನಡೆಸಲಾಗುವುದು.

ತರಬೇತಿ ಶಿಬಿರದಲ್ಲಿ ಶಿಲಾರೋಹನ, ಅವರೋಹನ, ನದಿ ದಾಟುವದು, ಪ್ರಾಣಿ ಪಕ್ಷಿ ವೀಕ್ಷಿಸುವದು, ಸರ್ಪಗಳನ್ನು ಹಿಡಿಯುವದು ಮತ್ತು ಸಂರಕ್ಷಿಸುವದು, ಕಂಪಾಸ್ ರೀಡಿಂಗ್, ಪೆಟ್ರೋಲಿಂಗ್ ಮತ್ತು ಪರಿಸರಚಾರಣ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಇಂತಹ ಸಾಹಸ ಶಿಬಿರಗಳಲ್ಲಿ ಈ ಹಿಂದೆ ಭಾಗವಹಿಸದೇ ಇರುವಂತಹ ಸಾಹಸ ಚಟುವಟಿಕೆಗಳಲ್ಲಿ ಆಸಕ್ತಿಯುಳ್ಳ ಬೆಳಗಾವಿ ಜಿಲ್ಲೆಯ ಯುವಕ/ಯುವತಿಯರು ಜೂ.9 2023 ರ ಒಳಗಾಗಿ ತಮ್ಮ ಹೆಸರುಗಳನ್ನು ನೋಂದಾಯಿಸಬೇಕು ಹಾಗೂ ಭಾಗವಹಿಸುವ ಶಿಬಿರಾರ್ಥಿಗಳಿಗೆ ಉಚಿತ ಊಟೋಪಹಾರ ಹಾಗೂ ವಸತಿ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.

ಸಾಹಸ ತರಬೇತಿ ಶಿಬಿರದಲ್ಲಿ ಭಾಗವಹಿಸಲು ಹೆಸರುಗಳ ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ. 0831–2950306 ಅಥವಾ ಜಿಲ್ಲಾ ಸಾಹಸ ತರಬೇತಿ–ದಾರರಾದ ರಮೇಶ ಅಲಗುಡೇಕರ ದೂರವಾಣಿ ನಂ–9448161790 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರಿಯ ಮಲೇರಿಯಾ ಮಾಸಾಚರಣೆ: ಪ್ರಚಾರ ಹಾಗೂ ಜನರಲ್ಲಿ ಅರಿವು

ಬೆಳಗಾವಿ: ಮಲೇರಿಯಾ ನಿಯಂತ್ರಣದ ಬಗ್ಗೆ ಸಮುದಾಯದಲ್ಲಿ ಹೆಚ್ಚಿನ ಮಾಹಿತಿ ಮತ್ತು ಅರಿವು ಮೂಡಿಸುವ ಸಲುವಾಗಿ "ಶೂನ್ಯ ಮಲೇರಿಯಾ ಗುರಿಯನ್ನು ತಲುಪೋಣ : ನವೀನ ವಿಧಾನಗಳನ್ನು ಅಳವಡಿಸಿ ಅನುಷ್ಠಾನಗೊಳಿಸೋಣ" ಎಂಬ ಧ್ಯೇಯ ವಾಕ್ಯದೊಂದಿಗೆ ವಿಶ್ವ ಮಲೇರಿಯಾ ದಿನವನ್ನು ಏಪ್ರೀಲ್.25 2023 ರಂದು ಆಚ–ರಿಸಲಾಯಿತು.

ದೇಶಾದ್ಯಂತ ವಿವಿಧ ಚಟುವಟಿಕೆಗಳ ಮೂಲಕ ಮಲೇರಿಯಾ ನಿವಾರಣೆಗಾಗಿ ಜನಸಾಮಾನ್ಯರಲ್ಲಿ ಮಲೇರಿಯಾ ತಡೆಗಟ್ಟುವಿಕೆ ಮತ್ತು ನಿಯಂತ್ರಣದ ಬಗ್ಗೆ ಜಾಗೃತಿ ಮೂಡಿಸಲು ಜೂನ್ ಮಾಹೆಯಾದ್ಯಂತ ಮಲೇರಿಯಾ ವಿರೋಧಿ ಮಾಸಾಚರಣೆಯನ್ನು ಆಚರಿಸಲಾಗುವುದು.

ಮಲೇರಿಯಾ ನಿವಾರಣೆಯಲ್ಲಿ ಸಮುದಾಯದ ಸಕ್ರಿಯ ಭಾಗವಹಿಸುವಿಕೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಗತ್ಯ ಸಹಕಾರ ಪಡೆಯುವದು, ಅಲ್ಲದೇ ಸ್ವಯಂ ಸೇವಾ ಸಂಘಗಳು ಸ್ಥಳಿಯ ಪ್ರಮುಖ ವ್ಯಕ್ತಿಗಳು ಹಾಗೂ ಧಾರ್ಮಿಕ ಮುಖಂಡರ ಸಹಭಾಗಿತ್ವದಲ್ಲಿ ಮಲೇರಿಯಾ ಮತ್ತು ಅದರಿಂದಾಗುವ ಮರಣವನ್ನು ತಡೆಗಟ್ಟುವದ–ರಿಂದ ಧ್ಯೇಯವಾಕ್ಯವನ್ನು ಕಾರ್ಯಗೊಳಿಸಿದಂತಾಗುತ್ತದೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಗಳಾದ ಡಾ ಎಂ.ಎಸ್ ಪಲ್ಲೇದ ಅವರು ತಿಳಿಸಿದರು.

ಅದೇ ರೀತಿಯಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ಮತ್ತು ತಾಲೂಕಾ ಆರೋಗ್ಯ ಕುಟುಂಬ ಕಲ್ಯಾಣ ಪ್ರಾ ಕೇಂದ್ರ ವಂಟಮೂರಿ(ನ) ಹಾಗೂ ರೋಟರಿ ( ಓಂಡಿಣಃ ) ಇವರ ಸಂಂ–ಯುಕ್ತ ಆಶ್ರಯದಲ್ಲಿ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆ ರಾಮತೀರ್ಥ ನಗರ ಮಕ್ಕಳು ಹಾಗೂ ಶಿಕ್ಷಕರು ಮುಖ್ಯೋಪಾಧ್ಯಾಯರು ಇವರ ಸಹಾಕಾರದಿಂದ ಜೂನ್.01 2023 ರಂದು ರಾಷ್ಟ್ರೀಯ ಮಲೇ–ರಿಯಾ ಮಾಸಚರಣೆ ಜೂನ್–2023 ರ ಸಾಂಕೇತವಾಗಿ ಉದ್ಘಾಟಣೆ ಮಾಡಲಾಯಿತು

ಮಲೇರಿಯಾ ನಿರ್ಮೂಲನೆ 2023–25 ರ ರಾಜ್ಯ ರೂಪರೇಶಗಳನ್ನು ಕಾರ್ಯಗತಗೊಳಿಸುವಲ್ಲಿ ಎಲ್ಲಾ ಇಲಾಖೆಗಳು ಹಾಗೂ ಶಾಲಾ ಮಕ್ಕಳು ಸದರಿ ಕಾರ್ಯಕ್ರಮದ ರಾಯಭಾರಿಗಳಾಗಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಗಳಾದ ಡಾ ಎಂ.ಎಸ್ ಪಲ್ಲೇದ ಕರೆ ನೀಡಿದರು.

ಪರಿಸರ ಸ್ವಚ್ಛತೆ ಸೊಳ್ಳೆಗಳ ನಿಯಂತ್ರಣ ಮಾಡುವಲ್ಲಿ ಸಹಕಾರ ನೀಡುತ್ತದೆ ಎಂದು ತಿಳಿಸಿದರು.

ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಕಿವುಡ ಸಣ್ಣವರ್, ಪ್ರಾ. ಆ ಕೇಂದ್ರ ವಂಟಮೂರಿಯ(ನ) ಡಾ. ಜಯಾನಂದ ಧನವಂತ ಅವರು ಮಲೇರಿಯಾ ಮಾಸಾಚರಣೆಯ ಅಂಗವಾಗಿ ಸಮುದಾಯದ ಸಹಭಾಗಿತ್ವದ ಸಲುವಾಗಿ ಮನೆಯ ಸಂಪುಗಳಲ್ಲಿ ಲಾರ್ವಾಹಾರಿ ಮೀನು(ಗಪ್ಪಿ ಗ್ಯಾಂಬುಸಿಯಾ) ಬೆಳೆಸುವುದರಿಂದ ಸೊಳ್ಳೆಗಳ ಸಂತತಿಯನ್ನು ಜೈವಿಕ ನಿಯಂತ್ರಣ ಮಾಡುವಲ್ಲಿ ಸಹಕಾರಿ ಆಗುತ್ತದೆ ಎಂದು ತಿಳಿಸಿದರು.

ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ ಮಕ್ಕಳಲ್ಲಿ ಹಾಗೂ ಸಮುದಾಯದವರನ್ನು ತೊಡಗಿಸಿಕೊಂಡು ಅರಿವು ಮೂಡಿಸಲು ಜೂನ್.1 2023 ರಂದು ಕರ್ನಾಟಕ ಪಬ್ಲಿಕ ಸ್ಕೂಲ್ ರಾಮತೀಥ–ರ್ನಗರ ಹಾಗೂ ಸರಕಾರಿ ಫ್ರೌಡಶಾಲೆ ಮಹಾಂತೇಶ ನಗರ ಶಾಲೆಯ ಮಕ್ಕಳಿಗೆ ಕೀಟಜನ್ಯದ ರೋಗಗಳ ಕುರಿತು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ಎಂ.ಎಸ್.ಪಲ್ಲೇದ ಅವರು ವಿವ–ರಿಸಿದರು.

ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಶಿಕ್ಷಕ ವೃಂದದವರು ಸಿಬ್ಬಂದಿಗಳು ಮತ್ತು ಮಕ್ಕಳು ಪ್ರಮುಖ ಬೀದಿಗಳಲ್ಲಿ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಘೋಷಣೆ ಕೂಗುತ್ತಾ ಜನರಲ್ಲಿ ಜಾಗೃತಿ ಮೂಡಿಸಿದರು.

# ಅಕ್ಷರದ ಜೊತೆಗೆ ಸಂಸ್ಕಾರದ ಅರಿವು ಅಗತ್ಯ




ಮೋಳೆ: ಮಕ್ಕಳಿಗೆ ಅಕ್ಷರ ಜ್ಞಾನ ನೀಡುವುದಷ್ಟೇ ಶಿಕ್ಷಕರ ಕೆಲಸವಲ್ಲ. ಶಿಕ್ಷಣದೊಂದಿಗೆ ಸಂಸ್ಕಾರದ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕೆಂದು ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು ಬುಧವಾರ ಕಾಗವಾಡ ತಾಲೂಕಿನ ಉಗಾರ ಪಟ್ಟಣದ ಸರ್ಕಾರಿ ಕನ್ನಡ, ಹಾಗೂ ಮರಾಠಿ ಗಂಡು ಮಕ್ಕಳ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವದಲ್ಲಿ ಪಾಲ್ಗೊಂಡು ಮಕ್ಕಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿ ಮಾತನಾಡುತ್ತಿದ್ದರು.

ಒಬ್ಬಶಿಲ್ಪಿ ಹೇಗೆ ಒಂದು ಮೂರ್ತಿಯನ್ನು ಕೆತ್ತನೆ ಮಾಡುತ್ತಾನೋ ಹಾಗೇ ಒಬ್ಬ ಶಿಕ್ಷಕ ಉತ್ತಮ ವಿದ್ಯಾರ್ಥಿಗಳನ್ನು ತಯಾರಿಸಿ ಈ ಸಮಾಜಕ್ಕೆ ನೀಡುವ ಹೊಣೆಗಾರಿಕೆಯನ್ನು ಹೊಂದಿದ್ದಾರೆ. ಶಿಕ್ಷಕರು ತಮ್ಮ ಸೇವೆಯನ್ನು ಸಮರ್ಥವಾಗಿ ನಿಭಾಯಿಸಿ ಸದೃಢ ಸಮಾಜ ಕಟ್ಟುವ ಶಿಲ್ಪಿಯಾಗಿದ್ದಾನೆ ಎಂದು ಶಾಸಕ ರಾಜು ಕಾಗೆ ಹೇಳಿದರು.


ಶಾಲಾ ಸುಧಾರಣಾ ಸಮಿತಿಯವರು ಮತ್ತು ಶಿಕ್ಷಕರು ಕೂಡಿ ಗ್ರಾಮದ ಮನೆ ಮನೆಗೆ ತೆರಳಿ ಶಿಕ್ಷಣದ ಬಗ್ಗೆ ಜಾಗೃತಿ ಮೂಡಿಸಿದರಲ್ಲದೆ, ಮಕ್ಕಳನ್ನು ಶಾಲೆಗೆ ಕರೆತರುವ ಮೂಲಕ ಶಾಲಾ ಪ್ರಾರಂಭೋತ್ಸವವನ್ನು ಸಂಭ್ರಮದಿಂದ ಆಚರಿಸಿದರು.

ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಣೆ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜರುಗಿದವು. ಈ ಸಮಾರಂಭದಲ್ಲಿ ಶಾಸಕ ರಾಜು ಕಾಗೆ ,ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಆರ್. ಮುಂಜೆ, ಶಿಶು ಅಭಿವೃದ್ಧಿ ಅಧಿಕಾರಿ ಸಂಜೀವಕುಮಾರ ಸದಲಗಿ,ತಾಲೂಕಾ ಪಂಚಾಯತ್ ಅಧಿಕಾರಿ ಗೋಪಾಲ ಮಾಳಿ, ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯ ಉಪಾಧ್ಯಕ್ಷ ಶಂಕರ ವಾಘಮೊಡೆ ಪೂಜೆ ಸಲ್ಲಿಸಿ ಚಾಲನೆ ನೀಡಿ ಮಾತನಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಆರ್,ಮುಂಜೆ ಮಾತನಾಡಿ ಶಾಲಾ ಪ್ರಾರಂಬೋತ್ಸವದ ದಿನದಂದೆ ಎಲ್ಲಾ ಮಕ್ಕಳಿಗೆ ಸರಕಾರ ನೀಡಿರುವ ಪಠ್ಯಪುಸ್ತಕ, ಸಮವಸ್ತ್ರಗಳನ್ನು ವಿತರಿಸಲಾಗಿದೆ ಎಂದರು.

ಈ ವೇಳೆ ಶಿಕ್ಷಣ ಇಲಾಖೆಯ ಅಧಿಕಾ–ರಿಗಳಾದ ಆರ್.ಎಚ್.ಖಿಡಾಖಿಡಿ, ಎಸ್.ಬಿ.ಪಾಟೀಲ. ಮುಖ್ಯೋಪಾಧ್ಯಾಯರಾದ ಬಿ.ಎಸ್.ಹೊಸಮನಿ,ಎಸ್.ಜೆ.ದೇವನಾಳೆ, ಎಸ್,ಡಿಎಂಸಿ ಅಧಯಕ್ಷರಾದ ಕೃಷ್ಣಾ ಕಾಂಬಳೆ, ಮಂಗಲ ಅಠವಲೆ, ಈಶ್ವರ ಕಾಂಬಳೆ, ಸೇ–ರಿದಂತೆ ಶಿಕ್ಷ ವೃಂದ, ಪಾಲಕರು, ಹಾಗೂ ಸದಸ್ಯರು ಇದ್ದರು.

## ಜನಾರ್ದನ ರೆಡ್ಡಿ ರಣಹೇಡಿ: ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ ವಾಗ್ದಾಳಿ



ಬಳ್ಳಾರಿ: ಕಿರಿಯ ಸಹೋದರ ಹಾಲಿ ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ವಿರುದ್ಧ ಬಳ್ಳಾರಿಯಲ್ಲಿ ಮಾಜಿ ಶಾಸಕ ಜಿ ಸೋಮಶೇಖರ ರೆಡ್ಡಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ನಾನು ಬೆಳಸಿದ ಹೇಡಿಗಳು ಮನೆಯಲ್ಲಿದ್ದಾರೆ. ನಾನು ಸದನಕ್ಕೆ ಬಂದಿದ್ದೇನಿ ಅಂತಾ ಜನಾರ್ದನರೆಡ್ಡಿ ಹೇಳಿದ್ದಾರೆ. ನನಗೆ ಮತ್ತು ಶ್ರೀರಾಮುಲು, ಸೋಮಲಿಂಗಪ್ಪ, ಸುರೇಶಬಾಬು, ಕರುಣಾಕರರೆಡ್ಡಿಗೆ ರಣಹೇಡಿ ಅಂತಾ ಕರೆದಿದ್ದಾರೆ.

ಆದರೆ ನಿಜವಾದ ರಣಹೇಡಿ ಜನಾರ್ದನರೆಡ್ಡಿ, ನಾವಲ್ಲ ಎಂದು ಸೋಮಶೇಖರರೆಡ್ಡಿ ಆಕ್ರೋಶ ಹೊರಹಾಕಿದ್ದಾರೆ. ಅವನು ನಮ್ಮನ್ನ ಬಳಸಿಕೊಂಡು ಅವನ ಬೇಳೆ ಬೇಯಿಸಿಕೊಂಡ. ನಮ್ಮನ್ನ ಬಳಸಿಕೊಂಡು ಜನಾರ್ದನರೆಡ್ಡಿ ಅಕ್ರಮವಾಗಿ ಹಣ ಗಳಿಸಿದ. ನಿಜವಾದ ರಣಹೇಡಿ ನಾವಲ್ಲ. ಜನಾರ್ದನರೆಡ್ಡಿ ರಣಹೇಡಿ ಎಂದೂ ತಮ್ಮ ಹಳೆಯ ಗುಟ್ಟುಗಳನ್ನು ರಟ್ಟು ಮಾಡಿದ್ದಾರೆ.

ಅಷ್ಟೇ ಅಲ್ಲ. ಜನಾರ್ದನ ರೆಡ್ಡಿಯ ಚಿಕ್ಕಂದಿನಿಂದ ಒಂದು ಗುಣವನ್ನು ಜಾಲಾಡಿದ್ದಾರೆ. ಯಾರೇ ಆಗಲಿ ಅವರೆಲ್ಲಾ ಅವನ ಕೈ ಕೆಳಗೆ ಇರಬೇಕು. ಅವನು ಹೇಳಿದ್ದು ಕೇಳಲಿಲ್ಲ ಅಂದ್ರೆ ಅವನು ಎಲ್ಲರನ್ನೂ ಡೆಮಾಲಿಷ್ ಮಾಡ್ತಾನೆ.

ಆದರೆ ಇಂದು ನಾವೆಲ್ಲಾ ಒಂದಾಗಿದ್ದೇವೆ. ನಾವೂ ಜನಾರ್ದನರೆಡ್ಡಿಯನ್ನ ಎದುರಿಸುತ್ತೇವೆ. ಮುಂದೆ ಸಂಸತ್ ಚುನಾವಣೆಯಲ್ಲಿ ನಮ್ಮ ಬಲ ತೋರಿಸುತ್ತೇವೆ ಎಂದು ತಮ್ಮನಿಗೆ ಭರ್ಜರಿ ಸವಾಲ್ ಹಾಕಿದ್ದಾರೆ ಸೋಮಶೇಖರ ರೆಡ್ಡಿ.

## ಕಿಸ್ ಕೊಡುತ್ತಿದ್ದವಳ ಬಾಯಿ ಕಚ್ಚಿ ಹಿಡಿದ ಹೆಬ್ಬಾವು



ಉರಗ ದಾಳಿಯ ವಿಡಿಯೋಗಳು ಸಾಮಾಜಿ–ಕ ಮಾಧ್ಯಮಗಳಲ್ಲಿ ಆಗಾಗ ಬಾರಿ ವೈರಲ್ ಆಗುತ್ತವೆ. ಇದೀಗ ಹಾವಿನ ಕುರಿತಾದ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ.

ಪಾರ್ಕ್ ಗೆ ತೆರಳುವ ಹುಡುಗಿಯರು ಅಲ್ಲಿನ ಸಿಬ್ಬಂದಿ ಸಾಕಿರುವ ಹಾವನ್ನು ನೋಡಿ ಖುಷಿ ಪಡುತ್ತಾರೆ. ಅವರ ಕೈಯಲ್ಲಿದ್ದ ಅಪಾಯಕಾರಿ ಹಾವನ್ನು ಕಂಡು ಅದು ಕಚ್ಚುವುದಿಲ್ಲ ಎಂದು ತಾವೇ ಮನಸ್ಸಲ್ಲಿ ತಿಳಿದುಕೊಂಡಿರಬಹುದು.

ಹಾವನ್ನು ಕಂಡು ಆಕರ್ಷಿತಳಾದ ಯುವತಿಯೋರ್ವಳು ಅದಕ್ಕೆ ಮುತ್ತಿಕ್ಕಲು ಮುಂದಾಗುತ್ತಾಳೆ. ಇಬ್ಬರು ಸಿಬ್ಬಂದಿ ಹಾವನ್ನು ಕೈಯಲ್ಲಿ ಹಿಡಿದುಕೊಂಡಿದ್ದರು. ಆದರೆ ಹಾವು ತಡ ಮಾಡದೆ ಯುವತಿಯ ಮೂಗು ಮತ್ತು ಬಾಯಿಗೆ ಕಚ್ಚಿದೆ. ಈ ಯುವತಿ ಇದನ್ನು ಸ್ವಲ್ಪವೂ ನಿರೀಕ್ಷಿಸಿರಲಿಲ್ಲ ಎಂದೆನಿಸುತ್ತದೆ.

ಹಾವು ಕಚ್ಚಲು ಆರಂಭಿಸುತ್ತಿದ್ದಂತೆ ಯುವತಿ ಕಿರುಚಲು ಪ್ರಾರಂಭಿಸುತ್ತಾಳೆ. ಆ ವೇಳೆ ಪಕ್ಕದಲ್ಲಿದ್ದ ಮಹಿಳೆಯೂ ಸ್ನೇಹಿತೆಯನ್ನು ರಕ್ಷಿಸುವಂತೆ ಕೂಗಿದ್ದಾಳೆ. ಇದನ್ನು ಕಂಡ ಹಾವನ್ನು ಹಿಡಿದ ಸಿಬ್ಬಂದಿ ಕೂಡಲೇ ಕಾರ್ಯಪ್ರವೃತ್ತರಾಗಿ ಹಾವಿನ ದಾಳಿಗೆ ಒಳಗಾದ ಮಹಿಳೆಯನ್ನು ರಕ್ಷಿಸಲು ಯತ್ನಿಸಿದ್ದಾರೆ. ಮಹಿಳೆ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಾಳೆ. ಈ ವಿಡಿಯೋ ಈಗ ವೈರಲ್ ಆಗಿದೆ.



## 15 ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್: ಕೋಟ್ಯಾಂತರ ಮೌಲ್ಯದ ಚಿನ್ನಾಭರಣ ಪತ್ತೆ

ಬೆಂಗಳೂರು: ರಾಜ್ಯದಲ್ಲಿ ನಿನ್ನೆ ಬುಧವಾರ ಲೋಕಾಯುಕ್ತ ಅಧಿಕಾ–ರಿಗಳು 15 ಸರ್ಕಾರಿ ಅಧಿಕಾರಿಗಳ ನಿವಾಸ, ಕಚೇರಿಗಳ ಮೇಲೆ ದಾಳಿ ನಡೆಸಿದ್ದರು. ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ಚಾಮರಾಜನರ, ತುಮಕೂರು, ಕೊಪ್ಪಳ, ಮಂಗಳೂರು, ಹಾವೇರಿ, ಉಡುಪಿ ಸೇರಿ ರಾಜ್ಯದ ಒಟ್ಟು 57 ಕಡೆ ದಾಳಿ ನಡೆಸಿದ್ದಾರೆ.

ಸರ್ಕಾರಿ ಅಧಿಕಾರಿಗಳು ಆದಾಯ ಮೀರಿ ಅಧಿಕ ಆಸ್ತಿ ಗಳಿಸಿದ ಆರೋಪದ ಮೇಲೆ ದಾಳಿ ನಡೆದಿದ್ದು, ಆದಾಯದ ಮೂಲ, ಆಸ್ತಿ ಪತ್ರಗಳು, ಬ್ಯಾಂಕ್ ವಿವರಗಳ ಬಗ್ಗೆ ಲೋಕಾಯುಕ್ತರ ಅಧಿಕಾರಿಗಳು ಪರಿಶೀಲನೆ ನಡೆಸಿ ಈ ಬಗ್ಗೆ ಮಾಹಿತಿ ನೀಡಿದ್ದಾರೆ.

## ಆಟೋ ಚಾಲಕನಿಗೆ ಅವಾಚ್ಯ ಶಬ್ಧಗಳಿಂದ ನಿಂದಿಸಿ ಕಪಾಳಮೋಕ್ಷ ಮಾಡಿದ ಹಿನ್ನೆಲೆ: ಪೊಲೀಸ್ ಸಿಬ್ಬಂದಿ ಅಮಾನತು



ಮಂಡ್ಯ : ಮಂಡ್ಯ ಟ್ರಾಫಿಕ್ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೇದೆಯೊಬ್ಬರು, ಆಟೋ ಚಾಲಕನಿಗೆ ನಡು ರಸ್ತೆಯಲ್ಲೇ ಅವಾಚ್ಯ ಶಬ್ಧಗಳಿಂದ ನಿಂದಿಸಿ ಕಪಾಳಮೋಕ್ಷ ಮಾಡಿದ ಹಿನ್ನೆಲೆ ಅವರನ್ನು ಅಮಾನತು ಮಾಡಲಾಗಿದೆ.

ಪೊಲೀಸ್ ಕಾನ್ಸ್ಟೇಬಲ್ ಮಹೇಂದ್ರ ಅವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ಅವರು ಅಮಾನತು ಮಾಡಿದ್ದಾರೆ.

ಪೊಲೀಸ್ ಕಾನ್ಸ್ಟೇಬಲ್ ಸಾರ್ವಜನಿಕವಾಗಿ ಎಲ್ಲರ ಮುಂದೆ ಹಲ್ಲೆ ಮಾಡಿದ್ದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

ಕೆಲವರು ಟ್ವೀಟ್ ಮೂಲಕ ಮಂಡ್ಯ ಎಸ್‌ಪಿ ಹಾಗೂ ಪೊಲೀಸ್ ಇಲಾಖೆ ಹಿರಿಯ ಅಧಿಕಾರಿಗಳ ಗಮನಕ್ಕೆ ಈ ಕೃತ್ಯವನ್ನು ತಂದು ಕ್ರಮಕ್ಕೆ ಆಗ್ರಹಿಸಿದ್ದರು ಎನ್ನಲಾಗಿದೆ.

**ಘಟನೆಯ ಹಿನ್ನೆಲೆ :**

ಮಂಡ್ಯ ಜಿಲ್ಲಾಸ್ಪತ್ರೆಯ ಎದುರು ಆಟೋ ಚಾಲಕ ಮತ್ತು ಪೊಲೀಸರು ತೆರಳುತ್ತಿದ್ದ ಬೈಕ್ ನಡುವೆ ಅಪಘಾತವಾಗಿದೆ. ಪೊಲೀಸ್ ಪೇದೆ ರಸ್ತೆಗೆ ಬಿದ್ದು, ಕಾಲಿಗೆ ಸಣ್ಣ ಪೆಟ್ಟಾಗಿದೆ. ಸ್ಥಳೀಯರು ಪೇದೆಯನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗುವಂತೆ ಆಟೋ ಚಾಲಕನಿಗೆ ಹೇಳಿದ್ದಾರೆ.

ಅದರಂತೆ ಚಾಲಕ ಪೇದೆಯನ್ನು ಆಸ್ಪತ್ರೆಗೆ ಹೋಗೋಣ ಬನ್ನಿ ಎಂದು ಕರೆದಿದ್ದಾರೆ. ಆತ ಕರೆದಾಗ ಸಿಟ್ಟಿಗೆದ್ದ ಪೇದೆ, ಚಾಲಕನ ಕಪಾಳಕ್ಕೆ ಹೊಡೆದು, ಹೊಟ್ಟೆಗೆ ಗುದ್ದಿದ್ದಾರೆ. ತಪ್ಪಾಯ್ತು ಬಿಡಿ ಸಾರ್ ಎಂದರೂ ಸುಮ್ಮನಾಗದೇ ಅವಾಚ್ಯ ಶಬ್ಧಗಳಿಂದ ನಿಂದಿಸಿ ಹಲ್ಲೆ ಮಾಡಿದ್ದಾರೆ.

# ರಾಷ್ಟ್ರೀಯ ಮಲೇರಿಯಾ ಮಾಸಾಚರಣೆ–2023



ಬೆಳಗಾವಿ: ಮಲೇರಿಯಾ ನಿಯಂತ್ರಣದ ಬಗ್ಗೆ ಸಮುದಾಯದಲ್ಲಿ ಹೆಚ್ಚಿನ ಮಾಹಿತಿ ಮತ್ತು ಅರಿವು ಮೂಡಿಸಲು ಈ ವರ್ಷ "ಶೂನ್ಯ ಮಲೇ–ರಿಯಾ ಗುರಿಯನ್ನು ತಲುಪೋಣ : ನವೀನ ವಿಧಾನಗಳನ್ನು ಅಳವಡಿಸಿ ಅನುಷ್ಠಾನ ಗೊಳಿಸೋಣ" ಎಂಬ ಧ್ಯೇಯವಾಕ್ಯದೊಂದಿಗೆ ವಿಶ್ವ ಮಲೇ–ರಿಯಾ ದಿನವನ್ನು ಏಪ್ರೀಲ್–25ರಂದು ಆಚರಿಸಲಾಗಿದೆ. ಮುಂದುವರಿದು, ದೇಶಾದ್ಯಂತ ವಿವಿಧ ಚಟುವಟಿಕೆಗಳ ಮೂಲಕ ಮಲೇರಿಯಾ ನಿವಾರಣೆಗಾಗಿ ಜನಸಾಮಾನ್ಯರಲ್ಲಿ ಮಲೇರಿಯಾ ತಡೆಗಟ್ಟುವಿಕೆ ಮತ್ತು ನಿಯಂತ್ರಣದ ಬಗ್ಗೆ ಜಾಗೃತಿ ಮೂಡಿಸಲು ಜೂನ್ ಮಾಹೆಯಾದ್ಯಂತ ಮಲೇರಿಯಾ ವಿರೋಧಿ ಮಾಸಾಚರಣೆಯನ್ನು ಆಚ–ರಿಸಲಾಗುವುದು. ಮಲೇರಿಯಾ ನಿವಾರಣೆಯಲ್ಲಿ ಸಮುದಾಯದ ಸಕ್ರಿಯ ಭಾಗವಹಿಸುವಿಕೆ ಹಾಗೂ ಸಂಬಂದಪಟ್ಟ ಇಲಾಖೆಗಳ ಅಗತ್ಯ ಸಹಕಾರ ಪಡೆಂಂ–ಯುವದು, ಅಲ್ಲದೆ ಸ್ವಯಂ ಸೇವಾ ಸಂಘಗಳು ಸ್ಥಳಿಯ ಪ್ರಮುಖ ವ್ಯಕ್ತಿಗಳು ಹಾಗೂ ಧಾರ್ಮಿಕ ಮುಖಂಡರ ಸಹಭಾಗಿತ್ವದಲ್ಲಿ ಮಲೇರಿಯಾ ಮತ್ತು ಅದರಿಂದಾಗುವ ಮರಣವನ್ನು ತಡೆಗಟ್ಟುವದರಿಂದ ಧ್ಯೇಯವಾಕ್ಯವನ್ನು ಕಾರ್ಯಗೊಳಿಸಿದಂತಾಗುತ್ತದೆ.

ದಿನಾಂಕ: 01–06–2023 ರಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ಮತ್ತು ತಾಲೂಕಾ ಆರೋಗ್ಯ ಕುಟುಂಬ ಕಲ್ಯಾಣ ಪ್ರಾ ಕೇಂದ್ರ ವಂಟಮೂ–ರಿ(ನ) ಹಾಗೂ ರೋಟರಿ ( North ) ಇವರ ಸಂಯುಕ್ತ ಆಶ್ರಯದಲ್ಲಿ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆ ರಾಮತೀರ್ಥ ನಗರ ಮಕ್ಕಳು ಹಾಗೂ ಶಿಕ್ಷಕರು ಮುಖ್ಯೋಪಾಧ್ಯಾಯರು ಇವರ ಸಹಾಕಾರದಿಂದ ರಾಷ್ಟ್ರೀಯ ಮಲೇರಿಯಾ ಮಾಸಚರಣೆ ಜೂನ್ –2023 ರ ಸಾಂಕೇತವಾಗಿ ಉದ್ಘಾಟಣೆ ಮಾಡಲಾಯಿತು

ಮಲೇರಿಯಾ ನಿರ್ಮೂಲನೆ 2023–25ರ ರಾಜ್ಯ ರೂಪ ದೇಶಗಳನ್ನು ಕಾರ್ಯ ಗತಗೊಳಿಸುವಲ್ಲಿ ಎಲ್ಲಾ ಇಲಾಖೆಗಳು ಹಾಗೂ ಶಾಲಾ ಮಕ್ಕಳು ಈ ಕಾರ್ಯಕ್ರಮದ ರಾಯಭಾರಿಗಳು ಆಗಬೇಕೆಂದು ಡಾ// ಎಂ.ಎಸ್ ಪಲ್ಲೇದ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಗಳು ಕರೆ ನೀಡಿದರು ಹಾಗೂ ಪರಿಸರ ಸ್ವಚ್ಛತೆ ಸೊಳ್ಳೆಗಳ ನಿಯಂತ್ರಣ ಮಾಡುವಲ್ಲಿ ಸಹಕಾರ ನೀಡುತ್ತದೆ ಎಂದು ತಿಳಿಸಿದರು ಇದೇ ಸಮಯದಲ್ಲಿ ಡಾ// ಕಿವುಡಸಣ್ಣವರ್ ಕುಟುಂಬ ಕಲ್ಯಾಣ ಅಧಿಕಾರಿಗಳು ಬೆಳಗಾವಿ, ಡಾ// ಜಯಾನಂದ ಧನವಂತ ಪ್ರಾ. ಅ ಕೇಂದ್ರ ವಂಟಮೂರಿ (ನ) ಮಲೇರಿಯಾ ಮಾಸಾಚರಣೆಯ ಅಂಗವಾಗಿ ಸಮುದಾಯದ ಸಹಭಾಗಿ–ತ್ವದ ಸಲುವಾಗಿ ಮನೆಯ ಸಂಪುಗಳಲ್ಲಿ ಲಾರ್ವಾಹಾರಿ ಮೀನು(ಗಪ್ಪಿ ಗ್ಯಾಂಬುಸಿಯಾ) ಬೆಳೆಸುವುದರಿಂದ ಸೊಳ್ಳೆಗಳ ಸಂತತಿಯನ್ನು ಜೈವಿಕ ನಿಯಂತ್ರಣ ಮಾಡುವಲ್ಲಿ ಸಹಕಾರಿ ಆಗುತ್ತದೆ ಎಂದು ಕರೆ ನೀಡಿದರು.

ಆದ್ದರಿಂದ ಶಿಕ್ಷಣ ಇಲಾಖೆಯ ಸಹಭಾಗಿತ್ವದಲ್ಲಿ ಮಕ್ಕಳಲ್ಲಿ ಅರಿವು ಮೂಡಿಸುವುದು ಹಾಗೂ ಸಮುದಾಯ ದವರನ್ನು ತೊಡಗಿಸಿಕೊಂಡು ಅರಿವು ಮೂಡಿಸಲು ದಿನಾಂಕ 01.06.2023 ರಂದು ಕರ್ನಾಟಕ ಪಬ್ಲಿಕ ಸ್ಕೂಲ್ ರಾಮತೀರ್ಥನಗರ ಹಾಗೂ ಸರಕಾರಿ ಫ್ರೌಡಶಾಲೆ ಮಹಾಂತೇಶನಗರ ಈ ಶಾಲೆಯಲ್ಲಿ ಮಕ್ಕಳಿಗೆ ಕೀಟಜನ್ಯದ ರೋಗಗಳ ಕುರಿತು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ಎಂ. ಎಸ್.ಪಲ್ಲೇದ ರವರು ವಿವರಿಸಿದರು. ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಶಿಕ್ಷಕವೃಂದದವರು ಸಿಬ್ಬಂದಿಗಳು ಮತ್ತು ಮಕ್ಕಳು ಪ್ರಮುಖಬೀದಿಗಳಲ್ಲಿ ಜಾಥ–ಾಕ ಾರ್ಯಕ್ರಮದಲ್ಲಿ ಪಾಲ್ಗೊಂಡು ಘೋಷಣೆ ಕೂಗುತ್ತಾ ಜನರಲ್ಲಿ ಜಾಗೃತಿ ಮೂಡಿಸಲಾಯಿತು.

# ಶಾಸಕ ನಾಡಗೌಡ್ರ ಮೇಲಿವೆ ಅಭಿವೃದ್ಧಿಯ ಹತ್ತು ಹಲವಾರು ಸವಾಲುಗಳು



ನಾಲತವಾಡ. ಪಟ್ಟಣವೂ ಸೇರಿದಂತೆ ಸುತ್ತಲಿನ ಸಂಭಂದಿಸಿದ ಗ್ರಾಮೀಣ ಭಾಗದಲ್ಲಿ ಇಂದಿಗೂ ಕುಡಿಯುವ ನೀರಿನ ಸಮಸ್ಯೆ ನೀಗುತ್ತಿಲ್ಲ, ರೈತ–ರಿಗೆ ಕೃಷಿ ಇಲಾಖೆಯ ಮೂಲಕ ಸೌಲಭ್ಯಗಳಿಗೆ ಜಾತಕ ಪಕ್ಷಿಯಂತೆ ಕಾಯಬೇಕು, ಕಾಲುವೆಗಳಿಗೆ ಸಕಾಲಕ್ಕೆ ರೈತರಿಗೆ ನೀರು ಹರಿಯದ ಕಾರಣ ರೈತರು ಆಶೆ ಗಣ್ಣಿಂದ ನೋಡುವ ಸ್ಥಿತಿ ಇದ್ದು ಅತ್ತ ಗ್ರಾಮೀಣ ರಸ್ತೆಗಳೂ ದುರಸ್ಥಿಗೆ ಕಾಯುತ್ತೀದ್ದು ನೂತನ ಶಾಸಕರಾದ ಹಿರಿಯ ಸಿ.ಎಸ್.ನಾಡಗೌಡ ಮೇಲೆ ಗುರುತರ ಜವಾಬ್ದಾರಿ ಇದೆ.

6ನೇ ಬಾರೀ ಶಾಸಕರಾಗಿ ಆಯ್ಕೆಯಾದ ನಾಡಗೌಡ ಅವರು ಮತಕ್ಷೇತ್ರವಲ್ಲದೇ ನಾಲತವಾಡ ಪಟ್ಟಣಕ್ಕೂ ಅಭಿವೃದ್ಧಿ ವಿಷಯದಲ್ಲಿ ಪ್ರಮುಖ ಆದ್ಯತೆ ನೀಡಬೇಕಿದೆ. ಪಟ್ಟಣದಲ್ಲಿ ಸುಮಾರು 20 ಸಾವೀರಕ್ಕೂ ಹೆಚ್ಚು ಜನಸಂಖ್ಯೆ ಇದೆ, ನಿತ್ಯ ಕುಡಿಯುವ ನೀರು ಪೂರೈಕೆಯ ವ್ಯವಸ್ಥೆಯಾಗಬೇಕಿದೆ. ಪಟ್ಟಣವೂ ಸೇರಿದಂತೆ ಸುಮಾರು 40 ಗ್ರಾಮದ ರೈತರು ಕೃಷಿ ಇಲಾಖೆಯಲ್ಲಿ ಸರಕಾರದ ಯೋಜನೆಗಳನ್ನು ಪಡೆಯಲು ಹರಸಾಹಸ ಪಡೆಯಬೇಕಿದ್ದು ಕೃಷಿ ಇಲಾಖೆಯ ಮೇಜರ್ ಸರ್ಜರಿ ಕೈಗೊಂಡು ನೇರವಾಗಿ ರೈತರಿಗೆ ಯೋಜನೆ ತಲುಪುವಂತಾಗಬೇಕಿದೆ.

ಬೇಕಿದೆ ವೈದ್ಯಕೀಯ ಸೇವೆ: ಸಾವೀರಾರು ಜನಸಂಖ್ಯೆಯ ಸ್ಥಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಜ್ಞವೈದ್ಯರೇ ಇಲ್ಲ, ಬಡ ಹೆಣ್ಣುಮಕ್ಕಳಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಗರ್ಭಿಣಿಯರಿಗೆ ಸಿಜೆರಿನ್ ಸೇವೆ ಬೇಕಿದೆ, ಅತ್ತ ರೈತರ ಜಾನುವಾರುಗಳಿಗೂ ಪಶು ವೈದ್ಯಕೀಯ ಸೇವೆ ಗಗನ ಕುಸುಮವಾಗಿದ್ದು ಸ್ಥಳಿಯ ಹಾಗೂ ಗ್ರಾಮೀಣ ಭಾಗದ ಪಶು ಆಸ್ಪತ್ರೆಯ ಉಪಕೇಂದ್ರಗಳಲ್ಲಿ ಸಿಬ್ಬಂದಿಗಳ ಅಲಭ್ಯತೆಯಿಂದ ರೈತರು ಜಾನುವಾರುಗಳೊಂದಿಗೆ ಚಿಕಿತ್ಸೆಗಾಗಿ ಪರದಾಡಬೇಕಿದ್ದು ಶಾಸಕರು ಮೂಲ ಸಮಸ್ಯೆ ಪರಿಹರಿಸಿ ಸಕಾಲ ವೈದ್ಯಕೀಯ ಸೇವೆ ನೀಡಲು ಕ್ರಮ ಕೈಗೊಳ್ಳಬೇಕಿದೆ.

ರೈತರ ಹಿತಕ್ಕೆ ಅಗ್ನಿ ಶಾಮಕ: ಕಳೆದ ಹಲವು ವರ್ಷಗಳಿಂದ ನಾಲತವಾಡ ಭಾಗದ ಸಾವೀರಾರು ಹೆಕ್ಟರ್ ಪ್ರದೇಶದಲ್ಲಿ ರೈತರು ಕಬ್ಬು ಬೆಳೆಯುತ್ತಿದ್ದು ಮೇಲಿಂದ ಮೇಲೆ ಕಬ್ಬಿನ ಗದ್ದೆಗಳಿಗೆ ಅಗ್ನಿ ಅವಘಡ ಸಂಭವಿಸುತ್ತೀವೆ ಶೀಘ್ರವೇ ನಾಲತವಾಡ ಪಟ್ಟಣಕ್ಕೆ ಅಗ್ನಿಶಾಮಕ ಶಾಖೆ ಆರಂಭಗೊಳ್ಳಬೇಕು ಎನ್ನುತ್ತಾರೆ ರೈತರು.

ಸಾರಿಗೆ ವ್ಯವಸ್ಥೆ ಇಲ್ಲ: ಸೂಕ್ತ ಸಮಯಕ್ಕೆ ಪ್ರಯಾಣಿಕರಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕಿದೆ, ಪಟ್ಟಣದ ಮೂಲಕ ಗಡಿ ರಾಜ್ಯಗಳಿಗೆ ಮುದ್ದೇಬಿಹಾಳ ಘಟಕದಿಂದ ಹಲವು ಬಸ್‌ಗಳು ಓಡುತ್ತೀವೆಯಾದರೂ ಗ್ರಾಮೀಣ ಭಾಗದಲ್ಲಿ ಮಾತ್ರ ವಿದ್ಯಾರ್ಥಿಗಳ ಪರದಾಟ ತಪ್ಪುತ್ತಿಲ್ಲ, ಮತ್ತೊಂದೆಡೆ ಹೆಚ್ಚಿನ ಬಸ್ ಸಂಚಾರ ಹಾಗೂ ಕಲ್ಯಾಣ ಕರ್ನಾಟಕದ ಮೂಲತಃ ಕಲಬುರ್ಗಿ ವರೆಗೂ ನಾಲತವಾಡ ಮೂಲಕ ಬಸ್ ಓಡಿಸಬೇಕು ಎನ್ನುವ ಬೇಡಿಕೆ ಇದೆ.

ಪ.ಪಂ ಉತ್ತಮ ಸೇವೆಗೆ ನಿಗಾ: ಸ್ಥಳಿಯ ಆಡಳಿತ ಸಂಸ್ಥೆ ಪ.ಪಂ ಯಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಂದ ಸಾರ್ವಜನೀಕರಿಗೆ ಉತ್ತಮ ಸ್ಪಂದನೆ ಹಾಗೂ ಸೂಕ್ತ ದಾಖಲೆಗಳನ್ನು ದೊರೆಯುಂತಾಗಬೇಕು, ಹಲವು ಅನಧಿಕೃತ ಸಿಬ್ಬಂದಿಗಳ ಕಾರುಬಾರು ಹೆಚ್ಚಿದ ಪರಿಣಾಮ ಪಟ್ಟಣದಲ್ಲಿ ಅಭಿವೃದ್ದಿಗೆ ಒತ್ತು ಕೊಡಬೇಕು ಹಾಗೂ ಸಾರ್ವಜನೀಕರಿಗೆ ಉತ್ತಮ ಸೇವೆ ನೀಡುವಂತಾಗಬೇಕಿದ್ದು ಶಾಸಕರು ಬಾರಿ ಗಮನಹರಿಸಬೇಕಿದೆ.

ಬೇಕಿದೆ ಸಂತೆ ಕಟ್ಟೆ: ಸುಮಾರು ವರ್ಷಗಳಿಂದಲೂ ರೈತರು ತಾವು ತಂದ ತರಕಾರಿಯನ್ನು ಮಾರುಕಟ್ಟೆಯ ಸಿಕ್ಕ ಸ್ಥಳದಲ್ಲೇ ಮಾರಾಟ ಮಾಡಬೇಕಿದೆ, ಪಟ್ಟಣಕ್ಕೆ ಸುತ್ತಲಿನ ರೈತರು ತರಕಾರಿ ಮಾರಾಟಕ್ಕೆ ಆಗಮಿಸುತ್ತಿದ್ದು ಜೀವ ಭಯದಲ್ಲೇ ವಾಹನ ಸಂಚಾರದ ಪಕ್ಕದಲ್ಲಿ ವ್ಯಾಪಾರ ಮಾಡುತ್ತಿದ್ದು ಶೀಘ್ರವೇ ತರಕಾರಿ ಮಾರುಕಟ್ಟೆ ಬೇಕಿದೆ.

ಪೂರ್ಣಗೊಳ್ಳದ ಕಾಮಗಾರಿಗಳು: ಪಟ್ಟಣದಲ್ಲಿ ಹಲವು ಕಾಮಗಾ–ರಿಗಳು ಅವೈಜ್ಞಾನೀಕವಾಗಿ ನಡೆದಿದ್ದು ಸಾರ್ವಜನೀಕರಲ್ಲಿ ಸಂಶಯ ಮೂಡಿಸಿದ್ದು ಅನುದಾನದ ಕುರಿತು ತನಿಖೆಯಾಗಬೇಕಿದೆ, ಚರಂಡಿಗಳಿಲ್ಲದೇ ಹಲವಡೆ ರಸ್ತೆಗಳಾಗಿದ್ದು ಸಾರ್ವಜನೀಕರಿಗೆ ಬಾರೀ ತೊಂದರೆ ಉಂಟಾಗಿದೆ.

> ಸರಕಾರ ರಚನೆಯ ನಂತರ ಕ್ಷೇತ್ರದಲ್ಲೇ ಬೀಡು ಬಿಟ್ಟು, ಪ್ರಮುಖ ಅಭಿವೃದ್ಧಿಗಳ ಕುರಿತು ಸಾರ್ವಜನೀಕರೊಂದಿಗೆ ಚರ್ಚಿಸುತ್ತೇನೆ, ಮುಖ್ಯವಾಗಿ ರೈತರ ಹಿತಕ್ಕೆ ನೀರಾವರಿಗೆ ಆದ್ಯತೆ, 24 ತಾಸುಗಳ ಕುಡಿಯುವ ನೀರಿನ ಸರಬರಾಜು, ಯುವಕರ ಹಿತ ದೃಷ್ಟಿಯಿಂದ ಔದ್ಯೋಗಿರಕಣಕ್ಕೆ ಚರ್ಚಿಸಬೇಕಿದ್ದು ಹಂತ ಹಂತವಾಗಿ ಸಮಸ್ಯೆಗಳನ್ನು ಇತ್ಯರ್ಥಗೊಳಿಸುತ್ತೇನೆ.
>
> **–ಸಿ.ಎಸ್.ನಾಡಗೌಡ, ಶಾಸಕರು ಮುದ್ದೇಬಿಹಾಳ.**

ರೈತರಿಗೆ ಬೇಕಿವೆ ಜಮೀನು ರಸ್ತೆಗಳು: ಪಟ್ಟಣದಲ್ಲಿ ಸಾವೀರಾರು ರೈತ ಕುಟುಂಬಗಳಿಗೆ ತಮ್ಮ ಜಮೀನುಗಳಿಗೆ ಕೃಷಿ ಚಟುವಟಿಕೆಗಳಿಗೆ ತೆರಳಲು ರಸ್ತೆಗಳೇ ಇಲ್ಲ,

ಮಳೆಗಾಲದಲ್ಲಿ ರೈತರು ಅಲೆಯಲು ತಿಣುಕಾಡಬೇಕಿದೆ ಶಾಸಕ ನಾಡಗೌಡ ಅನುದಾನ ತಂದು ರೈತರ ಹಿತಕ್ಕೆ ಮುಂದಾಗಬೇಕಿದೆ.

ಪೋಲೀಸ್ ಠಾಣೆ ಮೇಲ್ದರ್ಜೆಗೆ: ಪಟ್ಟಣದಲ್ಲಿ ನಾನಾ ವಿದ್ಯಾ ಸಂಸ್ಥೆಗಳಿವೆ, ಎಪಿಎಂಸಿ, ಹಲವು ಬ್ಯಾಂಕ್‌ಗಳು, ವಿವಿಧ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರುವ ಪಟ್ಟಣದಲ್ಲಿ ಕೇವಲ 3 ಜನ ಪೋಲೀಸರ ಹೊರ ಠಾಣೆ ಇದೆ, ಸದ್ಯ ಹಲವು ಘಟನೆಗಳು, ಪ್ರಕರಣಗಳು ತಲೆ ಎತ್ತುತ್ತಿವೆ, ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪಟ್ಟಣದ ಪೋಲೀಸ್ ಠಾಣೆ ಮೇಲ್ದರ್ಜೆಗೇ–ರಿಸಲು ಶಾಸಕರ ಗುರುತರ ಜವಾಬ್ದಾರಿ ಇದೆ.

ನಾಡಗೌಡ್ರ ಸವಾಲ್‌ಗಳು: ಅರ್ಧಕ್ಕೆ ನಿಂತ ಕಾಲುವೆಗಳ ಪೂರ್ಣಗೊಳಿಸುವಿಕೆ, ಪಟ್ಟಣಕ್ಕೆ ಶುದ್ಧ ನೀರು ಪೂರೈಕೆ, ಪೋಲೀಸ್ ಠಾಣೆ ಮೇಲ್ದರ್ಜೆಗೆ, ರೈತರಿಗೆ ಕೃಷಿ ಉಪಕರಣಗಳ ಸಕಾಲ ಪೂರೈಕೆಗೆ ಆದ್ಯತೆ, ರೈತರ ಜಮೀನುಗಳಿಗೆ ರಸ್ತೆ ನಿರ್ಮಾಣ, ಅನ್ನಭಾಗ್ಯ ಕೇಂದ್ರಗಳಲ್ಲಿ ಮಹಿಳೆಯರಿಗೆ ಸೀರೆ, ಪುರುಷರಿಗೆ ಧೋತಿ ವಿತರಣೆ.

## ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ಭಾರೀ ಇಳಿಕೆ



ನವದೆಹಲಿ: ಪೆಟ್ರೋಲಿಯಂ ಮತ್ತು ತೈಲ ಮಾರುಕಟ್ಟೆ ಕಂಪನಿಗಳು ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಬೆಲೆ ಪರಿಷ್ಕರಿಸಿದ ನಂತರ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ಭಾರೀ ಇಳಿಕೆ ಕಂಡಿದೆ. 19 ಕೆಜಿ ತೂಕದ ಸಿಲಿಂಡರ್ ಬೆಲೆ 83.50 ರೂ. ಇಳಿಕೆಯಾಗಿದ್ದು, ದೆಹಲಿಯಲ್ಲಿ 1,773 ರೂ.ಗೆ ಮಾರಾಟವಾಗುತ್ತಿದೆ. ಗೃಹ ಬಳಕೆ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಕಂಡುಬಂದಿಲ್ಲ.

ಕಳೆದ ತಿಂಗಳು ಮೇ 1 ರಂದು ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ 171.50 ರೂ. ಕಡಿತಗೊಳಿಸಲಾಗಿತ್ತು. ಅದಕ್ಕೂ ಮುನ್ನ ಏಪ್ರಿಲ್‌ನಲ್ಲಿ 91.50 ರೂ. ಕಡಿತಗೊಳಿಸಲಾಗಿತ್ತು. ಆದರೆ ಗೃಹಬಳಕೆಯ ಎಲ್ಪಿಜಿ ಸಿಲಿಂಡರ್ ದರ ಪರಿಷ್ಕರಣೆಯಾಗಿಲ್ಲ. 14.2 ಕೆಜಿ ತೂಕದ ಗೃಹ ಬಳಕೆಯ ಗ್ಯಾಸ್ ಸಿಲಿಂಡರ್‌ಗಳ ದರ ಕಳೆದ ತಿಂಗಳಿನಂತೆಯೇ ಇದೆ. ಸದ್ಯ ವಾಣಿಜ್ಯ ಸಿಲಿಂಡರ್ ಬೆಲೆ ಕೋಲ್ಕತ್ತಾದಲ್ಲಿ 1,875.50 ರೂ., ಮುಂಬೈನಲ್ಲಿ 1,725 ರೂ., ಚೆನ್ನೈನಲ್ಲಿ 1,937ರೂ. ಗಳಿಗೆ ಮಾರಾಟವಾಗುತ್ತಿದೆ.

## ಆಪರೇಷನ್ ಥಿಯೇಟರ್‌ನಲ್ಲಿ ಟೈಟಾಗಿ ಮಲಗಿದ್ದ ವೈದ್ಯ

ಚಿಕ್ಕಮಗಳೂರು: ಕುಡಿದು ಬಂದು ಆಪರೇಷನ್ ಥಿಯೇಟರ್‌ನಲ್ಲಿ ಮಲಗಿದ್ದ ವೈದ್ಯನನ್ನು ಬಚಾವ್ ಮಾಡಿಸುವ ಸಲುವಾಗಿ ಸಿಬ್ಬಂದಿ ವಿಷ್ಣುಸೇನಾ ಚಿತ್ರದ ಪಾರ್ಟ್ 2 ಕಥೆ ಹೆಣೆದ ಘಟನೆ ಚಿಕ್ಕಮಗಳೂರಿನ ಕಳಸ ತಾಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ನಡೆದಿದೆ.

ಕಳಸ ಸರ್ಕಾರಿ ಆಸ್ಪತ್ರೆಯಲ್ಲಿ ಸಂತಾನಹರಣ ಕ್ಯಾಂಪ್ ಏರ್ಪಾಡು ಮಾಡಿದ್ದು, ಮಹಿಳೆಯ–ರಿಗೆ ಬುಧವಾರ ಬೆಳಗ್ಗೆ 8 ಗಂಟೆಗೆ ಬರಲು ಹೇಳಿದ್ದರು. ಕ್ಯಾಂಪ್‌ಗೆ 10ಕ್ಕೂ ಹೆಚ್ಚು ಮಹಿಳೆಯರು ತಮ್ಮ ಮಕ್ಕಳನ್ನು ಬಿಟ್ಟು ಬೆಳಗ್ಗೆ 8 ಗಂಟೆಗೆ ಬಂದಿದ್ದರು. ಆಪರೇಷನ್ ಮಾಡುವ ಸಲುವಾಗಿ ಕೊಪ್ಪ ಸರ್ಕಾರಿ ಆಸ್ಪತ್ರೆ ವೈದ್ಯರೊಬ್ಬರು 3 ಗಂಟೆಗೆ ಬಂದಿದ್ದ.



ಬರುತ್ತಲೇ ಫುಲ್ ಟೈಟ್ ಆಗಿದ್ದ ಈತ ಸಂತಾನಹರಣ ಚಿಕಿತ್ಸೆ ಮಾಡಬೇಕಾದ ಆಪರೇಷನ್ ಬೆಡ್ ಮೇಲೆ ಮಲಗಿದ್ದಾನೆ. ಇದರಿಂದಾಗಿ ಅನಸ್ತೇಷಿಯಾ ತೆಗೆದುಕೊಂಡು ಮಲಗಿದ್ದ ಮಹಿಳೆಯರು ರೆಬಲ್ ಆಗಿದ್ದಾರೆ.

ಈ ವೇಳೆ ಸಿಬ್ಬಂದಿ ವೈದ್ಯರಿಗೆ ಏನೋ ಆಗಿದೆ. ಶುಗರ್ ಕಡಿಮೆ ಆಗಿದೆ, ಬಿಪಿ ಜಾಸ್ತಿ ಆಗಿದೆ ಎಂದು ವಿಷ್ಣುಸೇನಾ ಚಿತ್ರದ ಪಾರ್ಟ್ 2 ಸನ್ನಿವೇಶ ಸೃಷ್ಟಿಸಿ ಹೈಡ್ರಾಮಾ ಮಾಡಿದ್ದಾನೆ.

ಅಲ್ಲದೇ ವೈದ್ಯರಿಗೆ ಗ್ಲೂಕೋಸ್ ಹಾಕಿಸಿ ವಾಪಸ್ ಕೊಪ್ಪಕ್ಕೆ ಕಳುಹಿಸಲಾಗಿದೆ. ಅನಸ್ತೇಷಿಯಾ ತೆಗೆದುಕೊಂಡು ಮಲಗಿದ್ದ ಮಹಿಳೆಯರಿಗೆ ಆಸ್ಪತ್ರೆ ಸಿಬ್ಬಂದಿ ಗ್ಲೂಕೋಸ್ ಹಾಕಿದ್ದಾರೆ.

ಗುರುವಾರ ಮತ್ತೆ ಬೇರೆ ವೈದ್ಯರನ್ನು ಕರೆಸಿ ಆಪರೇಷನ್ ಮಾಡಿಸಲು ಸಿದ್ಧತೆ ನಡೆಸಲಾಗಿದೆ. ವಿಷ್ಣುಸೇನಾ ಚಿತ್ರದ ಪಾರ್ಟ್ 2 ಕಥೆ ಹೆಣೆದ ಸಿಬ್ಬಂದಿ ವಿರುದ್ಧ ಜನರು ಹಿಡಿಶಾಪ ಹಾಕಿದ್ದಾರೆ.

## ಎಂಜಿನಿಯರ್ ಮನೆ ಮೇಲೆ ಲೋಕಾಯುಕ್ತ ದಾಳಿ: 4.75 ಕೋಟಿ ರೂ. ಆಸ್ತಿ ಪತ್ತೆ



ಹಾವೇರಿ: ರಾಜ್ಯದ ಹಲವೆಡೆ ಬುಧವಾರ ಲೋಕಾಯುಕ್ತ ಅಧಿಕಾ–ರಿಗಳು ದಾಳಿ ನಡೆಸಿ ತನಿಖೆ ನಡೆಸಿದ್ದು, ಹಾವೇ–ರಿನಿರ್ಮಿತಿ ಕೇಂದ್ರ ಎಂಜಿನಿಯರ ವಾಗೀಶ್ ಶೆಟ್ಟರ್ ಮನೆಯಲ್ಲಿ ಜಿಂಕೆ ಕೊಂಬುಸಮೇತ ಒಟ್ಟು 4.75 ಕೋಟಿ ರೂ. ಆಸ್ತಿ ಪತ್ತೆಯಾಗಿದೆ.

ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ರಾಜ್ಯದ ಹಲವೆಡೆ ದಾಳಿ ನಡೆಸಿ ಮಾಹಿತಿಗಳನ್ನು ಕಲೆ ಹಾಕಿದ್ದಾರೆ. ಅದೇ ರೀತಿ ರಾಣೇಬೆನ್ನೂರುನಗರದಲ್ಲಿರುವ ವಾಗೀಶ್ ಶೆಟ್ಟರ ಮನೆ ಹಾಗೂ ಕಚೇರಿಗೆ ದಾಳಿ ನಡೆಸಿದ್ದು, ದಾಖಲೆ ಪರಿಶೀಲನೆ ಮಾಡಿದ್ದಾರೆ. ಈ ವೇಳೆ ಅರ್ಧ ಕೆಜಿ ಬಂಗಾರ, 2 ಕೆಜಿ ಬೆಳ್ಳಿ, 18.30 ಲಕ್ಷ ರೂ. ಹಣ, ಹಣ ಎಣಿಕೆ ಮಾಡುವ ಯಂತ್ರ, 3 ಕಾರು, 2 ಟ್ರ್ಯಕ್ಟರ್, 2 ಬೈಕ್, 8 ಮನೆ ಪತ್ತೆಯಾಗಿದೆ.

ಅಲ್ಲದೇ ರಾಜ್ಯದ ವಿವಿಧ ಭಾಗಗಳಲ್ಲಿ 16 ಸೈಟ್, 65 ಎಕರೆ ಭೂಮಿ ಹೊಂದಿರುವ ದಾಖಲೆ ಪತ್ತೆಯಾಗಿದೆ. ವಿಶೇಷವೆಂದರೆ 10 ಇಂಚಿನ ಜಿಂಕೆ ಕೊಂಬು ಕೂಡ ಅವರ ಮನೆಯಲ್ಲಿ ಪತ್ತೆಯಾಗಿದ್ದು, ಒಟ್ಟು 4.75 ಕೋಟಿ ರೂ. ಆಸ್ತಿ ಪತ್ತೆಯಾಗಿದೆ. ಅಧಿಕಾರಿಗಳು ಏಕಕಾಲದಲ್ಲಿ ಕಚೇರಿ, ಮನೆ ಹಾಗೂ ಕಾಂಪ್ಲೆಕ್ಸ್‌ನಲ್ಲಿ ದಾಳಿ ನಡೆಸಿದ್ದಾರೆ.

## ಅಥಣಿ: ಸಿಡಿಲು ಬಡಿದು ಮಹಿಳೆ ಸೇರಿ ಇಬ್ಬರು ಸಾವು



ಬೆಳಗಾವಿ: ಸಿಡಿಲು ಬಡಿದು ಮಹಿಳೆ ಸೇರಿದಂತೆ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಅಥಣಿ ತಾಲೂಕಿನಲ್ಲಿ ನಡೆದಿದೆ.

ಎರಡು ಪ್ರತ್ಯೇಕ ಘಟನೆಗಳಲ್ಲಿ ಇಬ್ಬರೂ ಪ್ರಾಣ ಕಳೆದುಕೊಂಡಿದ್ದಾರೆ.

ಮೃತರನ್ನು ಕಕಮರಿ ಗ್ರಾಮದ 24 ವರ್ಷದ ಯುವಕ ಅಮೋಲ್ ಜೈಸಿಂಗ್ ಮತ್ತು ದೇಸರಹಟ್ಟಿ ಗ್ರಾಮದ 50 ವರ್ಷದ ವಿಠಾಬಾಯಿ ಕಾಮಕರ್ ಎಂದು ಗುರುತಿಸಲಾಗಿದೆ. ಈ ಘಟನೆ ಸಂಬಂಧ ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಂಗನವಾಡಿ ಕಾರ್ಯಕರ್ತೆಗೆ ಲಕ್ಷಾಂತರ ರೂ. ವಂಚನೆ; ದೂರು ದಾಖಲು

ಕಾರ್ಕಳ: ಮೇಲ್ವಾಚಾರಕಿ ಹುದ್ದೆಗೆ ನೇಮಕಾತಿ ಮಾಡಿಸಿ ಕೊಡುವುದಾಗಿ ಆಮಿಷವೊಡ್ಡಿ ಅಂಗನವಾಡಿ ಕಾರ್ಯಕರ್ತೆಗೆ ಲಕ್ಷಾಂತರ ರೂ. ವಂಚಿಸಿದ ಘಟನೆ ಕಾರ್ಕಳ ತಾಲೂಕಿನ ಮುಂಡ್ಕೂರು ಗ್ರಾಮದ ಸಚ್ಚೇರಿ ಪೇಟೆಯಿಂದ ವರದಿಯಾಗಿದೆ.

ಸಚ್ಚೇರಿಪೇಟೆಯ ಅಂಗನವಾಡಿ ಕಾರ್ಯಕರ್ತೆ ಶಶಿಕಲಾ ಎಂಬುವವರಿಗೆ ಬೆಂಗಳೂರಿನ ವೇಣುಗೋಪಾಲ ಎಂಬವರು ಅಂಗನವಾಡಿಯ ಮೇಲ್ವಾಚಾರಕಿ ಹುದ್ದೆಗೆ ನೇಮಕಾತಿ ಮಾಡಿಸಿ ಕೊಡುವುದಾಗಿ ತಿಳಿಸಿ 2 ಲಕ್ಷ ಹಣವನ್ನು ಕೇಳಿದ್ದು ಅದರಂತೆ ಶ್ರೀಮತಿ





ಶಶಿಕಲಾರವರು ಮುಂಡ್ಕೂರು ಗ್ರಾಮದ ಸಚ್ಚರೀಪೇಟೆ ಕೆನರಾ ಬ್ಯಾಂಕ್‌ನಲ್ಲಿರುವ ತನ್ನ ಖಾತೆಯಿಂದ ಮೊದಲ ಬಾರಿಗೆ ದಿನಾಂಕ 16/11/2021 ರಂದು ರೂಪಾಯಿ 80,000/– ರನ್ನು ವೇಣುಗೋಪಾಲನ ಅಣ್ಣ ವಿಶ್ವನಾಥರವರ ಬ್ಯಾಂಕ್ ಖಾತೆಗೆ ಹಣ ಕಳುಹಿಸಿಕೊಟ್ಟಿದ್ದು, ನಂತರ ದಿನಾಂಕ 24/11/2021 ರಂದು ರೂಪಾಯಿ 1,00,000/– ಲಕ್ಷ, ದಿನಾಂಕ 25/11/2021 ರಂದು ರೂಪಾಯಿ 25,000 ದಿನಾಂಕ 02/12/2021 ರಂದು ರೂಪಾಯಿ 55,003/– ದಿನಾಂಕ 14/12/2021 ರಂದು ರೂಪಾಯಿ 10,000/– ದಿನಾಂಕ 20/12/2021 ರಂದು ರೂಪಾಯಿ 10,000/– ಹೀಗೇ ಒಟ್ಟು 2,80,003/– ನಗದನ್ನು 5 ಬಾರಿ ಹಣವನ್ನು ವೇಣು ಗೋಪಾಲನ ಬ್ಯಾಂಕ್ ಖಾತೆಗೆ ಕಳುಹಿಸಿಕೊಟ್ಟಿದ್ದು ಅಲ್ಲದೇ ದಿನಾಂಕ 23/12/2021 ರಂದು ವೇಣುಗೋಪಾಲನು ಶ್ರೀಮತಿ ಶಶಿಕಲಾ ಇವರ ಮನೆಗೆ ಬಂದು ರಸ್ತೆ ಅಪಘಾತವಾಗಿ ಗಾಯಗೊಂಡ ತನ್ನ ಮಗಳ ಚಿಕಿತ್ಸೆ ಬಗ್ಗೆ ಸಾಲ ರೂಪದಲ್ಲಿ ಹಣ ಕೇಳಿದಂತೆ ಶ್ರೀಮತಿ ಶಶಿಕಲಾ ರವರು ರೂಪಾಯಿ 2,20,000/– ವನ್ನು ವೇಣಗೋಪಾಲನಿಗೆ ನೀಡಿದ್ದು, ಆತನು ಇದುವರೆಗೂ ವಾಪಾಸು ನೀಡದೇ ಹಣದ ಬಗ್ಗೆ ವಿಚಾ–ರಿಸಿದ ಶ್ರೀಮತಿ ಶಶಿಕಲಾರವರ ಮೊಬೈಲ್ ನಂಬ್ರ ಬ್ಲಾಕ್ ಮಾಡಿದ್ದು, ಇವರಿಗೆ ವಂಚನೆ ಮಾಡಿರುವುದಾಗಿ ನೀಡಿದ ದೂರಿನಂತೆ ಕಾರ್ಕಳ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಂತ್ಯ ಸಂಸ್ಕಾರಕ್ಕೆ ಕೆಲವೇ ನಿಮಿಷ ಬಾಕಿ ಇರುವಾಗ ಎಚ್ಚರಗೊಂಡ ಯುವಕ



ಮಧ್ಯಪ್ರದೇಶ: ಅಲ್ಲಿ ಎಲ್ಲವೂ ರೆಡಿಯಾಗಿತ್ತು. ಸಂಬಂಧಿಕರು, ನೆರೆಹೊರೆಯವರೆಲ್ಲಾ ಸೇರಿದ್ದರು. ಚಟ್ಟದ ಮೇಲೆ ಶವವೂ ಮಲಗಿ–ತ್ತು. ಇನ್ನೇನೂ ಅಂತ್ಯ ಸಂಸ್ಕಾರ ಮುಗಿಸಬೇಕು ಅನ್ನುವಷ್ಟರಲ್ಲಿ ಸತ್ತಿದ್ದ ಯುವಕ ಅಲುಗಾಡಲು ಆರಂಭಿಸಿದ್ದಾನೆ. ಇದು ಯಾವುದೋ ಸಿನಿಮಾದ ಸೀನ್ ಅಲ್ಲ. ರಿಯಲ್ ಆಗಿ ನಡೆದಿರೋ ಮೈ ಜುಮ್ಮೆನ್ನಿಸೋ ಘಟನೆ ನಡೆದಿರುವುದು ಮಧ್ಯಪ್ರದೇಶದ ಮೊರೆನಾದಲ್ಲಿ.

ಅಂತಿಮ ವಿಧಿವಿಧಾನಗಳಿಗೆ ಕೆಲವೇ ಕೆಲವು ನಿಮಿಷ ಬಾಕಿ ಇರುವಾಗ ವ್ಯಕ್ತಿಯೊಬ್ಬ ಚಿತಾಗಾರದಲ್ಲಿ ಎಚ್ಚರಗೊಂಡಿದ್ದಾನೆ. ತಕ್ಷಣವೇ ಬೆಚ್ಚಿಬಿದ್ದ ಸಂಬಂಧಿಕರಲ್ಲಿ ಕೆಲವರು ಓಡಿ ಹೋಗಿದ್ದಾರೆ. ಇನ್ನೂ ಕೆಲವರು ಸತ್ತಿದ್ದಾನೆ ಎಂದು ನಂಬಿದ್ದವನ ಉಸಿರಾಟ ಕಂಡು ಬೆಚ್ಚಿ ಬಿದ್ದಿದ್ದಾರೆ. ಮೂಗು, ಬಾಯಿಯ ಮೇಲೆ ಬೆರಳುಗಳನ್ನ ಇಟ್ಟು ವ್ಯಕ್ತಿಯ ಉಸಿರಾಟವನ್ನು ಪರೀಕ್ಷಿಸಿದ್ದಾರೆ.

ಜೀತು ಪ್ರಜಾಪತಿ ಎಂಬ ಯುವಕ ಹಲವು ದಿನಗಳಿಂದ ಕಿಡ್ನಿ ಸಮಸ್ಯೆಗಳಿಂದ ಬಳಲುತ್ತಿದ್ದ. ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದರಿಂದ ಈತ ಸತ್ತೇ ಹೋದ ಎಂದು ಮನೆಯವರು, ಸಂಬಂಧಿಕರು ನಂಬಿದ್ದಾರೆ. ಸಂಬಂಧಿಕರು, ನೆರೆಹೊರೆಯವರು ಜೀತು ಪ್ರಜಾಪತಿ ಅವರ ಅಂತ್ಯಕ್ರಿಯೆಗೆ ಸಿದ್ಧತೆಯನ್ನು ಆರಂಭಿಸಿದ್ದಾರೆ. ಮೊರೆನಾದ ಶಾಂತಿ–ಧಾಮಕ್ಕೆ ಶವವನ್ನು ಎತ್ತಿಕೊಂಡು ಹೋಗಿದ್ದಾರೆ.

ಶಾಂತಿಧಾಮದಲ್ಲಿ ಅಂತಿಮ ವಿಧಿವಿಧಾನಗಳು ಆರಂಭವಾಗಿದೆ. ಇನ್ನೇನೂ ಅಂತ್ಯಸಂಸ್ಕಾರ ನೆರವೇರಬೇಕು ಅನ್ನುವಷ್ಟರಲ್ಲಿ ದೇಹವು ಇದ್ದಕ್ಕಿದ್ದಂತೆ ಉಸಿರಾಡಲು ಆರಂಭಿಸಿದೆ. ತಕ್ಷಣವೇ ಸ್ಥಳಕ್ಕೆ ವೈದ್ಯರನ್ನು ಕರೆಸಿ ತಪಾಸಣೆ ನಡೆಸಲಾಗಿದೆ. ವೈದ್ಯರು ಪರೀಕ್ಷಿಸಿದಾಗ ವ್ಯಕ್ತಿಯ ಹೃದಯ ಇನ್ನೂ ಬಡಿಯುತ್ತಿದೆ ಅನ್ನೋದು ಗೊತ್ತಾಗಿದೆ. ಸತ್ತವನು ಇನ್ನೂ ಬದುಕಿದ್ದಾನೆ ಅನ್ನೋದು ಗೊತ್ತಾದ ಮೇಲೆ ವ್ಯಕ್ತಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ.

## ವಿದ್ಯುತ್ ಬಿಲ್ ಕಟ್ಟಲ್ಲಾ ಎಂದವರಿಗೆ ಪವರ್ ಕಟ್ ಪ್ರಯೋಗಕ್ಕೆ ಮುಂದಾದ ಇಂಧನ ಇಲಾಖೆ

ಬೆಂಗಳೂರು: ಕರೆಂಟ್ ಬಿಲ್ ಕಟ್ಟಲ್ಲಾ ಎಂದವರಿಗೆ ಇಂಧನ ಇಲಾಖೆಯಿಂದ ಬಿಗ್ ಶಾಕ್ ನೀಡಿದೆ. ವಿದ್ಯುತ್ ಬಿಲ್ ಪಾವತಿಸದಿದ್ರೆ ಮುಲಾಜಿಲ್ಲದೇ ಪವರ್ ಕಟ್ ಮಾಡಲು ನಿರ್ಧ–ರಿಸಿದೆ.

ರಾಜ್ಯದ ಎಸ್ಕಾಂಗಳಿಗೆ ಇಂಧನ ಇಲಾಖೆಯಿಂದ ಸೂಚನೆ ಹೊರಡಿಸಿದೆ. ಬಿಲ್ ಕಟ್ಟಲ್ಲ ಎಂದು ವಾಗ್ವಾದಕ್ಕಿಳಿದವರಿಗೆ ಪವರ್ ಕಟ್ ಮಾಡಿ ಎಂದು ಹೇಳಿದೆ.

ಸಿದ್ದರಾಮಯ್ಯ ಸರ್ಕಾರ



ಚುನಾವಣೆಗೂ ಮುನ್ನ ಗ್ಯಾರಂಟಿ ಯೋಜನೆಯನ್ನು ಜಾ–ರಿಗೊಳಿಸುವುದಾಗಿ ಪ್ರಚಾರ ಮಾಡಿತ್ತು. ಅದರಲ್ಲಿ 200 ಯುನಿಟ್ ವಿದ್ಯುತ್ ಉಚಿತ ಎಂಬುದನ್ನು ಸಾರಿ ಸಾರಿ ಹೇಳಿತ್ತು. ಹೀಗಾಗಿ ಸಿದ್ದರಾಮಯ್ಯ ಸರ್ಕಾರ ಆಡಳಿತಕ್ಕೆ ಬಂದಂತೆ ಜನರು ವಿದ್ಯುತ್ ಬಿಲ್ ಕಟ್ಟಲು ಹಿಂದೇಟು ಹಾಕಿದ್ದಾರೆ. ಲೈನ್ ಮ್ಯಾನ್ಗಳು ಬಿಲ್ ಕಟ್ಟಿ ಎಂದು ಹೇಳಿದರೆ ಗ್ರಾಹಕರು ಅವರ ಮೇಲೆಯೇ ದರ್ಪ ತೋರುತ್ತಿದ್ದಾರೆ.

ಹೀಗಾಗಿ ವಿದ್ಯುತ್ ಇಲಾಖೆಗೆ ಇದು ದೊಡ್ಡ ತಲೆನೋವಾಗಿ ಪರಿಣಮಿಸಿದೆ.

ಹೀಗಾಗಿ ಇಂಧನ ಇಲಾಖೆ ಸೂಕ್ತ ನಿರ್ಧಾರ ತೆಗೆದುಕೊಂಡು ವಿದ್ಯುತ್ ಬಿಲ್ ಕಟ್ಟಲ್ಲ ಎಂದವ–ರಿಗೆ ಪವರ್ ಕಟ್ ಪ್ರಯೋಗಿಸಲು ಮುಂದಾಗಿದೆ.

ಎಚ್ಚರ! ಲೈಸೆನ್ಸ್ ರದ್ದಾಗುತ್ತೆ: ಅಧಿಕೃತ ಆದ–ೕಶ ಹೊರಬೀಳುವರೆಗೂ ಬಿಲ್ ಕಟ್ಟಲೇಬೇಕು ಎಂದು ಇಂಧನ ಇಲಾಖೆ ಹೇಳಿದೆ. ಬಿಲ್ ಕಟ್ಟದಿದ್ರೆ, ವಿದ್ಯುತ್ ಸಂಪರ್ಕ ಕಡಿತಗೊಳಿಸಲು ಸೂಚನೆ ನೀಡಿದೆ. ಎರಡು ತಿಂಗಳು ಬಾಕಿ ಇರುವ ಮನೆಗಳಲ್ಲಿ ಪವರ್ ಕಟ್. 3 ತಿಂಗಳು ಬಿಲ್ ಬಾಕಿ ಇದ್ರೆ ಲೈಸೆನ್ಸ್ ರದ್ದು ಮಾಡಲು ಮುಂದಾಗಿದೆ. ಇದರ ನಡುವೆ ರಾಜ್ಯದ ಜನತೆ 200 ಯೂನಿಟ್ ಉಚಿತ ವಿದ್ಯುತ್ ಆದೇಶಕ್ಕಾಗಿ ಕಾಯುತ್ತಿದ್ದಾರೆ.

## ಸತೀಶ್ ಜಾರಕಿಹೊಳಿ ಫೌಂಡೇಶನ್ ನಿಂದ ಇಬ್ಬರಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ



ಬೆಳಗಾವಿ: ಕೆಪಿಸಿಸಿ ಕಾರ್ಯಾಧ್ಯಕ್ಷ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರ ಜನ್ಮದಿನದ ನಿಮಿತ್ತ ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಇಬ್ಬರು ಜನ–ರಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿಸಲಾಯಿತು.

ಈ ಸಂದರ್ಭದಲ್ಲಿ ಸತೀಶ್ ಜಾರಕಿಹೊಳಿ ಫೌಂಡೇಶನ್ ಸದಸ್ಯ ಜುಬೇರ್ ಮಿರ್ಜಾಬಾಯಿ ಹಾಗೂ ನೇತ್ರ ದರ್ಶನಿ ಹಾಸ್ಪಿಟಲ್ ವೈದ್ಯರು ಉಪಸ್ಥಿತರಿದ್ದರು.

## 30 ವರ್ಷದ ಸೇವೆ ತೃಪ್ತಿ ತಂದಿದೆ: ಪ್ರಾ.ತುಗಶೆಟ್ಟಿ





ಮೋಳೆ: ಮಹಾತಪಸ್ವಿಗಳು ಸ್ಥಾಪಿಸಿರುವ ಕಾಗವಾಡ ಶಿವಾನಂದ ಮಹಾವಿದ್ಯಾಲಯದಲ್ಲಿ ಕಳೆದ 30 ವರ್ಷಗಳಿಂದ ಸೇವೆ ಸಲ್ಲಿಸಿ ಇಂದು ನಿವೃತ್ತರಾಗುತ್ತಿರುವ ಪ್ರಾಚಾರ್ಯ ವ್ಹಿ.ಎಸ್.ತುಗಶೆಟ್ಟಿ ಅವರ ಬಿಳ್ಕೋಡುವ ಸಮಾರಂಭ ಪೂಜ್ಯರ ದಿವ್ಯ ಸಾನಿಧ್ಯದಲ್ಲಿ ಜರುಗಿತು.

ಬುಧವಾರ ದಿ. 31 ರಂದು ಕಾಗವಾಡ ಶಿವಾನಂದ ಮಹಾವಿದ್ಯಾಲಯದಲ್ಲಿ ಸಭಾಂಗಣದಲ್ಲಿ ಕಾಗವಾಡ ಗುರುದೇವಾಶ್ರಮದ ಏಕನ್ಯಾಸಧಾರಿಗಳಾದ ಯತೀಶ್ವರಾನಂದ ಸ್ವಾಮಿಜಿ ಹಾಗೂ ಟಾಕಳಿಯ ಶಿವದೇವ ಸ್ವಾಮಿಜಿಯವರ ದಿವ್ಯ ಸಾನಿಧ್ಯದಲ್ಲಿ ಬಿಳ್ಕೋಡುವ ಸಮಾರಂಭ ಜರುಗಿತು.

ಕಳೆದ 30 ವರ್ಷಗಳಿಂದ ಉಪನ್ಯಾಸಕರಾಗಿ, ಪ್ರಾಚಾರ್ಯರಾಗಿ ವಯೋನಿವೃತ್ತಿ ಹೊಂದಿರುವ ವ್ಹಿ. ಎಸ್.ತುಗಶೆಟ್ಟಿ ಹಾಗೂ ಅವರ ಧರ್ಮಪತ್ನಿ ಡಾ. ಜಯಶ್ರೀ ನಾಗರಾಳೆಯವರನ್ನು ಸ್ವಾಮಿಜಿಯವರು ಶಾಲು ಹೊದಿಸಿ ಸತ್ಕರಿಸಿ ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ವ್ಹಿ.ಎಸ್.ತುಗಶೆಟ್ಟಿ ಮಾತನಾಡುತ್ತಾ ಮಹಾತಪಸ್ವಿಗಳು ಸ್ಥಾಪಿಸಿರುವಂತಹ ಶಿವಾನಂದ ಮಹಾವಿದ್ಯಾಲಯದಲ್ಲಿ ಸೇವೆ ಸಲ್ಲಿಸುವುದೇ ಒಂದು ಪುಣ್ಯದ ಕಾರ್ಯವಾಗಿದೆ ಎಂದು ಹೇಳಿದರು.

ಸೇವಾ ಮನೋಭಾವನೆಯಿಂದ ಇಲ್ಲಿಯವರೆಗೆ ಕಾರ್ಯನಿರ್ವಹಿಸಿದ ನನಗೆ ಸಂಸ್ಥೆಯ ಆಡಳಿತ ಮಂಡಳಿಯವರು, ಸಹದ್ಯೋಗಿಗಳು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳ ಸಹಕಾರ ಅತ್ಯಮೂಲ್ಯವಾಗಿ–ತ್ತು. ನನ್ನ ಅಧಿಕಾರಿವಧಿಯಲ್ಲಿ ಸಹಾಯ ಸಹಕಾರ ನೀಡಿದ ಸರ್ವರಿಗೂ ಚಿರಋಣಿಯಾಗಿದ್ದೇನೆ. ಅದರಂತೆ ಈ ಸಂಸ್ಥೆಯ ಹೆಚ್ಚಿನ ಉನ್ನತಿಗಾಗಿ ತಾವು ಶ್ರಮಿಸಲು ಸಿದ್ಧನಿರುವುದಾಗಿ ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಯತೀಶ್ವರಾನಂದ ಸ್ವಾಮಿಜಿ ಮಾತನಾಡಿ ವ್ಹಿ.ಎಸ್. ತುಗಶೆಟ್ಟಿಯವರು ಕಳೆದ 30 ವರ್ಷಗಳಿಂದ ನಿಸ್ವಾರ್ಥ ಸೇವೆ ಸಲ್ಲಿಸಿದ್ದಾರೆ. ಎನ್.ಎಸ್.ಎಸ್., ಎನ್.ಸಿ.ಸಿ. ವಿಭಾಗದ 400 ವಿದ್ಯಾರ್ಥಿಗಳು ಇಂದು ದೇಶ ಸೇವೆ ಸಲ್ಲಿಸಲು ಯೋಧರಾಗಿ ಕಾರ್ಯ ನಿರ್ವಹಿಸುತ್ತಿರುವುದೇ ಪ್ರಾಚಾರ್ಯ ವ್ಹಿ. ಎಸ್.ತುಗಶೆಟ್ಟಿಯವರ ನಿಸ್ವಾರ್ಥ ಸೇವೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಬಣ್ಣಿಸಿದರು. ನಿವೃತ್ತಿ ನಂತರವು ಸಂಸ್ಥೆಗೆ ಅವರ ಸೇವೆ ನಿರಂತರವಾಗಿ ಸಾಗಲಿದೆ ಎಂದು ಸ್ವಾಮಿಜಿ ಹೇಳಿದರು.

ಇದೇ ಸಮಯದಲ್ಲಿ ಶಿವಾನಂದ ಮಹಾವಿದ್ಯಾಲಯ ಆಡಳಿತ ಮಂಡಳಿ, ಕಾಗವಾಡ ಗುರುದೇವಾಶ್ರಮ ಸೇರಿದಂತೆ ಅನೇಕ ಸಂಘ ಸಂಸ್ಥೆಗಳ ವತಿಯಿಂದ ವ್ಹಿ.ಎಸ್.ತುಗಶೆಟ್ಟಿಯವರನ್ನು ಸನ್ಮಾನಿಸಲಾಯಿತು. ಅನೇಕ ವಿದ್ಯಾರ್ಥಿಗಳು, ಉಪನ್ಯಾಸಕರು ನಿವೃತ್ತಿ ಹೊಂದಿರುವ ತುಗಶೆಟ್ಟಿಯವರ ಕುರಿತು ಮಾತನಾಡಿದರು.

ಈ ಸಮಯದಲ್ಲಿ ಪ.ಪೂ. ಶ್ರೀ ಯತೀಶ್ವರಾನಂದ ಸ್ವಾಮೀಜಿ, ಪ.ಪೂ.ಶ್ರೀ ಶಿವದೇವ ಸ್ವಾಮಿಜಿ, ಸಂಸ್ಥೆಯ ಕಾರ್ಯದರ್ಶಿ ಬಿ.ಎ.ಪಾಟೀಲ, ಉಪಪ್ರಾಚಾರ್ಯ ಎಸ್.ಎ.ಕರ್ಕಿ, ಪಿ.ಬಿ.ನಂದ್ಯಾಳೆ, ಡಾ. ಡಿ.ಡಿ.ನಗರಕರ, ಡಾ. ಜಯಶ್ರೀ ನಾಗರಾಳೆ, ಡಾ. ಎಸ್.ಓ.ಹಲಸಗಿ, ಡಾ. ಎಂ.ಬಿ.ಹೂಗಾರ, ಪ್ರೋ. ಬಿ.ಎನ್.ಪಾಟೀಲ, ಎಸ್.ಬಿ.ಪಾಟೀಲ, ಬಿ.ಎ.ಪಾಟೀಲ, ಆರ್.ಎಸ್.ನಾಗರೆಡ್ಡಿ, ಪ್ರೋ. ಬಾಗನೆ, ಡಾ. ಆರ್.ಎಸ್.ಕಲ್ಲೋಳಿಕರ, ಪ್ರೋ. ಬಿ.ಡಿ.ದಾಮಣ್ಣವರ, ಪ್ರೋ. ಎಂ.ಎಲ್. ಕೋರೆ, ಜೆ.ಕೆ.ಪಾಟೀಲ, ವ್ಹಿ.ಬಿ.ಬುರ್ಲಿ, ಎ.ಎ.ಪಾಟೀಲ, ಪ್ರೋ.ಎಸ್.ಪಿ.ತಳವಾರ, ಡಾ. ಎ.ಎಂ.ಜಕ್ಕನ್ನವರ ಸೇರಿದಂತೆ ನಿವೃತ್ತ ಪ್ರಾಚಾರ್ಯರು, ಉಪನ್ಯಾಸಕರು, ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು ಅಪಾರ ಸಂಖ್ಯೆಯಲ್ಲಿ ಇದ್ದರು.

ಪ್ರೋ. ಜೆ.ಕೆ.ಪಾಟೀಲ ಸ್ವಾಗತಿಸಿದರು. ಪ್ರೋ. ಎಸ್.ಪಿ.ತಳವಾರ ವಂದಿಸಿದರು. ಡಾ. ಎ.ಎಂ.ಜಕ್ಕನ್ನವರ ಕಾರ್ಯಕ್ರಮ ನಿರೂಪಿಸಿದರು.

## ಶಿಕ್ಷಕರ ವರ್ಗಾವಣೆ ಮುಂದುವರಿಸಲು ಅನುಮತಿ ನೀಡಿದ ಸರ್ಕಾರ

ಬೆಂಗಳೂರು: ನೂತನ ಸರ್ಕಾರವು ಅಧಿಕಾರಕ್ಕೆ ಬರುತ್ತಿದ್ದಂತೆ ಸರ್ಕಾರಿ ಶಾಲಾ ಶಿಕ್ಷಕರಿಗೆ ಸಿಹಿ ಸುದ್ದಿಯನ್ನು ನೀಡಿದೆ. ಕಳೆದ ವರ್ಷ ಹೆಚ್ಚುವರಿ ಶಿಕ್ಷಕರ ಮಾಹಿತಿ ಸಲ್ಲಿಕೆಯಲ್ಲಿ ಕಂಡುಬಂದ ತಾಂತ್ರಿಕ ದೋಷ ಹಾಗೂ ಚುನಾವಣಾ ನೀತಿ ಸಂಹಿತೆ ಸೇರಿ ಹಲವು ಕಾರಣಗಳಿಂದ ಸ್ಥಗಿತಗೊಂಡಿದ್ದ ಶಿಕ್ಷಕರ ವರ್ಗಾವಣೆಯನ್ನು ಮುಂದುವ–ರಿಸಲು ಅನುಮತಿ ನೀಡಿದೆ.

ಈ ಸಂಬಂಧ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿಯು ಇಲಾಖೆ ಆಯುಕ್ತರಿಗೆ ಪತ್ರ ಬರೆದು ಸೂಚನೆ ನೀಡಿದ್ದಾರೆ. 2022–23ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಹೆಚ್ಚುವರಿ ಹಾಗೂ ಸಾಮಾನ್ಯ ವರ್ಗಾವಣೆಯನ್ನು ಗಣಕೀಕೃತ ಕೌನ್ಸೆಲಿಂಗ್ ಮೂಲಕ ಪ್ರಕ್ರಿಯೆಯನ್ನು



ಮುಂದುವರಿಸಲು ತಿಳಿಸಿದ್ದಾರೆ. ಇಂದೆರಡು ದಿನಗಳಲ್ಲಿ ವಿಸತವಾದ ವೇಳಾಪಟ್ಟಿ ಪ್ರಕಟಿಸುವ ಸಾಧ್ಯತೆಗಳಿವೆ.

2022–23ನೇ ಸಾಲಿನಲ್ಲಿ ವರ್ಗಾವಣೆ ಕಾಯ್ದೆ/ನಿಯಮಗಳಿಗೆ ತಿದ್ದುಪಡಿ ತಂದು ಶಿಕ್ಷಕ ಸ್ನೇಹಿ ವಗಾವಣೆಗಳನ್ನು ಕೈಗೊಳ್ಳಲು ತೀರ್ಮಾನಿಸಿ ಅಧಿಸೂಚನೆ ಹೊರಡಿಸಿ ಪ್ರಕ್ರಿಯೆಗಳನ್ನು ಆರಂಭಿಸಲಾಗಿದೆ. ವರ್ಗಾವಣೆಯ ಮೊದಲನೇ ಹಂತವಾದ ಹೆಚ್ಚುವರಿ ಶಿಕ್ಷಕರ ಶಿಕ್ಷಕರ ಕೌನ್ಸೆಲಿಂಗ್ ಪ್ರಕ್ರಿಯೆಯಲ್ಲಿ ಕೆಲವು ತಾಂತ್ರಿಕ ನ್ಯೂನ್ಯತೆಗಳು ಕಂಡುಬಂದಿದ್ದರಿಂದ ಹೆಚ್ಚುವರಿ ಶಿಕ್ಷಕರ ಕೌನ್ಸೆಲಿಂಗ್ ಅನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು. ಇದೀಗ ಮುಂದುವರಿಸುವಂತೆ ಸೂಚನೆ ನೀಡಿದ್ದಾರೆ.

75 ಸಾವಿರ ಅರ್ಜಿ ಸಲ್ಲಿಕೆ: ವರ್ಗಾವಣೆ ಬಯಸಿ 75 ಸಾವಿರ ಶಿಕ್ಷಕರು ಅರ್ಜಿ ಸಲ್ಲಿಸಿದ್ದು, ಕನಿಷ್ಠ 30 ಸಾವಿರಕ್ಕೂ ಹೆಚ್ಚಿನ ಶಿಕ್ಷಕರು ವರ್ಗಾವಣೆಯ ಲಾಭ ಪಡೆಯಲಿದ್ದಾರೆ.

ಆದ್ದರಿಂದ ಹೆಚ್ಚುವರಿ ಶಿಕ್ಷಕರ ಕೌನ್ಸೆಲಿಂಗ್ ಹಾಗೂ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಗಳನ್ನು ಮುಂದುವರಿಸುವಂತೆ ಸೂಚಿಸಿದ್ದಾರೆಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಧೀನ ಕಾರ್ಯದರ್ಶಿ ಮಹಾಂತಯ್ಯ ಎಸ್. ಹೊಸಮಠ ಆದೇಶ ಹೊರಡಿಸಿದ್ದಾರೆ.

2022ರ ಡಿಸೆಂಬರ್ 22ರಂದು ಶಿಕ್ಷಣ ಇಲಾಖೆಯು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಅಧಿಸೂಚನೆ ಹೊರಡಿಸಿತ್ತು. 2023ರ ಫೆ. 28ಕ್ಕೆ ಪ್ರಕ್ರಿಯೆ ಪೂರ್ಣಗೊಳಿಸುವ ವೇಳಾಪಟ್ಟಿಯನ್ನು ಕೂಡ ಪ್ರಕಟಿಸಿತ್ತು. ಆದರೆ, ಹೆಚ್ಚುವರಿ ಶಿಕ್ಷಕರ ವರ್ಗಾವಣೆಯಲ್ಲಿ ದಾಖಲೆ ಸಲ್ಲಿಕೆಯಲ್ಲಿ ತಾಂತ್ರಿಕ ದೋಷಗಳು ಕಂಡುಬಂದವು. ಇದರಿಂದ ಮಾರ್ಚ್ 10ರ ವರೆಗೆ ಅವಕಾಶ ಕಲ್ಪಿಸಿತ್ತು. ಬಳಿಕ ಎರಡನೇ ಬಾರಿ ಮುಂದೂಡಲಾಗಿತ್ತು. ಕೊನೆಗೆ ವಿಧಾನಸಭಾ ಚುನಾವಣಾ ನೀತಿ ಸಂಹಿತೆ ಜಾರಿಗೊಂಡಿದ್ದರಿಂದ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು.

## ಉಚಿತ ಆರೋಗ್ಯ ತಪಾಸಣಾ ಶಿಬಿರ



ಬೆಳಗಾವಿ: 1 ಜೂನ್ 2023 ರಂದು ಮುಂಜಾನೆ 7 ದಿಂದ 11 ಂಌ ದ ವರೆಗೆ ಬೆಳಗಾವಿ ರಾಮತೀಥ–ೕ ನಗರದ ಶ್ರೀ ಗಣೇಶ ಮಂದಿರ ಗಣೇಶ ವೃತ್ತದ ಹತ್ತಿರ ಶಿಬಿರದಲ್ಲಿ ಸುರೇಶ ಅಂಗಡಿಯವರ ಧರ್ಮ ಪತ್ನಿ ಹಾಗೂ ಸಂಸರಾದ ಮಂಗಲಾ ಅಂಗಡಿ ಯವರು ಉದ್ಘಾಟಿಸಿದರು. ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದ ಸುರೇಶ ಯಾದವ ಪೌಂಡೇಷನ್ ಅಧ್ಯಕ್ಷರಾದ ಸುರೇಶ ಯಾದವ

ಈ ವೈದ್ಯಕೀಯ ಉಚಿತ ಶಿಬಿರಗಳು ಬಡ ಜನರ ಜನಸಂಖ್ಯೆಯ ಒಟ್ಟಾರೆ ದೈಹಿಕ ಪರೀಕ್ಷೆಗಳನ್ನು ಒದಗಿಸುತ್ತವೆ.

ಇದರಲ್ಲಿ Sugar, BP, ಕಣ್ಣುಗಳು ಮುಂತಾದ ಪ್ರಮುಖ ಅಂಗಗಳ ಕಾರ್ಯನಿರ್ವಾಹಣೆಯ ಮೌಲ್ಯಮಾಪನ ಕಡಿಮೆ ಆದಾಯವನ್ನು ಗಳಿಸುವ ಮತ್ತು ಆಸ್ಪತ್ರೆಗಳು ನೀಡುವ ದುಬಾರಿ ಅರೋಗ್ಯ ಸೇವೆಗಳನ್ನು ಪಡೆಯಲು ಸಾಧ್ಯವಾಗದ ಬಡ ಜನಸಂಖ್ಯೆಗೆ ಉಚಿತ ವೈದ್ಯಕಿಂ–ಯ ಶಿಬಿರಗಳು ಅತ್ಯಂತ ಸಹಾಯಕವಾಗಿವೆ ಎಂದರು.

ಉಚಿತ ಶಿಬಿರವನ್ನು ಜೀವ ಉಳಿಸುವ ಕಾರ್ಯಕ್ರಮವೆಂದು ಪರಿಗಣಿಸಬಹುದು.

ಇದೆ ಸಂಧರ್ಭದಲ್ಲಿ ಮಾಜಿ KMDC ಅಧ್ಯಕ್ಷರಾದ ಮುಕ್ತಾರ ಪಠಣ ಅವರು ಮಾತನಾಡುತ್ತಾ ಸುರೇಶ ಅಂಗಡಿ ಅವರನ್ನು ನನ್ನ ತಂದೆಯ ಸ್ಥಾನದಲ್ಲಿ ನೋಡುತ್ತಿದ್ದೆ. ಅವರು ಮಾಡಿದ ಸಹಾಯವನ್ನು ನೆನೆದು ಕಣ್ಣೀರುಹಾಕಿದರು.

ರಾಮತೀರ್ಥ ನಗರದ ನಗರಸೇವಕರಾದ ಹನುಮಂತ ಕೊಂಗಲಿ, ಈರಯ್ಯ ಖೋತ್, ಮಹಾಂತೇಶ್ ಲಕ್ಕುಂಡಿ, ಅನ್ನಸಾಹೇಬ ದೇಸಾಯಿ, ಎನ್ ಬಿ ನಿರ್ವಾಣಿ, ಕೇದಾರ ಜೋರಾಪುರ, ವಿಲಾಸ ಕೆರೂರ ಡಾ :ಮಾಸ್ತಿಹೋಳಿ, ಡಾ :ದಯಾನಂದ ಧನವಾಡ, ಡಾ :ಅನುಪಮುನವಳ್ಳಿ, ಡಾ :ತೇಜಸ್ವಿನಿ ಪಾಟಿಲ, ದತ್ತಾ ಸಾಲುಂಕೆ,ಜಗದೀಶ ಪಾಟೀಲ,ಮೌನೇಶ ಅವನೋಜಿ,ಶಂಭು ರಾಚಣ್ಣವರ,ಪ್ರಿಯಾಂಕಾ ಉಂಡಿ,ನಾಗರತ್ನ ಮಾಕಿ ,ವಿನೋಧಾ ಕುಂಬಾರ,ಅಂಜನಾ ಕೊಡ್ಲಿ ಹಾಗೂ ಸುತ್ತಮುತ್ತಲಿನ ನೂರಾರು ರಹವಾಸಿಗಳು ಉಚಿತ ಶಿಬಿರದ ಉಪಯೋಗ ತೆಗೆದುಕೊಂಡರು.

## ಮರಕ್ಕೆ ಕಾರು ಡಿಕ್ಕಿ: ಕುಟುಂಬದ ನಾಲ್ವರು ಸಜೀವ ದಹನ



ಭೋಪಾಲ್: ಕಾರೊಂದು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಇತ್ತೀಚಿಗೆ ಮದುವೆಯಾಗಿದ್ದ ದಂಪತಿ ಸೇರಿದಂತೆ ಕುಟುಂಬದ ನಾಲ್ವರು ಸಜೀವ ದಹನವಾಗಿರುವ ಘಟನೆ ಮಧ್ಯಪ್ರದೇಶ ಹರ್ದಾ ಜಿಲ್ಲೆಯಲ್ಲಿ ಘಟನೆ ನಡೆದಿದೆ.

ಕಾರು ವೇಗವಾಗಿ ಬಂದು ಮರಕ್ಕೆ ಗುದ್ದಿದ ಪರಿಣಾಮ ಕಾರಿಗೆ ಬೆಂಕಿ ಹತ್ತಿಕೊಂಡು ಕಾರಿನಲ್ಲಿದ್ದ ಮೂವರು ಪುರುಷರು ಮತ್ತು ಒರ್ವ ಮಹಿಳೆ ಜೀವಂತವಾಗಿ ಸುಟ್ಟುಹೋಗಿದ್ದಾರೆ. ಮದುವೆಗೆ ತೆರಳಿದ್ದ ಕುಟುಂಬಸ್ಥರು ಮನೆಗೆ ಹಿಂತಿರುಗುವ ವೇಳೆ ಘಟನೆ ನಡೆದಿದ್ದು, ಆರು ತಿಂಗಳ ಹಿಂದೆ ವಿವಾಹವಾಗಿದ್ದ ದಂಪತಿಗಳು ದುರಂತದಲ್ಲಿ ಸಾವನ್ನಪ್ಪಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ತಿಳಿದ ತಕ್ಷಣ ಪೊಲೀಸರು ಅಗ್ನಿಶಾಮಕ ದಳದೊಂದಿಗೆ (Fire Brigade) ಸ್ಥಳಕ್ಕಾಗಮಿಸಿದ್ದು, ಬೆಂಕಿಯಲ್ಲಿ ಬೆಂದಿದ್ದ ದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲೆಯ ತಿಮರ್ನಿ ಆರೋಗ್ಯ ಸಮುದಾಯ ಕೇಂದ್ರಕ್ಕೆ ಕಳುಹಿಸಲಾಯಿತು.

ಅಪಘಾತದಲ್ಲಿ ಮೃತಪಟ್ಟವರನ್ನು ಅಖಿಲೇಶ್ ಕುಶ್ವಾಹ, ಗೋಲು ಚೌಧರಿ, ರಾಕೇಶ್ ಕುಶ್ವಾಹ ಮತ್ತು ಅವರ ಪತ್ನಿ ಶಿವಾನಿ ಎಂದು ಗುರುತಿಸಲಾಗಿದೆ. ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089